ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ
ಪ್ರಾದೇಶಿಕ ಕನ್ನಡ ದಿನಪತ್ರಿಕೆ
ಸಂಪಾದಕರು: ರಮೇಶರೆಡ್ಡಿ | 9448 604450
Mallammanudi Regional News Paper | Editor: Ramesh Reddy | RNI NO:KARKAN/2011/48371
VOLUME-13 ಸಂಪುಟ:13 | ISSUE- ಸಂಚಿಕೆ: 21 | PAGE- ಪುಟ 8 | ಭಾನುವಾರ 23.02.2025 | RS.ಬೆಲೆ 2/-

## ಇಂದು ಭಾರತ-ಪಾಕ್ ನಡುವೆ ಮಹಾ ಕಾಳಗ




ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಫೆ.22: ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಬಹು ನಿರೀಕ್ಷಿತ ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಹಾಗೂ ಪಾಕಿಸ್ತಾನ ನಡುವಿನ ಹೈವೋಲ್ಟೇಜ್ ಪಂದ್ಯ ದುಬೈನ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ರವಿವಾರ ನಡೆಯಲಿದೆ.

ರೋಹಿತ್‌ಶರ್ಮಾ ನಾಯಕತ್ವದ ಭಾರತ ತಂಡ ಬುಧವಾರ ಬಾಂಗ್ಲಾದೇಶ ವಿರುದ್ಧ ಆರು ವಿಕೆಟ್ ಗಳ ಗೆಲುವಿನೊಂದಿಗೆ ಶುಭಾರಂಭ ಮಾಡಿದ್ದರೆ, ಪಾಕಿಸ್ತಾನ ನ್ಯೂಜಿಲೆಂಡ್ ವಿರುದ್ಧ 60 ರನ್ ಗಳ ಹೀನಾಯ ಸೋಲಿನಿಂದ ಕಂಗೆಟ್ಟಿದೆ. ಗ್ರೂಪ್ ಎನಲ್ಲಿ ಸೆಮಿಫೈನಲ್ ಪ್ರವೇಶಿಸಲು ಪಾಕಿಸ್ತಾನಕ್ಕೆ ಈ ಪಂದ್ಯ ಮಹತ್ವದ್ದಾಗಿದೆ. ಒಂದು ವೇಳೆ ಭಾರತ ಗೆಲುವು ಸಾಧಿಸಿದರೆ ಬಹುತೇಕ ಸೆಮಿಫೈನಲ್ ಪ್ರವೇಶಿಸಲಿದೆ.

2023ರ ವಿಶ್ವಕಪ್ ನಲ್ಲಿ ಅಹಮದಾಬಾದ್ ನಲ್ಲಿ ನಡೆದ ಪಂದ್ಯವೇ ಇವರಿಬ್ಬರ ನಡುವಿನ ಕೊನೆಯ ಪಂದ್ಯ. ಆ ಪಂದ್ಯದಲ್ಲಿ ನಾಯಕ ರೋಹಿತ್ ಶರ್ಮಾ ಹಾಗೂ ಶ್ರೇಯಸ್ ಅಯ್ಯರ್ ಅವರ ಅರ್ಧಶತಕಗಳ ನೆರವಿನಿಂದ ಭಾರತ ಏಳು ವಿಕೆಟ್ ಗಳ ಗೆಲುವು ಸಾಧಿಸಿತ್ತು. ಆದರೆ, 2017ರಲ್ಲಿ ಓವಲ್ ನಲ್ಲಿ ನಡೆದ ಚಾಂಪಿಯನ್ಸ್ ಟ್ರೋಫಿಯ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಭಾರತ ಸೋತಿತ್ತು. 2018ರಿಂದಲೂ (2023ರ ಏಷ್ಯ ಕಪ್ ಸೇರಿದಂತೆ) ಭಾರತ ಪಾಕಿಸ್ತಾನ ವಿರುದ್ಧ ಆರು ಏಕದಿನ ಪಂದ್ಯಗಳನ್ನು ಗೆಲ್ಲುವ ಮೂಲಕ ಆತ್ಮವಿಶ್ವಾಸ ಉಳಿಸಿಕೊಂಡಿದೆ.

2024ರಲ್ಲಿ ನ್ಯೂಯಾರ್ಕ್‌ನಲ್ಲಿ ನಡೆದ ಟಿ20 ವಿಶ್ವಕಪ್‌ನ ಲೀಗ್ ಹಂತದ ಪಂದ್ಯದಲ್ಲಿ ಉಭಯ ತಂಡಗಳು ಕೊನೆಯದಾಗಿ ಪೈಪೋಟಿ ನಡೆಸಿದ್ದವು. ಆ ಪಂದ್ಯವನ್ನು ಭಾರತ 9 ರನ್ ಗಳ ಅಂತರದಿಂದ ಗೆದ್ದು-ಕೊಂಡಿತ್ತು. ಅಲ್ಲದೇ ಫೈನಲ್ ನಲ್ಲಿ ದಕ್ಷಿಣ ಆಫ್ರಿಕಾವನ್ನು ಸೋಲಿಸುವ ಮೂಲಕ 2007 ರ ನಂತರ ತಮ್ಮ ಎರಡನೇ ಟಿ20 ವಿಶ್ವಕಪ್ ಟ್ರೋಫಿಯನ್ನು

## ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನೊಡಿ ಕೂಳ್ಳಿ



ಮಲ್ಲಮ್ಮ ನುಡಿ ವಾರ್ತೆ
ಹುಮನಾಬಾದ್. ನಗರದಲ್ಲಿ ಯಾವುದೇ ರೀತಿಯಿಂದ ಕುಡಿಯುವ ನೀರಿನ ಸಮಸ್ಯೆ ಬಾರದಂತೆನೋಡಿಕೊಳ್ಳಬೇಕೆಂದು ಮಾಜಿ ಸಚಿವ ರಾಜಶೇಖರ ಪಾಟೀಲ ರವರು ಪುರಸಭೆಯ ಮುಖ್ಯಾಧಿಕಾರಿ ಫಿರೋಜ್ ರವರಿಗೆ ಸೂಚಿ ಸಿದರು.

ತಮ್ಮ ಸ್ವಗ್ರಹದಲ್ಲಿ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಬಂದಿದ್ದರು. ತಕ್ಷಣ ಕುಡಿಯುವ ನೀರಿನ ಸಮಸ್ಯೆ ಹಾಗೂ ಬಿ.ಖಾತಾ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

## ಕೆಮಿಕಲ್ ಕಾರ್ಖಾನೆ ಹಠಾವೊ ಹುಮನಾಬಾದ್ ಬಚಾವೊ ಕೊಪ್ಪಳ ಮಾದರಿಯಲ್ಲಿ ಹೊರಾಟ ನಡೆಯಲಿ

ಮಲ್ಲಮ್ಮ ನುಡಿ ವಾರ್ತೆ
ಹುಮನಾಬಾದ್. ಬೆಳೆ ಆಗುತ್ತಿಲ್ಲ, ಚರ್ಮರೋಗದಿಂದ ಜನ ತತ್ತರ, ಕುಡಿಯಲು ನೀರು ಯೋಗ್ಯವಿಲ್ಲ, ಮಾತು ಬಾರಾದ ಜಾನುವಾರುಗಳ ಸಾವು. ಇವುಗಳಿಗೆಲ್ಲ ಕೆಮಿಕಲ್ ಕಾರ್ಖಾನೆಗಳು ಕಾರಣ ಎಂದು ಸಾರ್ವಜನಿಕರು ದೂರಿದ್ದಾರೆ.

ಕೊಪ್ಪಳ ಮಾದರಿಯಲ್ಲಿ ಹುಮನಾಬಾದ್ ಬಂದ್ ಮಾಡಿ ಪ್ರತಿಭಟನೆ ನಡೆಯಬೇಕು ಆವಾಗ ಮಾತ್ರ ಕಾರ್ಖಾಗಳು ಬಂದ್ ಅಥವಾ ಸ್ಥಳಾಂತರವಾಗಲು ಸಾಧ್ಯ ಎಂದು ಜನರ ಮನದಾಳದ ಮಾತಾಗಿದೆ.

ಕಾರ್ಖಾಗಳು ವಿಷಉಗುಳುತ್ತಿವೆ. ತಕ್ಷಣ ನಿಲ್ಲಬೇಕು. ಈ ಬಗ್ಗೆ ಆದಷ್ಟು ಬೇಗ ಕ್ರಮ ವಾಗಬೇಕು ಎಂದು ಜನರು ಒತ್ತಾಯಿಸಿದ್ದಾರೆ.

## ಬೀದರ್‌ನಲ್ಲಿ ಮತ್ತೊಂದು ದರೋಡೆ ; ಹಾಡಹಗಲೇ ಮನೆಗೆ ನುಗ್ಗಿ ಹಲ್ಲೆ ನಡೆಸಿ ಚಿನ್ನಾಭರಣ ಸುಲಿಗೆ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಫೆ. 22 : ಬೀದರ್‌ನ ಎಸ್‌ಬಿಐ ಬ್ಯಾಂಕ್ ಎದುರು ನಡೆದ ದರೋಡೆ, ಶೂಟೌಟ್ ಪ್ರಕರಣ ಮರೆ ಮಾಚುವ ಮುನ್ನವೇ ಔರಾದ್ ತಾಲೂಕಿನ ಕೌಠಾ(ಬಿ)ಗ್ರಾಮದ ಮನೆಯೊಂದಕ್ಕೆ ನುಗ್ಗಿದ ಖದೀಮರು ಒಂಟಿ ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ 25 ಲಕ್ಷ ಕ್ಕೂ ಅಧಿಕ ಮೌಲ್ಯದ ಚಿನ್ನಾಭರಣ ದೋಚಿ ಪರಾರಿಯಾದ ಘಟನೆ ನಡೆದಿದೆ.

ಪ್ರೀತಿ ಓಂಕಾರ ಗಾದಗೆ ಎಂಬುವರ ಮನೆಯಲ್ಲಿ ಈ ಘಟನೆ ನಡೆದಿದೆ. ಮನೆಯಲ್ಲಿ ಯಾರು ಇಲ್ಲದಿದ್ದಾಗ ಮಧ್ಯಾಹ್ನ ವೇಳೆ ಮನೆಯ ಹಿಂಬಾಗಿಲು ಮುರಿದು ಒಳಗೆ ನುಗ್ಗಿದ ಮುಸುಕುಧಾರಿ ಇಬ್ಬರು ಕಳ್ಳರು ಒಂಟಿ ಮಹಿಳೆಗೆ ಹಣ ಮತ್ತು ಚಿನ್ನಾ ಭರಣ ನೀಡಲು ಬೆದರಿಕೆವೊಡ್ಡುವ ಜತೆಗೆ ಚಾಕುವಿನಿಂದ ಕೈ ಮತ್ತು ಭುಜದ ಚುಚ್ಚಿದ್ದಾರೆ. ನಂತರ ಗ್ಯಾಸ್ ಒಲೆಯ ಮೇಲೆ ಚಾಕು ಕಾಯಿಸಿ ಕೈ ಮೇಲೆ ಚುಚ್ಚಿ ಚಿತ್ರಹಿಂಸೆ ನೀಡಿದ್ದು, ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಸಂತಪುರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ದ-ರೋಡೆಕೋರರ ಹಲ್ಲೆಯೊಳಗಾದ ಮಹಿಳೆಗೆ ಬೀದರ್‌ನ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

## ಬೆಳಗಾವಿಯಲ್ಲಿ ಕಂಡಕ್ಟರ್ ಮೇಲೆ ಹಲ್ಲೆ: ಗಡಿಯಲ್ಲಿ ಉದ್ವಿಗ್ನ, ಮಹಾರಾಷ್ಟ್ರ ಸಾರಿಗೆ ಬಸ್ ಸಂಚಾರ ಸ್ಥಗಿತ




ಮಲ್ಲಮ್ಮ ನುಡಿ ವಾರ್ತೆ
ಬೆಳಗಾವಿ:ಫೆ.22:ಬೆಳಗಾವಿಯ ಹೊರವಲಯದಲ್ಲಿ ಮರಾಠಿ ಭಾಷೆಯಲ್ಲಿ ಮಾತನಾಡಲಿಲ್ಲವೆಂದು ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಮೇಲೆ ಮರಾಠಿ ಪುಂಡರು ಹಲ್ಲೆ ನಡೆಸಿರುವುದು ಭಾರೀ ಆಕ್ರೋಶಕ್ಕೆ ಕಾರಣವಾಗಿದೆ.

ಕಂಡಕ್ಟರ್ ಮೇಲೆ ಹಲ್ಲೆ ಖಂಡಿಸಿ ಕನ್ನಡಪರ ಸಂಘಟನೆಗಳು ಪ್ರತಿಭಟನೆ ನಡೆಸುತ್ತಿವೆ. ಸದ್ಯ ಬೆಳಗಾವಿ ಗಡಿಯಲ್ಲಿ ಉದ್ವಿಗ್ನ ವಾತಾವರಣ ನಿರ್ಮಾವಾಗಿರುವ ಹಿನ್ನೆಲೆಯಲ್ಲಿ ಮಹಾರಾಷ್ಟ್ರದಿಂದ ರಾಜ್ಯಕ್ಕೆ ಬರುವ ಸಾರಿಗೆ ಬಸ್ ಸಂಚಾರವನ್ನು ಮಹಾರಾಷ್ಟ್ರ ಸರ್ಕಾರ ಸ್ಥಗಿತಗೊಳಿಸಿದೆ.

ಸುಳೆಭಾವಿ ಗ್ರಾಮದಲ್ಲಿ ಯುವಕನ ಜೊತೆ ಬಸ್ ಹತ್ತಿದ ಯುವತಿಯೋರ್ವಳು ಮರಾಠಿಯಲ್ಲಿ ಮಾತನಾಡಿದ್ದಳು. ಆಗ ನಾನು ನನಗೆ ಮರಾಠಿ ಬರಲ್ಲ, ಕನ್ನಡದಲ್ಲಿ ಮಾತನಾಡು ಎಂದು ಹೇಳಿದ್ದಕ್ಕೆ ಜನರನ್ನು ಕರೆಸಿ ನನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು 51 ವರ್ಷದ ಕಂಡಕ್ಟರ್ ಮಹಾದೇವಪ್ಪ ಮಲ್ಲಪ್ಪ ಹುಕ್ಕೇರಿ ತಿಳಿಸಿದ್ದಾರೆ.

ಸದ್ಯ ಪ್ರಕರಣ ಸಂಬಂಧ ಪೊಲೀಸರು ನಾಲ್ವರನ್ನು ಬಂಧಿಸಿದ್ದಾರೆ. ಈ ನಡುವೆ ಮಹಾರಾಷ್ಟ್ರ ಸರ್ಕಾರ ಕರ್ನಾಟಕಕ್ಕೆ ಬರುವ ಸಾರಿಗೆ ಬಸ್ ಸಂಚಾರವನ್ನು ಸ್ಥಗಿತಗೊಳಿಸಿದೆ. ಹೀಗಾಗಿ ಬೆಳಗಾವಿ ಗಡಿವರೆಗೂ ಮಾತ್ರ ಮಹಾರಾಷ್ಟ್ರ ಸಾರಿಗೆ ಬಸ್?ಗಳು ಬರುತ್ತಿವೆ. ಆದರೆ ಕರ್ನಾಟಕದಿಂದ ಎಂದಿನಂತೆ ಮಹಾರಾಷ್ಟ್ರದ ವಿವಿಧ ಕಡೆಗೆ ರಾಜ್ಯದ ಸಾರಿಗೆ ಬಸ್‌ಗಳು ಸಂಚಾರ ಮಾಡುತ್ತಿವೆ. ಪ್ರಕರಣಕ್ಕೆ ಬಿಗ್ ಟ್ವಿಸ್ಟ್:ಪ್ರಕರಣಕ್ಕೆ ಶನಿವಾರ ಹೊಸ ತಿರುವು ಪಡೆದು-ಕೊಂಡಿದ್ದು, ಕಂಡಕ್ಟರ್ ನನ್ನ ಮೇಲೆ ಲೌಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ ಯುವತಿ ನೀಡಿದ ದೂರಿನ ಅನ್ವಯ ಮಹಾದೇವಪ್ಪ ಹುಕ್ಕೇರಿ ವಿರುದ್ಧ ಪೊಲೀಸರು ಪೋಕ್ಸೋ ಪ್ರಕರಣ ದಾಖಲು ಮಾಡಿದ್ದಾರೆ. ಪೊಲೀಸರ ನಡೆಗೆ ಕನ್ನಡಪರ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿದ್ದು, ಕರವೇ ಕಾರ್ಯಕರ್ತರು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ ಪೊಲೀಸರ ವಿರುದ್ಧವೇ ಘೋಷಣೆ ಕೂಗಿದ್ದಾರೆ. ಮತ್ತೊಂದೆಡೆ ಎಂಇಎಸ್ ಪ್ರತಿಕೃತಿಗೆ ಬೆಂಕಿ ಹಚ್ಚಿ, ರಾಜ್ಯ ಹೆದ್ದಾರಿ ತಡೆದ ಕರವೇ ಮುಖಂಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಪ್ರಧಾನಿ ಮೋದಿ ಪ್ರಧಾನ ಕಾರ್ಯದರ್ಶಿಯಾಗಿ ಆರ್‌ಬಿಐ ಮಾಜಿ ಗವರ್ನರ್ ಶಕ್ತಿಕಾಂತ ದಾಸ್ ನೇಮಕ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಫೆ.22: ಆರ್‌ಬಿಐ ಮಾಜಿ ಗವರ್ನರ್ ಶಕ್ತಿಕಾಂತ ದಾಸ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅವರ 2ನೇ ಪ್ರಧಾನ ಕಾರ್ಯದರ್ಶಿಯಾಗಿ ಕೇಂದ್ರ ಸರ್ಕಾರ ಶನಿವಾರ ನೇಮಕ ಮಾಡಿದೆ.

"ನಿವೃತ್ತ ಐಎಎಸ್ ಅಧಿಕಾರಿ ಶಕ್ತಿಕಾಂತ ದಾಸ್ ಅವರನ್ನು ಪ್ರಧಾನ ಮಂತ್ರಿಗಳ ಪ್ರಧಾನ ಕಾರ್ಯದರ್ಶಿ-2 ಆಗಿ ನೇಮಕ ಮಾಡಲು ಸಂಪುಟ ನೇಮಕಾತಿ ಸಮಿತಿ ಅನುಮೋದನೆ ನೀಡಿದೆ. ಅವರು ಅಧಿಕಾರ ವಹಿಸಿಕೊಂಡ ದಿನಾಂಕದಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಲಾಗಿದೆ" ಎಂದು ಕೇಂದ್ರ ಸರ್ಕಾರದ ಸುತ್ತೋಲೆ ತಿಳಿಸಿದೆ.

ಶಕ್ತಿಕಾಂತ್ ದಾಸ್ ಅವರು ಡಿಸೆಂಬರ್ 2018 ರಿಂದ ಡಿಸೆಂಬರ್ 2024 ರವರೆಗೆ ಆರು ವರ್ಷಗಳ ಕಾಲ ಆರ್‌ಬಿಐ ಗವರ್ನರ್ ಆಗಿ ಸೇವೆ ಸಲ್ಲಿಸಿದ್ದರು. ಕಳೆದ ಡಿಸೆಂಬರ್ 10 ರಂದು ನಿವೃತ್ತರಾಗಿದ್ದರು. ಆರ್ ಬಿಐ ನೂತನ ಗವರ್ನರ್ ಆಗಿ ಸಂಜಯ್ ಮಲ್ಹೋತ್ರಾ ಅವರನ್ನು ಕೇಂದ್ರ ಸರ್ಕಾರ ನೇಮಕ ಮಾಡಿತ್ತು.

1980 ರ ಬ್ಯಾಚ್ ನ ಐಎಎಸ್ ಅಧಿಕಾರಿಯಾಗಿರುವ ಶಕ್ತಿಕಾಂತ್ ದಾಸ್ ಅವರು, ಕಳೆದ 38 ವರ್ಷಗಳಲ್ಲಿ ಆಡಳಿತದ ವಿವಿಧ ಕ್ಷೇತ್ರಗಳಲ್ಲಿ ಅಪಾರ ಅನುಭವ ಹೊಂದಿದ್ದಾರೆ. ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಲ್ಲಿ ಹಣಕಾಸು, ತೆರಿಗೆ, ಕೈಗಾರಿಕೆಗಳು ಮತ್ತು ಮೂಲಸೌಕರ್ಯ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದಾರೆ.

## ಹೃದಯಾಘಾತಕ್ಕೆ ಒಂದೇ ದಿನ ಇಬ್ಬರು ವಿದ್ಯಾರ್ಥಿಗಳು ಸಾವು

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಫೆ.22:ಇತ್ತೀಚೆಗೆ ಹೃದಯಾಘಾತ ಹೆಚ್ಚಾಗಿ ಸಂಭವಿಸುತ್ತಿದೆ. ಹಿಂದೆಲ್ಲ ತೂಕ ಹೆಚ್ಚಳದಿಂದ, ರಕ್ತದೊತ್ತಡದಿಂದ ಈ ಹೃದಯಾಘಾತ ಸಂಭವಿಸುತ್ತಿತ್ತು. ಆದರೆ ಇತ್ತೀಚೆಗೆ ಚಿಕ್ಕಮಕ್ಕಳಿಗೂ ಹಾರ್ಟ್ ಅಟ್ಯಾಕ್ ಆಗುತ್ತಿದೆ. ಚಿಕ್ಕಮಕ್ಕಳಿಂದ ಹಿಡಿದು ದೊಡ್ಡವರವರೆಗೂ ಇತ್ತೀಚೆಗೆ ಹಾರ್ಟ್ ಅಟ್ಯಾಕ್ ಸಮಸ್ಯೆಗಳೇ ಯುವಕರನ್ನು ಕಾಡುತ್ತಿದೆ.

ಇದೀಗ ಒಂದೇ ದಿನ ಎರಡು ಹೃದಯಾಘಾತ ಪ್ರಕರಣಗಳು ಬೆಳಕಿಗೆ ಬಂದಿದೆ. ತುಮಕೂರಿನಲ್ಲಿ 10 ನೇ ತರಗತಿ ವಿದ್ಯಾರ್ಥಿ ಮತ್ತು ಕಲಬುರಗಿಯಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.

## ನಮ್ಮ ಸರಸ್ ಮೇಳ-2025: ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ಕೊಡಿ:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಫೆ.22 ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ದೇವಸ್ಥಾನ ಜಾತ್ರೆ ಮೈದಾನದಲ್ಲಿ ಇದೇ ಫೆಬ್ರವರಿ 24 ರಿಂದ 10 ದಿನಗಳ ಕಾಲ ರಾಷ್ಟ್ರ ಮಟ್ಟದ ಮಹಿಳಾ ಸ್ವ-ಸಹಾಯ ಗುಂಪುಗಳು ತಯ್ಯಾರಿಸಿದ ವಸ್ತುಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ ಮೇಳ ನಡೆಯುವುದರಿಂದ 10 ದಿನಯುದ್ದಕ್ಕೂ ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಶನಿವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಸರಸ್ ಮೇಳ ಸಂಬಂಧ ರಚಿಸಲಾಗಿರುವ ವಿವಿಧ ಸಮಿತಿಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕಸ ಸಂಗ್ರಹಣೆಗೆ ಪಾಲಿಕೆ ವತಿಯಿಂದ ಹೆಚ್ಚಿನ ಪೌರಕಾರ್ಮಿಕರನ್ನು ನೇಮಿಸಬೇಕು. ಅಲ್ಲಲ್ಲಿ ಬಯೋ ಟಾಯಲೆಟ್ ವ್ಯವಸ್ಥೆ ಮಾಡಬೇಕು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಹೆಚ್ಚಿನ ಆದ್ಯತೆ ಕೊಡಿ:ಬಿ.ಫೌಜಿಯಾ ತರನ್ನುಮ್

ಎಂದರು.ರಾಷ್ಟ್ರ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಇದಾಗಿರುವುದರಿಂದ ಮಾರಾಟಕ್ಕೆ ಜನ ಬರ್ತಾರೆ. ಹೆಚ್ಚಿನ ರೀತಿಯಲ್ಲಿ ಪ್ರಚಾರ ಮಾಡಬೇಕು. ಪ್ರತಿ ದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಇರುವುದರಿಂದ ಸಹಜವಾಗಿಯೇ ಜನಸಂದಣಿ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಹೀಗಾಗಿ ಪಾರ್ಕಿಂಗ್ ವ್ಯವಸ್ಥೆ ತುಂಬಾ ಅಚ್ಚುಕಟ್ಟಾಗಿ ಮಾಡಬೇಕು. ಸುಗಮ ಸಂಚಾರಕ್ಕೆ ಹೆಚ್ಚಿನ ಟ್ರಾಫಿಕ್ ಸಿಬ್ಬಂದಿ ನಿಯೋಜನೆ ಜೊತೆಗೆ ಜಾತ್ರೆ ಮೈದಾನ ಸುತ್ತ ಸೈನೇಜ್ ಬೋರ್ಡ್ ಅಳವಡಿಸಬೇಕು ಎಂದರು.

ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡಬೇಕು ಎಂದ ಜಿಲ್ಲಾಧಿಕಾರಿಗಳು, ಎರಡು ಶಿಪ್ಟ್ ನಲ್ಲಿ ವೈದ್ಯರು ಕೆಲಸ ನಿರ್ವಹಿಸುವಂತೆ ಅಂಬುಲೆನ್ಸ್ ವಾಹನದ ಜೊತೆಗೆ ಒಂದು ವೈದ್ಯಕೀಯ ತಂಡ ಮತ್ತು ಮುಂಜಾಗ್ರತೆಯಾಗಿ ಅಗ್ನಿ ಅವಘಡ ನಿಯಂತ್ರಣಕ್ಕೆ ಅಗ್ನಿಶಾಮಕ ತಂಡ ಸ್ಥಳದಲ್ಲಿ ತೈನಾತಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.ಬೇಸಿಗೆ ಇರುವ ಕಾರಣ ಕುಡಿಯುವ ನೀರು ನಿರಂತರ ಪೂರೈಸುವ ವ್ಯವಸ್ಥೆ ಆಗಬೇಕು. ವಿವಿಧ ರಾಜ್ಯಗಳಿಂದ ಬರುವ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಊಟದ ವ್ಯವಸ್ಥೆ, ವಸತಿ ಎಲ್ಲವು ಅಚ್ಚುಕಟಾಗಿ ಮಾಡಲು ಪರಸ್ಪರ ಅಧಿಕಾರಿಗಳು ಸಮನ್ವಯ ಸಾಧಿಸಬೇಕು. ಮೇಳ ಯಶಸ್ಸಿಗೆ ವೇದಿಕೆ, ಆಹಾರ, ಸಆರಿಗೆ, ಸಆಂಸ್ಕೃತಿಕ, ಮಾಧ್ಯಮ, ನೀರು ಸರಬರಾಜು ಹಾಗೂ ನೈರ್ಮಲ್ಯ, ಸುರಕ್ಷಾ, ಅಗ್ನಿಶಾಮಕ ಹೀಗೆ ಒಟ್ಟು 8 ಸಮಿತಿಗಳನ್ನು ರಚಿಸಿ ಕೆಲಸ ಕಾರ್ಯ ಹಂಚಿಕೆ ಮಾಡಿದ್ದು, ಅದರಂತೆ ಅಧಿಕಾರಿಗಳು ತಮಗೆ ವಹಿಸಿದ ಕೆಲಸಗಳನ್ನು ಚಾಚು ತಪ್ಪದೆ ಮಾಡಬೇಕು ಎಂದರು.

ಕಲಬುರಗಿ ಮೂರನೇ ರಾಷ್ಟ್ರೀಯ ಮೇಳಕ್ಕೆ ಸಾಕ್ಷಿ:

ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನದ ಕಾರ್ಯಕ್ರಮ ವ್ಯವಸ್ಥಾಪಕ ಎಂ.ಕೆ. ಅಲಿ ಮಾತನಾಡಿ 2018 ರಿಂದ ಈ ರೀತಿಯ ರಾಷ್ಟ್ರ ಮಟ್ಟದ ಸರಸ್ ಮೇಳ ಆಯೋಜಿಸಲಾಗುತ್ತಿದೆ. ಬೆಂಗಳೂರು, ಬೆಳಗಾವಿಯಲ್ಲಿ ಈಗಾಗಲೆ ಮಾಡಿದ್ದು, ಕಲಬುರಗಿ ಮೂರನೇ ಮೇಳಕ್ಕೆ ಸಾಕ್ಷಿಯಾಗಲಿದೆ. ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಮಾರಾಟ ಮೇಳ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನದ ಕಾರ್ಯಕ್ರಮ ವ್ಯವಸ್ಥಾಪಕ ಬೆಳ್ಳಿಗೌಡ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ ಸೇರಿದಂತೆ ವಿವಿಧ ಸಮಿತಿಯ ಅನೇಕ ಅಧಿಕಾರಿಗಳು ಇದ್ದರು.

## ನಡುವೆ ಮಹಾ ಕಾಳಗ

ಎತ್ತಿಹಿಡಿದಿತ್ತು. ಭಾರತೀಯ ಕಾಲಮಾನ ಮಧ್ಯಾಹ್ನ 2–30 ರಿಂದ ಪಂದ್ಯ ಆರಂಭವಾಗಲಿದೆ. ಸ್ಟಾರ್ ಸ್ಪೋರ್ಟ್ಸ್ ನೆಟ್ ವರ್ಕ್ ಪಂದ್ಯದ ನೇರ ಪ್ರಸಾರ ಮಾಡಲಿದೆ.

ಭಾರತ ತಂಡ ಇಂತಿದೆ: ರೋಹಿತ್ ಶರ್ಮಾ (ನಾಯಕ) ಶುಭಮನ್ ಗಿಲ್ (ವಿಕೆಟ್ ಕೀಪರ್) ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಕೆಎಲ್ ರಾಹುಲ್ (ವಿಕೆಟ್ ಕೀಪರ್ ) ಹಾರ್ದಿಕ್ ಪಾಂಡ್ಯ, ಅಕ್ಸರ್ ಪಟೇಲ್, ವಾಷಿಂಗ್ಟನ್ ಸುಂದರ್, ಕುಲದೀಪ್ ಯಾದವ್, ಜಸ್ಪ್ರೀತ್ ಬುಮ್ರಾ, ಮೊಹಮ್ಮದ್ ಶಮಿ, ಅರ್ಷದೀಪ್ ಸಿಂಗ್, ಹರ್ಷಿತ್ ರಾಣಾ, ರಿಷಭ್ ಪಂತ್, ರವೀಂದ್ರ ಜಡೇಜಾ, ವರುಣ್ ಚಕ್ರವರ್ತಿ

ಪಾಕಿಸ್ತಾನ ತಂಡ ಇಂತಿದೆ: ಮೊಹಮ್ಮದ್ ರಿಜ್ವಾನ್ (ನಾಯಕ, ವಿಕೆಟ್ ಕೀಪರ್) ಸಲ್ಮಾನ್ ಅಲಿ ಅಘಾ, ಬಾಬರ್ ಅಜಮ್, ಫಖರ್ ಜಮಾನ್, ಕಮ್ರಾನ್ ಗುಲಾಮ್, ಸೌದ್ ಶಕೀಲ್, ತಯ್ಯಬ್ ತಾಹಿರ್, ಫಹೀಮ್ ಅಶ್ರಫ್, ಖುಷ್ದಿಲ್ ಷಾ, ಉಸ್ಮಾನ್ ಖಾನ್, ಅಬ್ರಾರ್ ಅಹ್ಮದ್, ಹರಿಸ್ ರೌಫ್, ಮೊಹಮ್ಮದ್ ಶಾಹ್ರಿ ಹಸ್ನೇನ್, ನಸೀಮ್ ಶಾ, ಶಾಹೀನ್ ಶಾ ಅಫ್ರಿದಿ.

## ಶಾಂತಿ-ಸೌಹಾರ್ದತೆ ಕಾಪಾಡಲು ಡಿ.ಸಿ. ಮನವಿ

ಕಲಬುರಗಿ,ಫೆ.22ಮಹಾಶಿವರಾತ್ರಿ ನಿಮಿತ್ಯ ಫೆಬ್ರವರಿ 26 ರಂದು ಆಳಂದ ಪಟ್ಟಣದ ಲಾಡ್ಲೆ ಮಶಾಖ್ ದರ್ಗಾದಲ್ಲಿರುವ ಶ್ರೀ ರಾಘವ ಚೈತನ್ಯ ಶಿವಲಿಂಗಕ್ಕೆ ಹಿಂದು ಸಂಘಟನೆಗಳಿಂದ ಮಹಾಪೂಜೆ ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಪಟ್ಟಣ ಮತ್ತು ತಾಲೂಕಿನಾದ್ಯಂತ ಜನರು ಶಾಂತಿ–ಸೌಹಾರ್ದತೆ ಕಾಪಾಡಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಮನವಿ ಮಾಡಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಿಂದು, ಮುಸ್ಲಿಂ ಧಾರ್ಮಿಕ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ಶಾಂತಿ ಸಮಿತಿ ಸಭೆ ನಡೆಸಿದ ಅವರು, ನ್ಯಾಯಾಲಯ ಆದೇಶವನ್ನು ಎಲ್ಲರು ಪಾಲಿಸುವ ಮೂಲಕ ಶಾಂತಿ ಸೌಹಾರ್ದಕ್ಕೆಯಾವುದೇ ರೀತಿಯ ಧಕ್ಕೆಯಾಗದಂತೆ ನಡೆದುಕೊಳ್ಳಬೇಕೆಂದರು.

ಕಲಬುರಗಿ ಜಿಲ್ಲೆ ಕೋಮು ಸೌಹಾರ್ದತೆಗೆಹೆಸರುವಾಸಿಯಾಗಿದೆ. ಹೀಗಾಗಿ ಪರಸ್ಪರ ಧರ್ಮದ ಜನರು ಪ್ರೀತಿ ಅನ್ಯೋನ್ಯತೆಯಿಂದ ಹಬ್ಬ ಹರಿ–ದಿನಗಳನ್ನು ಆಚರಿಸಬೇಕು ಎಂದು ಧರ್ಮದ ಮುಖಂಡರಿಗೆ ಡಿ.ಸಿ. ತಿಳಿಸಿದರು.

ಎಸ್.ಪಿ. ಅಡ್ಡೂರು ಶ್ರೀನಿವಾಸಲು ಮಾತನಾಡಿ, ಕೆಲ ಕಿಡಿಗೇಡಿಗಳು ಸಾಮಾಜಿಕ ಸಾಮರಸ್ಯ ಹಾಳು ಮಾಡಲು ಯತ್ನಿಸುತ್ತವೆ. ಇಂತದ್ದಕ್ಕೆಲ್ಲ ಸಾರ್ವಜನಿಕರು, ಧಾರ್ಮಿಕ ಮುಖಂಡರು ಅವಕಾಶ ಮಾಡಿಕೊಡಬಾರದು. ವಿಶೇಷವಾಗಿ ಸಾಮಾಜಿಕ ಜಾಲತಾಣದಲ್ಲಿ ಹಡಿದಾಡುವ ಸತ್ಯಕ್ಕೆದೂರವಾದ ಸುಳ್ಳುಸುದ್ದಿಗೆ ಕಿವಿಗೊಡಬೇಡಿ ಎಂದು ಅವರು, ಸಮಾಜದಲ್ಲಿನ ಶಾಂತಿಗೆ ಧಕ್ಕೆ ತರುವ ಕಿಡಿಗೇಡಿಗಳ ಮೇಲೆ ಪೊಲೀಸ್ ಇಲಾಖೆ ಹದ್ದಿನ ಕಣ್ಣು ಇಟ್ಟಿದೆ ಎಂದರು.

ಆಳಂದ ತಾಲೂಕಿನಾದ್ಯಂತ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಮತ್ತು ಯಾವುದೇ ಅಹಿತಕರ ಘಟನೆ ನಡೆಯದಂತೆ ಈಗಾಗಲೆ ಪೊಲೀಸ್ ಠಾಣೆ ಹಂತದಲ್ಲಿ ಶಾಂತಿ ಸಮಿತಿ ಸಭೆ ನಡೆಸಲಾಗಿದ್ದು,ಮಹಾಶಿವರಾತ್ರಿ ದಿನದಂದು ಹೆಚ್ಚಿನ ಪೊಲೀಸ್ ಬಂದೋಬಸ್ತ್ ಸಹಕಲ್ಪಿಸಲಾಗುತ್ತದೆ ಎಂದರು.ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಕಲಬುರಗಿ ಸಹಾಯಕ ಅಯುಕ್ತೆ ಸಾಹಿತ್ಯ ಸೇರಿದಂತೆ ಸಭೆಯಲ್ಲಿ ಹಿಂದೂ ಮತ್ತು ಮುಸ್ಲಿಂ ಸಮಾಜದ ಮುಖಂಡರು ಭಾಗವಹಿಸಿದ್ದರು.

## ಕಬ್ಬು ನುರಿಸುವ ಕಾರ್ಯ ಮುಕ್ತಾಯ

ಮಲ್ಲಮ್ಮ ನುಡಿ ವಾರ್ತೆ

ಇಂಡಿ:ಫೆ.22 : ತಾಲೂಕಿನ ಮರಗೂರದ ಗ್ರಾಮದ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಯ 2024–25 ನೇಸಾಲಿನ ಕಬ್ಬು ನುರಿಸುವ ಕಾರ್ಯವನ್ನು ಫೆ, 24 ರಂದು ಮುಕ್ತಾಯಗೊಳಿಸಲಾಗುವುದು ಎಂದು ಕಾರ್ಖಾನೆಯ ವ್ಯವಸ್ಥಾಪಕರು ಪ್ರಕಟಣೆಗೆ ತಿಳಿಸಿದ್ದಾರೆ.ಕಬ್ಬು ಬೆಳೆಗಾರರು ಕಾರ್ಖಾನೆಯೊಂದಿಗೆ ಕಬ್ಬು ಪೂರೈಕೆಯ ಕರಾರಿಗೊಳಪಟ್ಟ ತಮ್ಮ ಎಲ್ಲಾ ಕಬ್ಬು ನಮ್ಮ ಕಬ್ಬು ಕಟಾವು ಆದೇಶಪತ್ರಗಳನ್ವಯ ಕಟಾವು ಮಾಡಿ ಫೆ,23 ರಂದು ರಾತ್ರಿ 10–00 ಘಂಟೆಯ ಒಳಗಾಗಿ ಕಾರ್ಖಾನೆಗೆ ಕಬ್ಬು ಪೂರೈಸಿ ಕಬ್ಬು ಪೂರೈಕೆಗಾಗಿ ಕಾರ್ಖಾನೆಯಿಂದ ಪಡೆದು–ಕೊಂಡ ಎಲ್ಲ ಕಬ್ಬು ಪಟಾವು ಆದೇಶ ಪತ್ರಗಳು ಫೆ, 23 ರಂದು ರವಿವಾರ ರಾತ್ರಿ10–00 ಗಂಟೆಯ ನಂತರ ರದ್ದುಗೊಳಿಸಲಾಗುತ್ತದೆ.

## ಲೋಕಸೇವಾ ಆಯೋಗದಿಂದ ಗ್ರೂಪ್ 'ಬಿ' ಹುದ್ದೆಗೆ ನೇಮಕಾತಿ ಪರೀಕ್ಷೆ:ಪರೀಕ್ಷೆ ಸುಸೂತ್ರವಾಗಿ ನಡೆಸಿ,ಕಪ್ಪು ಚುಕ್ಕೆಗೆ ಅವಕಾಶ ಮಾಡಿಕೊಡಬೇಡಿ-ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22(ಕರ್ನಾಟಕ ವಾರ್ತೆ)ಕರ್ನಾಟಕಲೋಕಸೇವಾ ಆಯೋಗದಿಂದ ವಿವಿಧ ಇಲಾಖೆಯಲ್ಲಿನ ಗ್ರೂಪ್ 'ಬಿ' ಹುದ್ದೆಗಳ ನೇಮಕಾತಿಗೆ ಇದೇ ಫೆಬ್ರವರಿ 23 ರಿಂದ 28ರ ವರೆಗೆ ಕಲಬುರಗಿ ನಗರದ 35 ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಿದ್ದು, ಜಿಲ್ಲೆಯಾದ್ಯಂತ ಯಾವುದೇ ಕಪ್ಪು ಚುಕ್ಕೆಗೆ ಅವಕಾಶ ಮಾಡಿಕೊಡದೆ ಸುಸೂತ್ರವಾಗಿ ಮತ್ತು ಪಾರದರ್ಶಕ ರೀತಿಯಲ್ಲಿ ಪರೀಕ್ಷೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಖಡಕ್ ಸೂಚನೆ ನೀಡಿದರು.

ಶನಿವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಪರೀಕ್ಷಾ ಕೇಂದ್ರ ಮುಖ್ಯಸ್ಥರು, ಮಾರ್ಗಾಧಿಕಾರಿಗಳು, ವೀಕ್ಷಕರೊಂದಿಗೆ ಪೂರ್ವಸಿದ್ಧತಾ ಸಭೆ ನಡೆಸಿದ ಅವರು, ಪರೀಕ್ಷೆ ಪಾರದರ್ಶಕವಾಗಿ ನಡೆಸಬೇಕು. ಯಾವುದೇ ರೀತಿಯ ನಕಲಿಗೆ ಇಲ್ಲಿ ಅವಕಾಶ ಇಲ್ಲ ಎಂದ ಅವರು ಎಲ್ಲಾದರು ನಕಲು ಪ್ರಕರಣ ವರದಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಫೆಬ್ರವರಿ 23 ರಂದು ನಡೆಯಲಿರುವ ಪರೀಕ್ಷೆಗೆ 35 ಪರೀಕ್ಷಾ ಕೇಂದ್ರದಲ್ಲಿ 11,535 ಅಭ್ಯರ್ಥಿಗಳು ಹಾಜರಾಗಲಿದ್ದಾರೆ. ಅದೇ ರೀತಿ ಫೆಬ್ರವರಿ 24, 25 ಹಾಗೂ 27 ರಂದು ಪ್ರತಿ ದಿನ 12 ಕೇಂದ್ರದಲ್ಲಿ 3,745 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಪರೀಕ್ಷೆ ಸುಗಮವಾಗಿ ನಡೆಯುವ ಸಂಬಂಧ ಈಗಾಗಲೆ ಸ್ಥಳೀಯ ನಿರೀಕ್ಷಣಾಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರನ್ನು ನೇಮಿಸಲಾಗಿದೆ. ಪರೀಕ್ಷೆ ನಡೆಯುವ ಮುನ್ನವೆ ಪರೀಕ್ಷಾ ಕೇಂದ್ರದಲ್ಲಿ ಅಗತ್ಯ ಮೂಲಸೌಕರ್ಯಗಳಾದ ವಿದ್ಯುತ್, ಕುಡಿಯುವ ನೀರು, ಶೌಚಾಲಯ ಇರುವುದನ್ನು ಕೇಂದ್ರದ ಮುಖ್ಯಸ್ಥರು ಖಾತ್ರಪಡಿಸಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ತಪಾಸಣೆಗೆ ಪುರುಷ ಮತ್ತು ಮಹಿಳಾ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕೆಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಮೊಬೈಲ್ ಬ್ಯಾನ್,ಸಿ.ಸಿ.ಟಿ.ವಿ. ಕಣ್ಗಾವಲಿನಲ್ಲಿ ಪರೀಕ್ಷೆ:

ಪರೀಕ್ಷೆ ಸುಸೂತ್ರವಾಗಿ ನಡೆಯುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಸೇರಿದಂತೆ ಎಲ್ಲಾ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸಿ.ಸಿ.ಟಿ.ವಿ ಕಣ್ಗಾವಲಿನಲ್ಲಿ ಪರೀ–ಕ್ಷೆ ನಡೆಯಲಿದ್ದು, ಜಿಲ್ಲಾ ಕೇಂದ್ರದಿಂದ ವೆಬ್ ಕಾಸ್ಟಿಂಗ್ ಮೂಲಕ ಪರೀಕ್ಷೆ ಮೇಲ್ವಿಚಾರಣೆ ಮಾಡಲಾಗುತ್ತದೆ. ಇನ್ನು ಡ್ರೆಸ್ ಕೋಡ್ ಕುರಿತಂತೆ ಪ್ರವೇಶ ಪತ್ರದಲಿಲ್ಲಿ ಮಾಹಿತಿ ನೀಡಿದ್ದು, ಅದನ್ನು ಎಲ್ಲಾ ಅಭ್ಯರ್ಥಿಗಳು ಪಾಲಿಸಬೇಕು ಎಂದು ಡಿ.ಸಿ. ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ, ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ ಸೇರಿದಂತೆ ಇನ್ನಿತರ ಅಧಿಕಾರಿಗಳು ಇದ್ದರು.

## ತೋಂಟದ ಸಿದ್ದಲಿಂಗ ಸ್ವಾಮಿಗಳ ಅವರ ಕುರಿತು ಕರುಣಾಮಯಿ ಭಾಗ ೩ ಕೃತಿ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.22: ಕುಕನೂರಿನ ಸಾಹಿತಿ,ಉಪನ್ಯಾಸಕ ಭೋಜರಾಜ ಸೊಪ್ಪಿಮಠ ಅವರು ಗದಗಿನ ಜಗದ್ಗುರು ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಕುರಿತಾಗಿ ಸಂಪಾದಿಸಿದ ಕರುಣಾಮಯಿ ಭಾಗ 3 ಕೃತಿ ಗದಗಿನ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಸಭಾಭವನದಲ್ಲಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಲೋಕಸಭಾ ಸದಸ್ಯರಾದ ಬಸವರಾಜ ಬೊಮ್ಮಾಯಿ ಅವರಿಂದ ಲೋಕಾರ್ಪಣೆಗೊಂಡಿತು.

ತೋಂಟದಾರ್ಯ ಮಠದ ಪೂಜ್ಯ ಶ್ರೀ ಜಗದ್ಗುರು ಡಾ. ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ನರಗುಂದ ಶಾಸಕ ಸಿ ಸಿ ಪಾಟೀಲ, ರೋಣ ಶಾಸಕ ಜಿ ಎಸ್ ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮುಂಡರಗಿಯ ನಿಜಗುಣ ಪ್ರಭು ತೋಂಟ–ದಾರ್ಯ ಮಹಾಸ್ವಾಮಿಗಳು, ಸಂಡೂರು ವಿರಕ್ತಮಠದ ಪ್ರಭು ಮಹಾಸ್ವಾಮಿಗಳು,ಅರಸೀಕೆರೆಯ ಶಾಂತಲಿಂಗ ದೇಸಿಕೇಂದ್ರ ಮಹಾಸ್ವಾಮಿಗಳು,ಶಿರೋಳದ ಶಾಂತಲಿಂಗ ಮಹಾಸ್ವಾಮಿಗಳು ಉಪಸ್ಥಿತರಿದ್ದರು.

## ಹುಬ್ಬಳ್ಳಿಯ ಸಿದ್ಧಾರೂಢ ಮಠಕ್ಕೆ ಸಂಗಾಪೂರ ಭಕ್ತರ ಪಾದಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ಶಿವರಾತ್ರಿ ನಿಮಿತ್ತ ನಡೆಯುವ ಸಿದ್ಧಾರೂಢ ಮಠದ ಜಾತ್ರೆಗೆ ಸಮೀಪದ ಸಂಗಾಪೂರ ಗ್ರಾಮದಿಂದ ಇನ್ನೂರಕ್ಕೂ ಹೆಚ್ಚು ಜನ ಭಕ್ತರು ಶನಿವಾರ ಪಾದಯಾತ್ರೆ ಕೈಗೊಂಡರು. ಸತತ 18 ನೇ ವರ್ಷದ ಪಾದಯಾತ್ರೆಯನ್ನು ಶನಿವಾರದಿಂದ ಆರಂಭಗೊಂಡ ಪಾದಯಾತ್ರೆಗೆ 1ಮುಂಜಾನೆ 8 ಗಂಟೆಗೆ ಸಂಗಾಪೂರ ಸಿದ್ಧಾರೂಢ ಆಶ್ರಮದಲ್ಲಿ ಸಿದ್ಧಾರೂಢ ಸ್ವಾಮಿಗಳು ಚಾಲನೆ ನೀಡಿದರು. ನಂತರ ಸ್ವಾಮಿಗಳ ನೇತೃತ್ವದಲ್ಲಿಯೇ ಪಾದಯಾತ್ರೆ ಆರಂಭಿಸಿದ ಭಕ್ತರು ಹಳ್ಳೂರ ಗ್ರಾಮಕ್ಕೆ ಆಗಮಿಸಿ ಬಸವಣ್ಣ ದೇವರ ದರ್ಶನ ಮಾಡಿ,ಹಳ್ಳೂರಿನ ಸಿದ್ಧಾರೂಢ ಸದ್ಭಕ್ತ ಮಂಡಳಿಯವರು ಮಾಡಿಸಿದ್ದ ಉಪಹಾರ ಸ್ವೀಕರಿಸಿದರು. ಅಲ್ಲಿಂದ ಹೊರಟ ಪಾದಯಾತ್ರೆಯಲ್ಲಿ ಬೋಡನಾಯಕದಿನ್ನಿ, ಭೈರಮಟ್ಟಿ,ಬೆಣ್ಣೂರ,ಬೇವೂರ, ಚವಡಾಪೂರ ಭಕ್ತರು ಸೇರಿ–ಕೊಂಡರು.ಗಿರಿಸಾಗರದ ಭಜನಾ ತಂಡದೊಂದಿಗೆ ಸಾಗಿರುವ ಭಕ್ತರು ಶಿವನಾಮ ಸ್ಮರಣೆ, ಸಿದ್ಧಾರೂಢರ ಕುರಿತಾದ ಹಾಡು ಹೇಳುತ್ತಾ ಸಾಗಿದರು. ಫೆ.25 ರವರೆಗೆ ನಡೆಯುವ ಪಾದಯಾತ್ರೆ ರಾತ್ರಿ ವೇಳೆ ಅನೇಕ ಗ್ರಾಮಗಳಲ್ಲಿ ವಾಸ್ತವ್ಯ ಹೂಡಲಿದೆ. ಈ ಸಮಯದಲ್ಲಿ ಪ್ರವಚನ ನಡೆಯಲಿದೆ. ಫೆ.26 ರಾತ್ರಿ ಹುಬ್ಬಳ್ಳಿಯ ಅಕ್ಕಲಕೋಟೆ ಶರಣರ ಮಠದಲ್ಲಿ ವಾಸ್ತವ್ಯ ಮಾಡಿ ಫೆ.27ರಂದು ನಡೆಯುವ ಸಿದ್ಧಾರೂಢರ ಜಾತ್ರೆಯಲ್ಲಿ ಪಾದಯಾತ್ರಿಗಳು ಪಾಲ್ಗೊಳ್ಳುವರು ಎಂದು ಪಾದಯಾತ್ರೆ ನೇತೃತ್ವ ವಹಿಸಿರುವ ಲಕ್ಷ್ಮಣ ದಡ್ಡಿ ತಿಳಿಸಿದರು.

## ಮಾತೃಭಾಷೆ ಉಳಿವು ಸಂಸ್ಕೃತಿಯ ಉಳಿವು:ಡಾ.ಮೌನೇಶ ಕಮ್ಮಾರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ಭಾಷೆ ಬದುಕಿನ ಕೋಶ. ಅದು ಮನುಷ್ಯನಿಗೆ ದಕ್ಕಿದ ಸಂಪತ್ತು. ಮಾತೃಭಾಷೆಯ ಮೂಲಕ ಆಯಾ ಪ್ರಾದೇಶಿಕ ಸಂಸ್ಕೃತಿ ಅಚ್ಚಳಿಯದೇ ಉಳಿಯಲು ಸಾಧ್ಯ ಎಂದು ನಗರದ ಸರ್ಕಾರಿ ಪ್ರಥಮ ದರ್ಜೆಯ ಕಾಲೇಜಿನ ಪ್ರಾಧ್ಯಾಪಕ ಡಾ.ಮೌನೇಶ ಕಮ್ಮಾರ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗ ಶುಕ್ರವಾರ ಹಮ್ಮಿಕೊಂಡ ಅಂತರಾಷ್ಟ್ರೀಯ ಮಾತೃಭಾಷಾ ದಿನಾಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

'ಮಾತೃಭಾಷೆಯೆಂಬ ಬೆಚ್ಚಗಿನ ಮಡಿಲು' ಎಂಬ ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ಇಂದು ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ಕನ್ನಡದಲ್ಲಿ ನೀಡುವುದು ಅವಶ್ಯವಾಗಿದೆ. ಪಾಲಕರು ತಮ್ಮ ಮಕ್ಕಳಿಗೆ ಮಾತೃಭಾಷೆಯಲ್ಲಿ ಶಿಕ್ಷಣವನ್ನು ಕೊಡಿಸುವ ಮನಸ್ಥಿತಿ ಹೊಂದಬೇಕು ಎಂದ ಅವರು, ಮಗುವಿಗೆ ತಾಯಿಯ ಮಡಿಲು ಎಷ್ಟು ಸುರಕ್ಷಿತವೋ ಹಾಗೆಯೇ ನಮ್ಮ ಕನ್ನಡ ಮಾತೃಭಾಷೆಯಿಂದ ನಾವೆಲ್ಲ ಸುರಕ್ಷಿತವಾಗಿದ್ದೇವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜೆ.ಒಡೆಯರ ಮಾತನಾಡಿ,ಮಾತೃಭಾಷೆಯಿಂದ ಎಲ್ಲ ಭಾವನೆಗಳು ಮನಸ್ಸಿನಲ್ಲಿ ನೆಲೆ ನಿಲ್ಲುತ್ತವೆ .ಮಾತೃಭಾಷೆ ಕಲಿಕೆಯಿಂದಲೇ ಜ್ಞಾನ ವಿಕಸಿತವಾಗುವುದು ಎಂದರು.

ಕನ್ನಡ ಭಾಗದ ಮುಖ್ಯಸ್ಥ ಡಾ.ಜಿ.ಆಯ್.ನಂದಿಕೋಲಮಠ ಸ್ವಾಗತಿಸಿ, ಪರಿಚಯಿಸಿದರು. ಎ.ವಿ.ಪುರಾಣಿಕ ನಿರೂಪಿಸಿ ವಂದಿಸಿದರು.

## ಆಯುರ್ವೇದ ಕಾಲೇಜಿನಲ್ಲಿ ಶಿಷ್ಯೋಪನಯನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆಯುರ್ವೇದ ಮಹಾವಿದ್ಯಾಲಯ ಹಾಗೂ ಆಸ್ಪತ್ರೆಯಲ್ಲಿ ಶನಿವಾರ ವಿದ್ಯಾರ್ಥಿಗಳಿಗೆ ಶಿಷ್ಯೋಪನಯನ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು.

ಶಾಸ್ತ್ರೋಕ್ತವಾಗಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಗುರುವಿಗೆ ನಮಿಸಿ ತಮ್ಮನ್ನು ಶಿಷ್ಯರನ್ನಾಗಿ ಸ್ವೀಕರಿಸಿ ಎಂಬ ನಿವೇದನೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಆಯುರ್ವೇದ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ. ಭಾರತೀಯ ಸಂಸ್ಕೃತಿಯಲ್ಲಿ ಗುರುಕುಲ ಪದ್ಧತಿಗೆ ವಿಶೇಷ ಸ್ಥಾನವಿದೆ. ಗುರು ಶಿಷ್ಯ ಸಂಬಂಧಕ್ಕೆ ಹಲವು ಮೌಲ್ಯಯುತ ಆಧಾರಗಳಿವೆ ಎಂದರು.

ಹಿಂದಿನ ಕಾಲದಲ್ಲಿ ಶಿಕ್ಷಣ ಮತ್ತು ಗುರು ಶಿಷ್ಯ ಸಂಬಂಧಕ್ಕೆ ಬಹಳ ಗೌರವದ ಸ್ಥಾನವಿತ್ತು. ಅದನ್ನು ಕಾಪಾಡುವ ನಿಟ್ಟಿನಲ್ಲಿ ಮತ್ತು ಮುಂದಿನ ಜನಾಂಗಕ್ಕೆ ಪರಂಪರೆ ಉಳಿಸುವುದಕ್ಕೆ ಇಂತಹ ಕಾರ್ಯಕ್ರಮಗಳು ನಡೆಯಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜು ಆಡಳಿತ ಮಂಡಳಿ ಸದಸ್ಯರಾದ ಸಂಗಣ್ಣ ಕಲಾದಗಿ,ಚಂದ್ರಶೇಖರ ಶೆಟ್ಟರ, ಪ್ರಭಾರಿ ಪ್ರಾಚಾರ್ಯ ಡಾ.ಎಂ.ಎಸ್.ಹಿರೇಮಠ, ಡಾ.ಆರ್.ಐ.ಜಂಬಗಿ.ಡಾ.ವಿ.ಎಸ್. ಚೌಧರಿ,ಡಾ.ಜಿ.ಎಸ್.ಕುಲಕರ್ಣಿ, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಮುಂಜಾನೆ ಶ್ವೇತ ವಸ್ತ್ರಧಾರಿಗಳಾದ ಹೊಸ ವಿದ್ಯಾರ್ಥಿಗಳು ಧನ್ವಂತರಿ ಹೋಮದಲ್ಲಿ ಪಾಲ್ಗೊಂಡು ಪೂರ್ಣಾಹುತಿ ಸಂದರ್ಭದಲ್ಲಿ ಹವಿಸ್ಸು ಅರ್ಪಿಸಿ. ಪವಿತ್ರ ಧಾರವನ್ನು ಕಟ್ಟಿಕೊಂಡರು. ಆ ಬಳಿಕ ಗುರುಗಳ ಆಶೀರ್ವಾದ ಪಡೆಯುವ ಮೂಲಕ ಶಿಷ್ಯೋಪನಯನ ಕಾರ್ಯಕ್ರಮ ಸಂಪನ್ನಗೊಂಡಿತು. ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನ 'ಸರ್ವಾಧ್ಯಕ್ಷರಾದ ಹಾರಕೂಡ ಶ್ರೀಗಳ ಅದ್ದೂರಿ ಮೆರವಣಿಗೆ'



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ. 22.ಹುಲಸೂರು ತಾಲೂಕಿನ ಬೇಲೂರು ಗ್ರಾಮದಲ್ಲಿ ಶ್ರೀ ಉರಲಿಂಗಪೆದ್ದಿ ಸಾಹಿತ್ಯ ಸಾಂಸ್ಕೃತಿಕವೇದಿಕೆವತಿಯಿಂದ ಆಯೋಜಿಸಿದ ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಸಾರೋಟಿನಲ್ಲಿ ಅದ್ದೂರಿ ಮೆರವಣಿಗೆಯ ಜಿಲ್ಲಾ ಮಹಿಳಾ ಬಿದ್ದ ಬದಿಯ ವ್ಯಾಪಾರಿಗಳ ವಿಭಾಗಿಯ ಅಧ್ಯಕ್ಷೆ ರಾಜೇಶ್ವರಿ ರಾಜಕುಮಾರ ಮೋರೆ ಉದ್ಘಾಟಿಸಿದರು. ಇಲ್ಲಿನ ಡಾ.ಬಿ.ಆರ್ ಅಂಬೇಡ್ಕರ್ ಸಮುದಾಯ ಭವನದದಿಂದ ಪ್ರಮುಖ ರಸ್ತೆಗಳ ಮೂಲಕ ಉರಿಲಿಂಗಪೆದ್ದಿ ಶ್ರೀ ಮಠದ ವರೆಗೆ ತೆರಳಿದ ನಂತರ ಅಲ್ಲಿಂದ ವೇದಿಕೆಯ ವರಿಗೆ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಬೇಲೂರು ಉರಿಲಿಂಗಪೆದ್ದಿ ಸಂಸ್ಥಾನ ಮಠದ ಪಿಠಾಧಿಪತಿಗಳಾದ ಪೂಜ್ಯ ಶ್ರೀ. ಪಂಚಾಕ್ಷರಿ ಮಹಾಸ್ವಾಮಿಜಿ. ಹಾಗೂ ಮಹಾಲಿಂಗ ದೇವರು. ಸಾಹಿತಿಗಳಾದ ಡಾ.ಗವಿಸಿದ್ದಪ್ಪ ಪಾಟೀಲ. ಗ್ರಾಮದ ಪ್ರಮುಖರಾದ ಜಗನ್ನಾಥ ಚಿಲ್ಲಾಬಟೆ. ಮಲ್ಲಿನಾಥ ಹಿರೇಮಠ ಹಾರಕೂಡ. ಅಪ್ಪಣ್ಣ ಜನವಾಡ. ಸುರೇಶ ಕಾನೇಕರ. ಸಂಜಯ ಜಾದವ್. ಡಾ. ರಾಜಕುಮಾರ ಮಾಳಗೆ. ಡಾ. ಸಿದ್ದಪ್ಪ ಹೊಸಮನಿ. ಶರಣ ಬಸಪ್ಪ ಬಿರಾದಾರ. ಸೇರಿದಂತೆ ಅನೇಕ ಗಣ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು. ಮೆರವಣಿಗೆಯಲ್ಲಿ ಸಂತರು ಶರಣರು ಮಹಾತ್ಮರ ಸಂದೇಶ ಹೊತ್ತ ಭಾವಚಿತ್ರದೊಂದಿಗೆ ಅಲ್ಲದೆ ನಾಡಿನ ವಿವಿಧ ಕಲಾತಂಡಗಳು ಭಾಗವಹಿಸಿ, ಕಲೆ ಪ್ರದರ್ಶನ ಮಾಡಿರುವ ದೃಶ್ಯ ಕಾಣಬಹುದು.

## ಶಿವಮಾಲಾ ಧಾರಣೆ ಮಾಡಿದ ಹಿಂದೂ ಕಾರ್ಯಕರ್ತರು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22-ಜಿಲ್ಲೆಯ ಆಳಂದಪಟ್ಟಣದಲಾಡ್ಲೆಮಶಾಕ್ ದರ್ಗಾದ ಆವರಣದಲ್ಲಿರುವ ರಾಘವ ಚೈತನ್ಯ ಶಿವಲಿಂಗ ಪೂಜೆ ವಿಚಾರ ಮತ್ತೆ ಮುನ್ನೆಲೆಗೆ ಬಂದಿದೆ. ಲಾಡ್ಲೆ ಮಶಾಕ್ ದರ್ಗಾ ಆವರಣದಲ್ಲಿರುವ ರಾಘವ ಚೈತನ್ಯ ಶಿವಲಿಂಗ ಪೂಜೆಗಾಗಿ ಹಿಂದೂ ಸಂಘಟನೆಗಳ ಕಾರ್ಯಕರ್ತರು ಫೆ.26ರಂದು ಆಳಂದ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಅದಕ್ಕಾಗಿ ಆಂದೋಲಾದ ಸಿದ್ದಲಿಂಗ ಶ್ರೀ ನೇತೃತ್ವದಲ್ಲಿ ನಗರದ ರಾಮಮಂದಿರದಲ್ಲಿ ಶಿವಮಾಲಾ ಧಾರಣೆ ಮಾಡಿದ್ದಾರೆ. ಶಿವಮಾಲಾ ಧರಿಸಿರುವ ಹಿಂದೂ ಸಂಘಟನೆಗಳ ಕಾರ್ಯಕರ್ತರು ಶಿವರಾತ್ರಿಯಂದು ಆಳಂದ ಪಟ್ಟಣಕ್ಕೆ ತೆರಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.




ಬಸವಕಲ್ಯಾಣ :- ಹುಲಸೂರು ತಾಲೂಕಿನ ಬೇಲೂರು ಗ್ರಾಮದಲ್ಲಿ ಶ್ರೀ ಉರಲಿಂಗಪೆದ್ದಿ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ವತಿಯಿಂದ ಆಯೋಜಿಸಿದ ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮೀಜಿಗಳಿಗೆ ಚಿನ್ನದ ಉಂಗುರ ಇಡುವುದರ ಮೂಲಕ ವಿಶೇಷವಾಗಿ ಸನ್ಮಾನಿಸಿದರು.ಈ ಸಂದರ್ಭದಲ್ಲಿ ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು. ಹುಲಸೂರಿನ ಪೂಜ್ಯ ಶ್ರೀ ಡಾ ಶಿವಾನಂದ ಮಹಾಸ್ವಾಮಿಜಿ. ಕಲಬುರ್ಗಿಯ ವಿಶ್ವ ವಿದ್ಯಾಲಯದ ಕುಲಸಚಿವರಾದ ಡಾ. ರಮೇಶ್ ಲಂಡನಕರ್. ಹಿರಿಯ ಸಾಹಿತಿ ಡಾ. ನಾಗಬಾಯಿ ಬುಳ್ಳಾ. ಸಾಹಿತಿ ಡಾ. ಗವಿಸಿದಪ್ಪಾ ಪಾಟೀಲ. ಕಾಂಗ್ರೆಸ್ ಮುಖಂಡರಾದ ಧನರಾಜ ತಾಡಂಪ್ಪಳ್ಳಿ. ಗ್ರಾಮದ ಮುಖಂಡರಾದ ಜಗನ್ನಾಥ ಚಿಲ್ಲಾಬಟೆ. ಮಲ್ಲಿನಾಥ ಹಿರೇಮಠ ಹಾರಕೂಡ. ಅರ್ಜುನ ಕನಕ. ಸುರೇಶ ಕಾನೇಕರ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಹುಮನಾಬಾದ ತಾಲ್ಲೂಕಿನ ಮುಸ್ತರಿ ಪಿ.ಕೆ.ಪಿ.ಎಸ್.ಚುನಾವಣೆಯಲ್ಲಿ ವಿಜಯಶಾಲಿಯಾಗಿರುವ ಕಾಂಗ್ರೆಸ್ ಪಕ್ಷದ ಬೆಂಬಲಿತ ಅಭ್ಯರ್ಥಿಗಳಿಗೆ ಇಂದು ಮಾನ್ಯ ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ್ ಹಾಗೂ ವಿಧಾನ ಪರಿಷತ ಸದಸ್ಯರಾದ ಶ್ರೀ ಡಾ.ಚಂದ್ರಶೇಖರ ಬಿ ಪಾಟೀಲ್ ರವರು ತಮ್ಮ ಗೃಹ್ ಕಛೇರಿಯಲ್ಲಿ ಸನ್ಮಾನಿಸಿ ಶುಭಕೋರಿದರು. (ಮಲ್ಲಮ್ಮ ನುಡಿ ಚಿತ್ರ)

# ಲಿಂಗಸುಗೂರಿನ ಕಂದಾಯ ಇಲಾಖೆಯ ಸುತ್ತ ಕೋಟಿ ಕೋಟಿ ಹಗರಣದ ಹುತ್ತ





(ಶಿವು ರಾಠೋಡ್)

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು.- ಪಟ್ಟಣದ ಕಂದಾಯ ಇಲಾಖೆಯಲ್ಲಿ ನಡೆದಿರುವ 1.87 ಕೋಟಿ ರೂ.ಗಳ ಹಗರಣ ದಲ್ಲಿ ತಹಶೀಲ್ದಾರ ಕೈವಾಡವಿದೆ ಎಂದು ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಅನುಮಾನಿಸುತಿದ್ದು, ಕೋಟಿ ಕೋಟಿ ಹಗರಣದ ಸುತ್ತ ಅನುಮಾನದ ಹುತ್ತ ದಿನೆ ದಿನೆ ಬೆಳೆಯುತ್ತಿದೆ.

ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗುವ ಮುಂಚಿತವಾಗಿಯೇ ತಹಶೀಲ್ದಾರ ಶಂಶಾಲಂ ರವರು ಎಸ್‌ಡಿಎ ಯಲ್ಲಪ್ಪ ರವರನ್ನು ತನ್ನ ಚೇಂಬರ್‌ಗೆ ಕರೆಯಿಸಿ ಒತ್ತಾಯ ಪೂರ್ವಕವಾಗಿ ಅವರಿಂದ ತಪ್ಪು ಒಪ್ಪಿಗೆ ಪತ್ರವನ್ನು ಬರೆಯಿಸಿಕೊಂಡು ತದನಂತರ ಪೊಲೀಸ್ ಠಾಣೆಗೆ ಬಂದು ದೂರು ದಾಖಲಿಸಿದ್ದಾರೆಂಬ ಗುಮಾನಿಗಳು ಸಾರ್ವಜನಿಕರಲ್ಲಿ ಹುಟ್ಟಿಕೊಂಡಿವೆ.

ತಹಶೀಲ್ದಾರ ಶಂಶಾಲಂರವರು ತಮ್ಮ ಎಲ್ಲ ಕಾರ್ಯ ಚಟುವಟಿಕೆಗಳನ್ನು ಸಿಬ್ಬಂದಿ ಯಲ್ಲಪ್ಪನ ನೇತೃತ್ವ ಹಾಗೂ ಮುಂದಾಳತ್ವದಲ್ಲಿಯೇ ಮಾಡಿಸುತ್ತಿದ್ದರು.ತಹಶೀಲ್ದಾರರಿಗೆ ಯಲ್ಲಪ್ಪ ಬಲಗೈ ಭಂಟನೆಂದರೆ ತಪ್ಪಾಗಲಾರದು. ಕಂದಾಯ ಇಲಾಖೆಯ ವಿವಿಧ ಪ್ರಮಾಣ ಪತ್ರಗಳಿಗೆ ಒಂದೊಂದು ದರ ನಿಗದಿ ಮಾಡಿದ್ದರು. ಹಣ ನೀಡಿದರೆ ಕ್ಷಣಾರ್ಧದಲ್ಲಿಯೇ ಪ್ರಮಾಣಪತ್ರಗಳು ಫಲಾನುಭವಿಗಳ ಕೈಸೇರುತ್ತಿದ್ದವು ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿವೆ.

ಶಂಶಾಲಂರವರು ತಹಶೀಲ್ದಾರ ಆಗುವುದಕ್ಕೆ ಮುಂಚೆ ವಕೀಲ ವೃತಿಯನ್ನು ಮಾಡುತ್ತಿದ್ದರು. ಅನುಕಂಪದ ಆಧಾರದ ಮೇಲೆ ಕಂದಾಯ ಇಲಾಖೆಯಲ್ಲಿ ನೌಕರಿಯನ್ನು ಪಡೆದರು ಎಂಬ ಮಾಹಿತಿ ಲಭ್ಯವಾಗಿದೆ.

ವಕೀಲ ವೃತ್ತಿಯಲ್ಲಿ ಪಳಗಿರುವ ತಹಶೀಲ್ದಾರರು ಪ್ರಕರಣಗಳನ್ನು ತಿರುಚುವ ಕಲೆ ಕರಗತ ಮಾಡಿಕೊಂಡಿದ್ದರು. ಇದರಿಂದಾಗಿ ಈ ಕೋಟಿ ಕೋಟಿ ಹಗರಣದಲ್ಲಿ ನಾಜುಕಾಗಿ ಅವ್ಯವಹಾರ ನಡೆಸಿದ್ದು, ಸಿಬ್ಬಂದಿ ಯಲ್ಲಪ್ಪನ ಮುಖಾಂತರ ಅವ್ಯವಹಾರ ನಡೆಸಿದ್ದು, ಈ ಹಗರಣದಲ್ಲಿ ತಹಶೀಲ್ದಾರ ಕಚೇರಿಯ 2-3 ಸಿಬ್ಬಂದಿಗಳು ಭಾಗಿಯಾಗಿದ್ದಾರೆಂಬ ಆರೋಪಗಳು ಕೇಳಿ ಬರುತ್ತಿವೆ.

1.87 ಕೋಟಿಯ ಅವ್ಯವಹಾರ ನಡೆಸಿದ್ದು, ಈ ಹಣದ ಪಾಲುಗಾರಿಕೆಯಲ್ಲಿ ವ್ಯತ್ಯಾಸವಾಗಿದ್ದರಿಂದ ಈ ಹಗರಣ ಬೆಳಕಿಗೆ ಬಂದಿದೆ. ಪಾಲುಗಾರಿಕೆ ಸರಿ ಹೊಂದಿದ್ದರೆ ಈ ಹಗರಣ ಬೆಳಕಿಗೆ ಬರುತ್ತಿರಲಿಲ್ಲ ಎಂಬ ಸುಳಿವು ದೊರಕಿದೆ.

ಈ ಹಿಂದೆ ಇಂತಹ ಎಷ್ಟು ಹಗರಣಗಳು ನಡೆದಿವೆಯೋ ತಿಳಿಯದು, ಆದರೆ ಒಬ್ಬ ವ್ಯಕ್ತಿಯಿಂದ ಭಾರಿ ಅವ್ಯವಹಾರ ನಡೆದಿರುವುದಕ್ಕೆ ಸಾಧ್ಯವೇ ಇಲ್ಲ. ತಹಶೀಲ್ದಾರ ಹಾಗೂ ಸಿಬ್ಬಂದಿಗಳು ಭಾಗಿಯಾಗಿರುವ ಶಂಕೆ ಇದೆ. ಈ ಹಗರಣದಲ್ಲಿ ಯಲ್ಲಪ್ಪನನ್ನು ಬಲಿಪಶು ಮಾಡಲಾಗಿದೆ. ನಾಮಕಾವಸ್ತೆ ತನಿಖೆ ಮಾಡಿದರೆ ಸಾಲದು, ಉನ್ನತ ಮಟ್ಟದ ತನಿಖೆಯಿಂದ ಮಾತ್ರ ಈ ಕೋಟಿ ಹಗರಣದಲ್ಲಿರುವ ಕಾಣದ ಕೈಗಳನ್ನು ಕಂಡು ಹಿಡಿಯಲು ಸಾಧ್ಯ.

ಕೋಟಿ ಹಗರಣವನ್ನು ಮುಚ್ಚಿ ಹಾಕುವ ತಂತ್ರ ಕುತಂತ್ರಗಳು ನಡೆಯುತ್ತಿವೆ.

ಕಾರಣ ಉನ್ನತ ಮಟ್ಟದ ತನಿಖೆಯಿಂದ ಮಾತ್ರ ಈ ಹಗರಣವನ್ನು ಭೇದಿಸಿ ಹಗರಣದಲ್ಲಿ ಭಾಗಿಯಾಗಿರುವ ಎಲ್ಲ ಸಿಬ್ಬಂದಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡಾಗ ಮಾತ್ರ ಸಾರ್ವಜನಿಕರ ಹಣ ಮರಳಿ ಪಡೆಯಲು ಸಾಧ್ಯ ಹಾಗೂ ಮತ್ತೊಮ್ಮೆ ಇಂತಹ ಪ್ರಕರಣಗಳು ನಡೆಯದಿರಲು ಈ ಪ್ರಕರಣ ಪಾಠವಾಗಲಿದೆ.

## 'ನೀರು, ಮಣ್ಣು ದೇವರು ಕೊಟ್ಟ ಕಾಣಿಕೆ ಅದು ಸಂರಕ್ಷಣೆ ಮಾಡಬೇಕು' ಶಿವಶೇಖರ ಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ರೈತರು ಮಣ್ಣು,ನೀರಿನ ಸಂರಕ್ಷಣೆ ಮಾಡುವುದು ಅತಿ ಅವಶ್ಯಕವಾಗಿದ್ದು,ಮನೆಗೊಂದು ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರು ಪಾಲದಾರರಾಗಬೇಕು ಎಂದು ಅಬ್ಬೆತುಮಕೂರಿನ ಶ್ರೀ ವಿಶ್ವರಾಧ್ಯ ಸಿದ್ದಸಂಸ್ಥಾನ ಮಠದ ಕಿರಿಯ ಸ್ವಾಮಿಗಳಾದ ಶಿವಶೇಖರ ಸ್ವಾಮಿ ಹೇಳಿದರು

ತಾಲೂಕಿನ ಅಬ್ಬೆತುಮಕೂರ ಗ್ರಾಮದ ಶ್ರೀ ವಿಶ್ವರಾಧ್ಯ ಸಿದ್ದ ಸಂಸ್ಥಾನ ಮಠದಲ್ಲಿ ಜಿಲ್ಲಾ ಪಂಚಾಯತ ಯಾದಗಿರಿ, ಕೃಷಿ ಇಲಾಖೆ ಯಾದಗಿರಿ ವತಿಯಿಂದ ಪ್ರದಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ, ಜಲಾನಯನ ಯಾತ್ರೆ ಪ್ರಯುಕ್ತ ಪಾನಿ ಕೀ ಪಾಠಶಾಲಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೇಸಿಗೆ ಆರಂಭವಾಗಿದ್ದು, ನೀರಿನ್ನು ಮಿತವಾಗಿ ಬಳಸಬೇಕು. ಮಾನವ ಹಾಗೂ ಪ್ರಾಣಿ-ಪಕ್ಷಿ ಸಂಕುಲ ಆಹಾರವಿಲ್ಲದೆ ಹಲವಾರು ದಿನಗಳು ಬದುಕಬಹುದು. ಆದರೆ ಕುಡಿಯುವ ನೀರಿಲ್ಲದೆ ಒಂದು ದಿನ ಬದುಕುವುದೂ ಅತೀ ಕಷ್ಟ ಎಂದರು.

ಮಳೆ ಪ್ರಮಾಣ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಇದರಿಂದ ನೀರಿನ ಸಮಸ್ಯೆ ಎದುರಾಗುತ್ತಿದೆ. ಹೀಗಾಗಿ ನೀರನ್ನು ಪೋಲು ಮಾಡದೆ ಎಚ್ಚರಿಕೆಯಿಂದ ಬಳಸಬೇಕು ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸುರೇಶ ಮಾತನಾಡಿ, ನೀರನ್ನು ಮಿತವಾಗಿ ಬಳಸಬೇಕು. ನೀರಿನ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅಗತ್ಯವಿದೆ. ನಾವೆಲ್ಲರೂ ಸಂಶೋಧನೆಗಳಿಂದ ಎಷ್ಟೆ ವೈಜ್ಞಾನಿಕವಾಗಿ, ತಾಂತ್ರಿಕವಾಗಿ ಮುಂದುವರಿದರೂ, ನಮ್ಮಿಂದ ನೀರನ್ನು ಸೃಷ್ಟಿಸಲು ಸಾಧ್ಯವಿಲ್ಲ ಎಂದರು.

ನೀರು ದೇವರು ಕೊಟ್ಟ ಕಾಣಿಕೆ. ಅದನ್ನು ಮುಂದಿನ ಪೀಳಿಗೆಗೆ ಕೊಡುಗೆಯಾಗಿ ನೀಡಬೇಕೆಂದರೆ ನೀರನ್ನು ಸಂರಕ್ಷಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿ ಇಲಾಖೆಯ ತಾಂತ್ರಿಕ ಅಧಿಕಾರಿಗಳಾದ ಯಾಮರೆಡ್ಡಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರುಗಳಾದ ಬಸವರಾಜ ಬೊಮ್ಮನ, ಟಾಟಾ ಟ್ರಸ್ಟ್ ಕಾರ್ಯಕ್ರಮ ಸಂಯೋಜಕ ಮಂಜುನಾಥ, ಅಬ್ಬೆತುಕೂರಿನ ಪಶು ವೈದ್ಯಾಧಿಕಾರಿ ಡಾ. ಶಿವಮಂಗಲಾ, ತೋಟಗಾರಿ-ಕೆ ವಿಸ್ತಾರಣ ಮುಂದಾಳು ರಾಜಕುಮಾರ, ಸಹಾಯಕ ಕೃಷಿ ನಿರ್ದೇಶಕರು ವಿಷಯ ತಜ್ಞರಾದ ರಾಜಕುಮಾರ, ಅಬ್ಬೆಮಕೂರಿನ ಬಿಎಡ್ ವಿದ್ಯಾರ್ಥಿಗಳು, ಹಾಗೂ ಗ್ರಾಮಸ್ಥರು ಇದ್ದರು.

## ಲೋಕಸೇವಾ ಆಯೋಗದಿಂದ ಗ್ರೂಪ್ 'ಬಿ' ಹುದ್ದೆಗೆ ನೇಮಕಾತಿ ಪರೀಕ್ಷೆ

# ಪರೀಕ್ಷೆ ಸುಸೂತ್ರವಾಗಿ ನಡೆಸಿ,ಕಪ್ಪು ಚುಕ್ಕೆಗೆ ಅವಕಾಶ ಮಾಡಿಕೊಡಬೇಡಿ-ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22-ಕರ್ನಾಟಕ ಲೋಕಸೇವಾ ಆಯೋಗದಿಂದ ವಿವಿಧ ಇಲಾಖೆಯಲ್ಲಿನ ಗ್ರೂಪ್ 'ಬಿ' ಹುದ್ದೆಗಳ ನೇಮಕಾತಿಗೆ ಇದೇ ಫೆಬ್ರವರಿ 23 ರಿಂದ 28ರ ವರೆಗೆ ಕಲಬುರಗಿ ನಗರದ 35 ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಿದ್ದು, ಜಿಲ್ಲೆಯಾದ್ಯಂತ ಯಾವುದೇ ಕಪ್ಪು ಚುಕ್ಕೆಗೆ ಅವಕಾಶ ಮಾಡಿಕೊಡದೆ ಸುಸೂತ್ರವಾಗಿ ಮತ್ತು ಪಾರದರ್ಶಕ ರೀತಿಯಲ್ಲಿ ಪರೀಕ್ಷೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಖಡಕ್ ಸೂಚನೆ ನೀಡಿದರು.

ಶನಿವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಪರೀಕ್ಷಾ ಕೇಂದ್ರ ಮುಖ್ಯಸ್ಥರು, ಮಾರ್ಗಾಧಿಕಾರಿಗಳು, ವೀಕ್ಷಕರೊಂದಿಗೆ ಪೂರ್ವಸಿದ್ಧತಾ ಸಭೆ ನಡೆಸಿದ ಅವರು, ಪರೀಕ್ಷೆ ಪಾರದರ್ಶಕವಾಗಿ



ನಡೆಸಬೇಕು. ಯಾವುದೇ ರೀತಿಯ ನಕಲಿಗೆ ಇಲ್ಲಿ ಅವಕಾಶ ಇಲ್ಲ ಎಂದ ಅವರು ಎಲ್ಲಾದರು ನಕಲು ಪ್ರಕರಣ ವರದಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಫೆಬ್ರವರಿ 23 ರಂದು ನಡೆಯಲಿರುವ ಪರೀಕ್ಷೆಗೆ 35 ಪರೀಕ್ಷಾ ಕೇಂದ್ರದಲ್ಲಿ 11,535 ಅಭ್ಯರ್ಥಿಗಳು ಹಾಜರಾಗಲಿದ್ದಾರೆ. ಅದೇ ರೀತಿ ಫೆಬ್ರವರಿ 24, 25 ಹಾಗೂ 27 ರಂದು ಪ್ರತಿ ದಿನ 12 ಕೇಂದ್ರದಲ್ಲಿ 3,745 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಪರೀಕ್ಷೆ ಸುಗಮವಾಗಿ ನಡೆಯುವ ಸಂಬಂಧ ಈಗಾಗಲೆ ಸ್ಥಳೀಯ ನಿರೀಕ್ಷಣಾಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರನ್ನು ನೇಮಿಸಲಾಗಿದೆ. ಪರೀಕ್ಷೆ ನಡೆಯುವ ಮುನ್ನವೆ ಪರೀಕ್ಷಾ ಕೇಂದ್ರದಲ್ಲಿ ಅಗತ್ಯ ಮೂಲಸೌಕರ್ಯಗಳಾದ ವಿದ್ಯುತ್, ಕುಡಿಯುವ ನೀರು, ಶೌಚಾಲಯ ಇರುವುದನ್ನು ಕೇಂದ್ರದ ಮುಖ್ಯಸ್ಥರು ಖಾತ್ರಪಡಿಸಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ತಪಾಸಣೆಗೆ ಪುರುಷ ಮತ್ತು ಮಹಿಳಾ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕೆಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಮೊಬೈಲ್ ಬ್ಯಾನ್,ಸಿ.ಸಿ.ಟಿ.ವಿ. ಕಣ್ಗಾವಲಿನಲ್ಲಿ ಪರೀಕ್ಷೆ: ಪರೀಕ್ಷೆ ಸುಸೂತ್ರವಾಗಿ ನಡೆಯುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಸೇರಿದಂತೆ ಎಲ್ಲಾ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸಿ.ಸಿ.ಟಿ.ವಿ ಕಣ್ಗಾವಲಿನಲ್ಲಿ ಪರೀ-ಕ್ಷೆ ನಡೆಯಲಿದ್ದು, ಜಿಲ್ಲಾ ಕೇಂದ್ರದಿಂದ ವೆಬ್‌ಕಾಸ್ಟಿಂಗ್ ಮೂಲಕ ಪರೀಕ್ಷೆ ಮೇಲ್ವಿಚಾರಣೆ ಮಾಡಲಾಗುತ್ತದೆ. ಇನ್ನು ಡ್ರೆಸ್ ಕೋಡ್ ಕುರಿತಂತೆ ಪ್ರವೇಶ ಪತ್ರದಲ್ಲಿ ಮಾಹಿತಿ ನೀಡಿದ್ದು, ಅದನ್ನು ಎಲ್ಲಾ ಅಭ್ಯರ್ಥಿಗಳು ಪಾಲಿಸಬೇಕು ಎಂದು ಡಿ.ಸಿ. ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ, ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ ಸೇರಿದಂತೆ ಇನ್ನಿತರ ಅಧಿಕಾರಿಗಳು ಇದ್ದರು.

# ಹಿರಿಯರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಕುಟುಂಬದ ಸದಸ್ಯರೆಲ್ಲರೂ ನಡೆಯಬೇಕು

ಮಲ್ಲಮ್ಮ ನುಡಿ ವಾರ್ತೆ

:ವೀರಭದ್ರಪ್ಪಉಪ್ಪಿನಬೀದರ. ಫೆ.22:ಪರಿವಾರದಹಿರಿಯರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಕುಟುಂಬದ ಸದಸ್ಯರೆಲ್ಲರೂ ನಡೆದುಕೊಂಡು ಜೀವನವನ್ನು ಸಾರ್ಥಕಗೊಳಿಸಬೇಕೆಂದು ಪಶುವೈದ್ಯಕೀಯ ವಿಶ್ವವಿದ್ಯಾಲಯದ ನಿವೃತ್ತ ಉಪ ಹಣಕಾಸು ಅಧಿಕಾರಿ ವೀರಭದ್ರಪ್ಪ ಉಪ್ಪಿನ ರವರು ಕರೆ ನೀಡಿದರು. ಅವರು ಇಂದು ಹುಮನಾಬಾದ ತಾಲೂಕಿನ ಗಡವಂತಿ ಗ್ರಾಮದಲ್ಲಿ ನಡೆದ ಶತಾಯುಷಿ ದಿವಂಗತ ರತ್ನಮ್ಮ ಎಸ್. ಹುಗ್ಗೆಯವರ ಐದನೆಯ ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಿದ್ದರು. ಮುಂದುವರೆದು ಮಾತನಾಡಿ, ದಿವಂಗತ ರತ್ನಮ್ಮನವರು ತಮ್ಮ ಪ್ರಾಮಾಣಿಕ ಕಾಯಕ ನಿಷ್ಠೆಯಿಂದ ಇಡೀ ಗ್ರಾಮದಲ್ಲಿ ಜನಪ್ರಿಯತೆಯನ್ನು



ಗಡವಂತಿ ಗ್ರಾಮದಲ್ಲಿ ಶತಾಯುಷಿ ರತ್ನಮ್ಮನವರ ಐದನೇ ಪುಣ್ಯಸ್ಮರಣೆ

ಗಳಿಸಿ ಕೊಂಡಿದ್ದರು. ನೇರ, ದಿಟ್ಟ ನಡೆ ನುಡಿಯಿಂದ ತಮ್ಮ ಕುಟುಂಬದ ಮೇಲೆ ಸಂಪೂರ್ಣ ನಿಯಂತ್ರಣವನ್ನಿಟ್ಟುಕೊಂಡಿದ್ದರು.

ಕೇವಲ ತಮ್ಮ ಕುಟುಂಬವಷ್ಟೆ ಅಲ್ಲದೆ, ಇಡೀ ಗ್ರಾಮದ ಜನರೆಲ್ಲರೂ ಸುಖದಿಂದ ಬಾಳಬೇಕೆಂಬ ಸದಾಶಯವನ್ನು ಹೊಂದಿದ್ದರು. ಎಷ್ಟೋ ಸಲ ಸಾವು ಸಮೀಪ ಬಂದರೂ ತಮ್ಮ ಆತ್ಮಬಲ, ಪ್ರಬಲ ಸಂಕಲ್ಪ ಶಕ್ತಿಯಿಂದ ಅದನ್ನು ಹಿಮ್ಮೆಟ್ಟಿಸಿ, ನೂರು ವರ್ಷಗಳ ಕಾಲ ಯಾವುದೇ ಪ್ರಮುಖ ರೋಗ ರುಜಿನಗಳಿಲ್ಲದೆ ಬದುಕಿದ್ದ ಧೀಮಂತ ಮಹಿಳೆಯಾಗಿದ್ದರು. ತಮ್ಮ ಜೀವನದ ಕೊನೆ ಉಸಿರಿರುವವರೆಗೂ ಕುಟುಂಬದ ಮೇಲೆ ಹಿಡಿತ ಹಾಗೂ ಮುಖದಲ್ಲಿ ರಾಜಗಾಂಭೀರ್ಯವನ್ನು ಕಾಪಾಡಿಕೊಂಡು ಬಂದಿದ್ದ ಆದರ್ಶ ಮಹಿಳೆಯಾಗಿದ್ದರು ಎಂದು ಕೊಂಡಾಡಿದ್ದರು. ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲದಲ್ಲಿ ಹಿರಿಯ ಆಪ್ತ ಕಾರ್ಯದರ್ಶಿಗಳಾದ ನಾಗಭೂಷಣ ಹುಗ್ಗೆಯವರು ಪ್ರಾಸ್ತಾವಿಕವಾಗಿ ಮಾತನಾಡಿ, ದಿವಂಗತ ರತ್ನಮ್ಮ ಅಜ್ಜಿಯವರು ನಮ್ಮ ಕುಟುಂಬದ ಸದಸ್ಯರೆಲ್ಲರಿಗೆ ಮಾರ್ಗದರ್ಶಕರಾಗಿದ್ದರು. ಪ್ರತಿವರ್ಷ ಅವರ ಪುಣ್ಯ ಸ್ಮರಣೆಯಂದು ಒಂದು ಗಿಡ ನೆಟ್ಟು ಅದನ್ನು ಜೋಪಾನ ಮಾಡಿಕೊಂಡು ಬಂದಿರುತ್ತೇವೆ. ಸಾಮೂಹಿಕ ಅನ್ನ ಸಂತರ್ಪಣೆ ಹಾಗೂ ಭಜನೆಯನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ ಎಂದು ನುಡಿದ ರು. ಸಸಿಗೆ ನೀರೆರೆದು ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಅಮಿತ ಭೂಷಣ, ಶೋಭಾ, ಕುಸುಮಾವತಿ, ಕಲಾವತಿ, ಲಕ್ಷ್ಮಿಬಾಯಿ,ಶ್ರೀದೇವಿ,ರಾಜೇಶ್ವರಿ, ಅಶ್ವಿನಿ, ಇಂದಮ್ಮ, ಶರಣಮ್ಮ, ಮಹಾದೇವಿ ಹಾಗೂ ಓಣಿಯ ಅನೇಕ ಜನರು ಹಾಜರಿದ್ದರು.

# ತಾ. ಪಂ ಅನುದಾನದಲ್ಲಿ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ : ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.22: 2024–25ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ತಾಲೂಕು ಪಂಚಾಯತಿ ಅನುದಾನದಲ್ಲಿ ನಗರ ಪ್ರದೇಶಗಳಲ್ಲಿ ವಾಸಿಸುವ ವಿಕಲಚೇತನರನ್ನು ಹೊರತುಪಡಿಸಿ, ಕೊಪ್ಪಳ ಜಿಲ್ಲೆಯ ಗ್ರಾಮೀಣ ಭಾಗದ ತೀವ್ರತೆರನಾದ ದೈಹಿಕ ವಿಕಲಚೇತನರಿಗೆ ಜೀವಿತಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿ–ಚಕ್ರವಾಹನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಮೀಣ ಭಾಗದಲ್ಲಿ ವಾಸಿಸುವ ದೈಹಿಕ ವಿಕಲಚೇತನರು ಶೇ.75 ಕ್ಕಿಂತ ಹೆಚ್ಚಿನ ವಿಕಲತೆ ಪ್ರಮಾಣ ಹೊಂದಿದ, ಸೊಂಟದ ಕೆಳಗೆ ಅಂದರೆ ಎರಡು ಕಾಲುಗಳಲ್ಲಿ ಸ್ವಾಧೀನ ಕಳೆದುಕೊಂಡಿರುವ ಎರಡು ಕೈಗಳು ಸ್ವಾಧೀನದಲ್ಲಿರುವ ಹಾಗೂ ಇತರೆ ಎಲ್ಲಾ ರೀತಿಯಲ್ಲಿ ಸದೃಢವಾಗಿರುವವರು ದೈಹಿಕ ವಿಕಲಚೇತನರಿಗೆ ಜೀವಿತಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿ–ಚಕ್ರವಾಹನ ನೀಡಲಾಗುವುದು. ಇದಕ್ಕಾಗಿ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ವರಮಾನ 2 ಲಕ್ಷ ಒಳಗಿರಬೇಕು ಹಾಗೂ 20 ರಿಂದ 60 ವರ್ಷ ವಯೋಮಾನದೊಳಗಿನವರಾಗಿರಬೇಕು. ಆದಾಯ ಮಿತಿ ರೂ. 2 ಲಕ್ಷದೊಳಗಿರಬೇಕು.

ಅರ್ಹ ಫಲಾನುಭವಿಗಳು ಯು.ಡಿ.ಐ.ಡಿ ಕಾರ್ಡ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಸ–ಕ್ಷಮ ಪ್ರಾಧಿಕಾರದಿಂದ ಪಡೆದಿರುವ (10 ವರ್ಷ) ವಾಸಸ್ಥಳ, ನಾಲ್ಕು ಫೋಟೋ, ಜನ್ಮ ದಿನಾಂಕದ ದಾಖಲೆ, ಈ ಹಿಂದೆ ಯಾವುದೇ ಅನುದಾನದಲ್ಲಿ ಯಂತ್ರಚಾಲಿತ ದ್ವಿ–ಚಕ್ರವಾಹನ ಪಡೆದಿಲ್ಲವೆಂದು ರೂ. 100 ಛಾಪಾಕಾಗದ ನೋಟರಿ ದೃಢಿಕರಣ ಪ್ರಾಮಾಣ ಪತ್ರ, ಆಧಾರ ಕಾರ್ಡ್, ಮತದಾರರ ಗುರುತಿನ ಚೀಟಿ, ಬಿಪಿಎಲ್ ಕಾರ್ಡ್ ಹಾಗೂ ಚಾಲನಾ ಪರವಾನಿಗೆ ಪತ್ರ, ಈ ಎಲ್ಲಾ ದಾಖಲೆಗಳೊಂದಿಗೆ ಮಾರ್ಚ್ 10ರ ಒಳಗಾಗಿ ಜಿಲ್ಲೆಯ ಆಯಾ ತಾಲೂಕು ಪಂಚಾಯತಿಗಳಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತಾಲೂಕು ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಂ.ಆರ್. ಡಬ್ಲ್ಯೂ.ಗಳನ್ನು ಅಥವಾ ಎಂ.ಆರ್.ಡಬ್ಲ್ಯೂಗಳಾದ ಕೊಪ್ಪಳ ತಾಲ್ಲೂಕಿನ ಜಯಶ್ರೀ ಮೊ.ಸಂ: 9980126391, ಯಲಬುರ್ಗಾದ ಶಶಿಕಲಾ ಮೊ.ಸಂ: 8147749523, ಕುಷ್ಟಗಿಯ ಚಂದ್ರಶೇಖರ ಮೊ.ಸಂ: 9916308585 ಹಾಗೂ ಗಂಗಾವತಿ ತಾಲ್ಲೂಕಿನ ಮಂಜುಳಾ ಮೊ.ಸಂ: 7975398202, ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಕೊಪ್ಪಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಗು ಮನುಕುಲದ ಆಸ್ತಿ ಆಗಬೇಕು : ವಿಜಯಶಂಕರ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.22: ಮಗುವನ್ನು ಮನುಕುಲದ ಆಸ್ತಿಯನ್ನಾಗಿ ಮಾಡುವ ಬಹುದೊಡ್ಡ ಜವಾಬ್ದಾರಿ ಸಮಾಜದ ಮೇಲಿದೆ ಎಂದು ಮೇಘಾಲಯ ರಾಜ್ಯದ ರಾಜ್ಯಪಾಲರಾದ ಗೌರವಾನ್ವಿತ ಚಂದ್ರಶೇಖರ ಹೆಚ್. ವಿಜಯಶಂಕರ್ ಹೇಳಿದರು. ಅವರು ಶನಿವಾರ ದಿವ್ಯಾಂಗ ಮಕ್ಕಳ ಶಾಲೆ, ಹಿಂದು ಸೇವಾ ಪ್ರತಿಷ್ಠಾನ ಮತ್ತು ಮಹಾತ್ಮಗಾಂಧಿ ಅನಾಥ ಸೇವಾ ಟ್ರಸ್ಟ್ ಸಹಯೋಗದಲ್ಲಿ ಕೊಪ್ಪಳ ನಗರದಲ್ಲಿ ನಡೆಸುತ್ತಿರುವ ಅರುಣ ಚೇತನ ದಿವ್ಯಾಂಗ ಮಕ್ಕಳ ಶಾಲೆಗೆ ಭೇಟಿ ನೀಡಿದ ನಂತರ ಮಾತನಾಡಿದರು.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಅವರಿಗೆ ಪೌಷ್ಟಿಕ ಆಹಾರ ಸಿಗಬೇಕು. 4 ರಿಂದ 14 ವರ್ಷದಲ್ಲಿ ಮಕ್ಕಳ ಶಾರೀರಿಕ ಬೆಳೆವಣಿಗೆ ಜೊತೆಗೆ ಅವರ ಮಾನಸಿಕ ಬೆಳವಣಿಗೆ ಸಹ ಆಗುತ್ತದೆ. ಕೆಲವೊಂದು ಮಕ್ಕಳ ಶಾರೀರಿಕ ಅಂಗವೈಕಲ್ಯ ಅನುವಂಶೀಕವಾಗಿ ಬರುತ್ತದೆ. ಅವರಿಗೆ ಉತ್ತಮ ಚಿಕಿತ್ಸೆ ನೀಡುವ ಮೂಲಕ ಗುಣಪಡಿಸುವ ಕೆಲಸ ಮಾಡಬೇಕು ಎಂದರು.

ಸಂಬಂಧಿಸಿದ ಇಲಾಖೆಯ ಮೂಲಕ ಇಂತಹ ಮಕ್ಕಳಿಗೆ ಸೌಲಭ್ಯಗಳನ್ನು ಒದಗಿಸುವ ಕೆಲಸ ಆಗಬೇಕು. ಮೈಸೂರಿನಲ್ಲಿ ಸ್ಪೀಚ್ ???ಂಡ ಹಿಯ–ರಿಂಗ್ ಸಂಸ್ಥೆ ಇದೆ. ಇದು ಮೈಸೂರು ಮಹಾರಾಜರು ಪ್ರಾರಂಭಿಸಿದರು. ಈ ಸಂಸ್ಥೆ ಇಂತಹ ವಿಶೇಷ ಚೇತನ ಮಕ್ಕಳ ಸರ್ವೆಯನ್ನು ಆಗಾಗ ನಡೆಸುತ್ತಾರೆ. ನಮ್ಮ ಮಕ್ಕಳು ಆರೋಗ್ಯ ಪೂರ್ಣವಾಗಿ ಬದುಕಬೇಕು. ಸತ್ಯಸಾಯಿ ಟ್ರಸ್ಟಿನ ಮಧುಸುಧನ್ ಭಾಬಾ ಅವರು ಇಂತಹ ವಿಶೇಷ ಚೇತನ ಮಕ್ಕಳಿಗೆ ಉಚಿತ ಸೇವೆ ನೀಡುತ್ತಾರೆ. ಅವರಿಗೆ ಇಲ್ಲಿಗೆ ಬರಲು ತಿಳಿಸುತ್ತೇನೆ ಎಂದು ಹೇಳಿದರು.

ಇದೊಂದು ಒಳ್ಳೆ ಪುಣ್ಯದ ಕಾರ್ಯ ಮಾಡುತ್ತಿದ್ದಿರಾ ಇದನ್ನು ಮಾಡುವ ಮನಸ್ಸು ಬೇಕಲ್ಲ. ಅದನ್ನು ನೀವು ಮಾಡಿ ತೋರಿಸಿದ್ದಿರಾ. ನಾನು ಬದುಕುವದರ ಜೊತೆಗೆ ಸಮಾಜವೂ ಬದುಕಬೇಕು. ನಾನೊಬ್ಬನೆ ಬದುಕಿದರೆ ಸಾಲದು. ಅರುಣ ಚೇತನ ದಿವ್ಯಾಂಗ ಮಕ್ಕಳ ಶಾಲೆ ಒಳ್ಳೆಯ ಕಾರ್ಯ ಮಾಡುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಮಾಜಿ ಶಾಸಕ ಬಸವರಾಜ ದಢೇಸೂಗೂರು, ಹಿಂದು ಸೇವಾ ಪ್ರತಿಷ್ಠಾನ ಸಂಸ್ಥೆಯ ಎಂ.ಡಿ ಮಿಲಿಂದ್, ಸಂಚಾಲಕ ಸುಧಾಕರ್, ಮಹೇಶ ನಾಲ್ವಾಡ್, ರಾಜೇಂದ್ರ ಜೈನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಅರುಣ ಚೇತನ ದಿವ್ಯಾಂಗ ಮಕ್ಕಳ ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗಮನಸೆಳೆದ ಕುಂಭಮೇಳ, ಕಲಾ ತಂಡಗಳು 'ರನ್ನ ವೈಭವ' ಬೆಳಗಲಿಯಲ್ಲಿ ವೈಭವದ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ಮೂರು ದಿನಗಳ ಕಾಲ ನಡೆಯುವ 'ರನ್ನವೈಭವ–2025' ಉತ್ಸವ ಶನಿವಾರ ವಿದ್ಯುಕ್ತವಾಗಿ ಪ್ರಾರಂಭಗೊಂಡಿದ್ದು, ಜಿಲ್ಲೆಯ ರನ್ನ ಬೆಳಗಲಿಯಲ್ಲಿ ಮೊದಲ ದಿನ ನಡೆದ ವೈಭವದ ಸಾಂಸ್ಕೃತಿಕ ಮೆರವಣಿಗೆಗೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಚಾಲನೆ ನೀಡಿದರು. ರನ್ನ ಬೆಳಗಲಿಯ ಬಂದಲಕ್ಷ್ಮೀ ದೇವಿ ದೇವಸ್ಥಾನದ ಬಳಿ ಸಚಿವ ತಿಮ್ಮಾಪುರ ರನ್ನ ಕವಿಯ ಗದಾಯುದ್ಧದ ಪ್ರತೀಕ ಗದೆಯನ್ನು ಪ್ರದರ್ಶಿಸುವ ಮೂಲಕ ಮೆರವಣಿಗೆ ಉದ್ಘಾಟಿಸಿದರು. ಬೆಳಿಗ್ಗೆ 11 ಗಂಟೆಗೆ ಆರಂಭವಾದ ಮೆರವಣಿಗೆ ಬಸ್ ನಿಲ್ದಾಣ, ಪಾದಗಟ್ಟೆ ಮೂಲಕ ಕವಿ ಚಕ್ರವರ್ತಿ ರನ್ನ ವೇದಿಕೆಗೆ ತಲುಪಿತು. ಮೆರವಣಿಗೆಯುದ್ದಕ್ಕೂ ರನ್ನ



ಉತ್ಸವ, ಕನ್ನಡ ಧ್ವಜಗಳು ರಾರಾಜಿಸಿದವು. ಪೂರ್ಣಕುಂಭ ಹೊತ್ತ ಮಹಿಳೆಯರು, ಛತ್ರಿ, ಚಾಮರಗಳು ನೋಡುಗರ ಗಮನಸೆಳೆದವು.

ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಜನಪದ ಕಲಾತಂಡಗಳು ಮೆರವಣಿಗೆಗೆ ಕಳೆತಂದವು. ಹಲಗಿ ಮಜಲು, ಡೊಳ್ಳು ಕುಣಿತ, ಕರಡಿ ಮಜಲು, ಶಹನಾಯಿ ವಾದನ, ತಾಸೆ ವಾದನ, ಜಾನಪದ ಕೋಲಾಟ, ಕಣಿ ವಾದನ, ಸಂಬಾಳ ವಾದನ, ಜಾಂಜ್ ಪತಕ, ಪೂಜಾ ಕುಣಿತ, ವೀರಗಾಸೆ ಸೇರಿದಂತೆ 30ಕ್ಕೂ ಹೆಚ್ಚು ಕಲಾ ತಂಡಗಳು ಜಾನಪದದ ಮೆರಗನ್ನು ಹೆಚ್ಚಿಸಿದವು.

ಇಳಕಲ್ಲ ಸೀರೆಯುಟ್ಟು ಕುಂಭ ಹೊತ್ತ ಮಹಿಳೆಯರು, ವೇಷಭೂಷಣ ತೊಟ್ಟು ನಿಂತ ಶಾಲಾ ಮಕ್ಕಳು, ಜಿಲ್ಲಾಧಿಕಾರಿ ಜಾನಕಿ ಸೇರಿದಂತೆ ಸರಕಾರಿ ಅಧಿಕಾರಿಗಳು ಒಂದೇ ಬಣ್ಣದ(ಕೆಂಪು ಹಳದಿ ಬಣ್ಣ) ಸೀರೆಯುಟ್ಟು ಗಮನಸೆಳೆದರು.

ರನ್ನ ವೈಭವ ಉತ್ಸವದ ಅಂಗವಾಗಿ ರೂಪಿಸಲಾಗಿದ್ದ ರನ್ನ ರಥಗಳು ವಿವಿಧೆಡೆ ಸಂಚರಿಸಿ ಇಂದಿನ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದವು.

ಜಿಲ್ಲಾಧಿಕಾರಿ ಜಾನಕಿ ಕೆ.ಎಂ., ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಜಿಪಂ ಸಿಇಒ ಶಶಿಧರ ಕುರೇರ, ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಮುಧೋಳ ತಹಶೀಲ್ದಾರ್ ಮಹಾದೇವ ಸನಮುರಿ, ರಬಕವಿ–ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ, ಡಿವಾಯ್‌ಎಸ್‌ಪಿ ಶಾಂತವೀರ, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ರೂಪಾ ಹೊಸಟ್ಟಿ, ಮುಖ್ಯಾಧಿಕಾರಿ ಎನ್.ಎ.ಲಮಾಣಿ, ಬಿಇಓ ಎಸ್.ಎಂ.ಮುಲ್ಲಾ, ರನ್ನ ಪ್ರತಿಷ್ಠಾನದ ಸದಸ್ಯ ಸಿದ್ದರಾಮ ಶಿವಯೋಗಿ, ಪಟ್ಟಣ ಪಂಚಾಯತಿ ಸದಸ್ಯರು, ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

# ಸಂಭ್ರಮದ ನೂರಅಲಿ ಶಹಾ ಬಾಬಾ ಉರುಸು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ತಾಲೂಕಿನ ಕಲಾದಗಿ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯದ ದ್ಯೋತಕ ಸೂಫಿ ಸಂತ ಹಜರತ್ ನೂರ್‌ಅಲಿ ಶಹಾ ಬಾಬಾ ಉರುಸು ಶನಿವಾರ ಸಡಗರ ಸಂಭ್ರಮದಿಂದ ಜರುಗಿತು.

ಭಕ್ತರು ದೇವರಿಗೆ ಊದಬತ್ತಿ, ಸುಗಂಧ ದ್ರವ್ಯ, ಲೋಭಾನ, ಸಕ್ಕರೆ, ಮಾದಲಿ ನೈವೇದ್ಯಗಳನ್ನು ಅರ್ಪಿಸಿದರು. ಹಿಂದೂ ಮುಸ್ಲಿಮರು ಸೇರಿ ದೇವರನ್ನು ಭಕ್ತಿ ಮೆರೆದರು.

ಬೆಳಿಗ್ಗೆಯಿಂದಲೇ ದರ್ಗಾದಲ್ಲಿ ವಿವಿಧ ಧಾರ್ಮಿಕ ವಿದಿ ವಿಧಾನಗಳು ಜರುಗಿದವು. ಬಾಬಾರವರ ಕರ್ತೃ ಗದ್ದುಗೆ ಹಾಗೂ ದರ್ಗಾದ ಆವರಣವನ್ನು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ದರ್ಗಾದ ಆವರಣದಲ್ಲಿ ಮಧ್ಯಾಹ್ನ ಅನ್ನ ಸಂತರ್ಪಣೆ ಜರುಗಿತು.

ಅಂಜುಮನ್ ಕಮಿಟಿ ಅಧ್ಯಕ್ಷ ರಫೀಕ್ ಬೇಪಾರಿ, ಬಸಪ್ಪ ಹೂಗಾರ, ಡಾ.ಕೆ. ಎಮ್.ಬೆಳಗಾವಿ(ಮುರನಾಳ), ಮಹಾಂತಪ್ಪ ಅಂಗಡಿ, ಮೊಮ್ಮದ್ ರಫೀಕ್ ತಂಡೆ ಪೀರ್, ಮೌಲಾ ಮೇಲ್ಮಾಳಗಿ, ಗೈಬು ಮುಜಾವರ, ಖಾಜಾಸಾಬ್ ಹಕ್ಕಿಮ್, ಬಂದೇನವಾಜ್ ಸೈಯದ್, ಸಮಿಉಲ್ಲಾ ಕಲಾದಗಿ, ಸೈಪುದಿನ್ ನದಾಫ್ ಇದ್ದರು.

# ಪ್ರತಿಭೆ ಗುರುತಿಸಲು ಕಲಿಕಾ ಹಬ್ಬ ಸಹಕಾರಿ:ಆದಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ಪ್ರತಿಭೆ ಗುರುತಿಸಲು ಕಲಿಕಾ ಹಬ್ಬ ಸಹಕಾರಿಯಾಗಿದ್ದು, ಮಕ್ಕಳ ಶೈಕ್ಷಣಿಕ ಪ್ರಗತಿಗೆ ಇಂತಹ ಕಾರ್ಯಕ್ರಮಗಳು ಅತ್ಯವಶ್ಯಕ ಎಂದು ಬೀಳಗಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್.ಆದಾಪೂರ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಗಿರಿಸಾಗರ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಂದಗಲ್ ಕ್ಲಸ್ಟರ ಮಟ್ಟದ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಅವರು ಮಾತನಾಡಿ, ಕಲಿಕಾ ಹಬ್ಬದ ಅಂಶಗಳು ಪ್ರತಿನಿತ್ಯ ತರಗತಿ ಕೊಠಡಿಯಲ್ಲಿ ಚಟುವಟಿಕೆ ರೂಪದಲ್ಲಿ ಮಕ್ಕಳ ಮುಂದೆ ಪ್ರದರ್ಶಿಸಲ್ಪಟ್ಟರೆ ನೂರಕ್ಕೆ ನೂರರಷ್ಟು ಕಲಿಕಾ ಪ್ರಗತಿ ಸಾಧ್ಯ ಎಂದು ಶಿಕ್ಷಕರಿಗೆ ಕಿವಿಮಾತು ಹೇಳಿದರು.

ಬೆಳಿಗ್ಗೆಯಿಂದ ಸಂಜೆಯವರೆಗೂ ವಿವಿಧ ಹಳ್ಳಿ ಶಾಲೆಯಿಂದ ಆಗಮಿಸಿದ್ದ ಮಕ್ಕಳು ಕಲಿಕಾ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಪಾಠವನ್ನು ಆಟ–ದಂತೆ ಅನುಭವಿಸಿದರು. ಶೈಕ್ಷಣಿಕ ಕಲಿಕೆ ಆನಂದದಾಯಕವಾಗಿದ್ದರೆ ಮಕ್ಕಳ ಕಲಿಕೆಗೆ ಪೂರಕವಾಗುತ್ತದೆ ಎಂಬುದು ಕಲಿಕಾ ಹಬ್ಬದಿಂದ ರುಜುವಾತಾಯಿತು.

ಕಂದಗಲ್ ಕ್ಲಸ್ಟರ್‌ನ ಸಂಪನ್ಮೂಲವ್ಯಕ್ತಿ ಎಸ್.ಎ.ಕಾಜಗಾರ ಪ್ರಾಸ್ತಾವಿಕ ನುಡಿ ಹೇಳಿದರು. ಗ್ರಾಮ ಪಂಚಾಯಿತಿ ಅಧ್ಯ–ಕ್ಷೆ ಶಾಂತಾ ಬಂಡಿವಡ್ಡರ, ಶ್ರೀಕಾಂತ ಸಂದಿಮನಿ, ಗ್ರಾಮ ಪಂಚಾಯತಿ ಸದಸ್ಯ ಪ್ರಕಾಶ ಹೆಗ್ಗೂರ, ಗ್ರಾಮದ ಹಿರಿಯರಾದ ಹಣಮಂತ ಜಲ್ಲಿ, ಶೇಖರ ಕಾಖಂಡಕಿ, ಎಸ್‌ಡಿಎಂಸಿ ಅಧ್ಯಕ್ಷ ನಂದೆಪ್ಪ ತೊರವಿ, ಸುರೇಶ ಹೊನ್ಯಾಳ, ಉಪಾಧ್ಯಕ್ಷೆ ಸುಜಾತ ನವಲಗನ್ನ, ರವಿ ಅರಮನಿ, ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ಎಂ.ಬಿ.ಕಣಬೂರ, ಜಗದೀಶ ಖೋತ, ಸೋಮಶೇಖರ ತಳೆವಾಡ, ಬಸವರಾಜ ಲಮಾಣಿ, ನಾನಗೌಡ ಪಾಟೀಲ್, ವಿ.ಎನ್.ಸಾಲಾಪುರ, ಎ.ಬಿ.ಪಾಟೀಲ್, ಎ.ಎಸ್.ಕಾಜಗಾರ, ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಹೆಚ್.ಜಿ.ತಿಪ್ಪರಡ್ಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾ ಅಧ್ಯಕ್ಷ ಎಸ್.ವಿ.ಪಾಟೀಲ, ಮುಖ್ಯಗುರುಗಳಾದ ಬಿ.ಎಸ್.ಸಂದಿಮನಿ, ಬಿ.ವೈ.ಗುಡದಿನ್ನಿ ಇದ್ದರು. ಶಿಕ್ಷಕ ಕೆ.ಜಿ.ದಿವಾನದ ಸ್ವಾಗತಿಸಿದರು. ಐ.ಎಲ್.ಗುಡಿಸಾಗರ ನಿರೂಪಿಸಿ ವಂದಿಸಿದರು.

# ಹುನಗುಂದ ವಿಜಯ ಮಹಾಂತೇಶ ಬ್ಯಾಂಕಿಗೆ ಶಕುಂತಲಾ ಅಧ್ಯಕ್ಷೆ, ಸೋಮಶೇಖರ ಉಪಾಧ್ಯಕ್ಷ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.22–ಜಿಲ್ಲೆಯ ಹುನಗುಂದ ಪಟ್ಟಣದ ಪ್ರತಿಷ್ಠಿತ ವಿಜಯ ಮಹಾಂತೇಶ ಸಹಕಾರಿ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ಶಕುಂತಲಾ ಸಂಗಪ್ಪ ಗಂಜೀಹಾಳ, ಉಪಾಧ್ಯಕ್ಷರಾಗಿ ಸೋಮಶೇಖರ ಹಲ್ಲಪ್ಪ ಬಲಕುಂದಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬುಧವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ 19 ನಿರ್ದೇಶಕರಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದಾಗಿ ಶಕುಂತಲಾ ಸಂಗಪ್ಪ ಗಂಜೀಹಾಳ ಅಧ್ಯಕ್ಷರಾಗಿ, ಸೋಮಶೇಖರ ಹಲ್ಲಪ್ಪ ಬಲಕುಂದಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾ ಅಧಿಕಾರಿ ದಾನಯ್ಯ ಹಿರೇಮಠ ಘೋಷಿಸಿದರು.

ನೂತನ ನಿರ್ದೇಶಕರುಗಳಾದ ದೇವು ಡಂಬಳ, ಮಂಜುನಾಥ ಆಲೂರ, ಶಕುಂತಲಾ ಬೆಲ್ಲದ, ರವಿ ಹುಚನೂರ, ಮಹಾಂತೇಶ ಅವಾರಿ, ನೀಲಪ್ಪ ತಪೇಲಿ, ನೀಲಪ್ಪ ಮುಕ್ಕಣ್ಣವರ, ಶಿವಾನಂದ ಕಂಠಿ, ಬಸವರಾಜ ಹೊಸೂರ, ತಿಪರೆಡ್ಡೆಪ್ಪ ನಾಗರಾಳ, ರಾಜಕುಮಾರ ಬಾದವಾಡಗಿ, ಶರಣಪ್ಪ ಹೊಸೂರ, ಬಸವರಾಜ ನಾಡಗೌಡರ, ನೂರಂದಗೌಡ ಕಲಗೋಡಿ, ತಿರುಪತಿ ಕುಷ್ಟಗಿ, ದೀಪಾ ಸುಂಕದ ಚುನಾವಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

ವಿಜಯೋತ್ಸವ: ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಬ್ಯಾಂಕಿನ ಮುಂದೆ ಜಮಾಯಿಸಿದ್ದ ಅಧ್ಯಕ್ಷೆ ಶಕುಂತಲಾ ಮತ್ತು ಉಪಾಧ್ಯಕ್ಷ ಸೋಮಶೇಖರ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಹರ್ಷ ವ್ಯಕ್ತಪಡಿಸಿದರು. ಬ್ಯಾಂಕಿನ ನಿರ್ದೇಶಕರು ಸೇರಿ ವಿವಿಧ ಮುಖಂಡರು ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಹೂಮಾಲೆ ಹಾಕಿ ಶುಭಾಶಯ ಕೋರಿದರು.

ಪ್ರತಿಷ್ಠಿತ ಬ್ಯಾಂಕಿನ ಅಧ್ಯಕ್ಷೆಯಾಗುವ ಅವಕಾಶ ಸಿಕ್ಕಿದ್ದು ನನ್ನ ಭಾಗ್ಯ. ನನ್ನ ಆಯ್ಕೆಗೆ ಸಹಕರಿಸಿದ ಬ್ಯಾಂಕಿನ ಎಲ್ಲ ನಿರ್ದೇಶಕ ಮಂಡಳಿಗೆ ಕೃತಜ್ಞತೆ ಸಲ್ಲಿಸುವುದಾಗಿ ಅಧ್ಯ–ಕ್ಷೆ ಶಕುಂತಲಾ ಗಂಜೀಹಾಳ ಹೇಳಿದರು.

## ಮಹತ್ವಾಕಾಂಕ್ಷೆ ಜಿಲ್ಲೆ ಪ್ರಗತಿ ಪರಿಶೀಲನಾ ಸಭ

### ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಅನುಕೂಲವಾಗುವ ಯೋಜನೆಗಳ ಲಾಭ ಅರ್ಹರಿಗೆ ತಲುಪಿಸಿ:ಜಂಟಿ ಕಾರ್ಯದರ್ಶಿ ಸಮೀರ್ ಶುಕ್ಲಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಫೆ: 22- ಪ್ರಧಾನಮಂತ್ರಿಗಳ ವಿಶೇಷ ಕಾರ್ಯಕ್ರಮಗಳಡಿಯು ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯಡಿ,ಯಾದಗಿರಿ ಹಾಗೂ ರಾಯಚೂರು ಜಿಲ್ಲೆಗಳು ಒಳಗೊಂಡಿದ್ದು, ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಅರ್ಹ ಫಲಾನುಭವಿಗಳಿಗೆ ಲಾಭ ದೊರಕಿಸುವಂತೆ

ಭಾರತ ಸರ್ಕಾರದ ಹಣಕಾಸು ಸೇವೆಗಳ , ಜಂಟಿಕಾರ್ಯದರ್ಶಿಗಳಾದ ಸಮೀರ್ ಶುಕ್ಲಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದುಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶದ ಹಿಂದುಳಿದ 112 ಜಿಲ್ಲೆಗಳಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯಡಿ, ವಿವಿಧ ಕ್ಷೇತ್ರಗಳಲ್ಲಿ ಯಾದಗಿರಿ ಜಿಲ್ಲೆಯನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯಲು ನೀತಿ ಆಯೋಗ ಗುರಿ ನಿಗದಿಪಡಿಸಿದೆ. ಜನರ ಆರೋಗ್ಯ ಮತ್ತು ಪೌಷ್ಟಿಕ, ಕೃಷಿ ಮತ್ತು ಜಲ ಸಂಪನ್ಮೂಲ, ಶಿಕ್ಷಣ, ಆರ್ಥಿಕ ಸೇರ್ಪಡೆ ಹಾಗೂ ಕೌಶಲಾಭಿವೃದ್ಧಿ ಮತ್ತು ಮೂಲಸೌಕರ್ಯಗಳ ಕುರಿತು 49 ಸೂಚ್ಯಂಕ ನೀಡಲಾಗಿದೆ. ಇವುಗಳಲ್ಲಿ ಸೂಕ್ತ ಪ್ರಗತಿ ಸಾಧಿಸಲು ಸಂಬಂಧಿಸಿದ ಅಧಿಕಾರಿಗಳು ಜವಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕೆಂದು ಸೂಚನೆ ನೀಡಿದರು.

ವಿಶೇಷವಾಗಿ ಬಡಜನರು,ಮಧ್ಯಮ ವರ್ಗದವರಿಗಾಗಿ ಪಿ.ಎಮ್ ಸ್ವನಿಧಿ, ಮುದ್ರಾ, ಹಾಗೂ ವಿಶ್ವಕರ್ಮ ಯೋಜನೆಗಳತ್ತ ಹೆಚ್ಚಿನ ಗಮನಹರಿಸಬೇಕು .ಅದರಂತೆ ಪ್ರಧಾನ ಮಂತ್ರಿಗಳ ಜೀವನ ಜ್ಯೋತಿ ಬಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆಗಳು ಕಡುಬಡವರಿಗೆ ಉಪಯುಕ್ತವಾಗಿವೆ.ಈ ಕುರಿತು ಲೀಡ್ ಬ್ಯಾಂಕ್ ಅಧಿಕಾರಿಗಳು ವಿಶೇಷ ಅಭಿಯಾನದ ಮೂಲಕ ಅರಿವು ಮತ್ತು ಪ್ರೋತ್ಸಾಹ ನೀಡಬೇಕು.ಸರ್ಕಾರದ ಪ್ರತಿ ಇಲಾಖೆ ಸಿಬ್ಬಂದಿಗಳು ಹಾಗೂ ಅಧಿಕಾರಿಗಳೂ ಈ ಯೋಜನೆಗಳಡಿ ಬರುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು.


ಲೀಡ್ ಬ್ಯಾಂಕ್ ಮೂಲಕ ಮುದ್ರಾಯೋಜನೆಯಡಿ ಜಿಲ್ಲೆಯ ಜನಸಂಖ್ಯೆಗೆ ಅನುಗುಣವಾಗಿ ಸಾಲ ಸೌಲಭ್ಯ ಕಲ್ಪಿಸಬೇಕು. ಈವರೆಗೆ ಸಾಧಿಸಿದ ಪ್ರಗತಿ ವರದಿ ಜಿ.ಪಂ ಸಿಇಓ ಅವರಿಗೆ ನೀಡಿ ಎಷ್ಟು ಜನ ಫಲಾನುಭವಿಗಳು ಈ ಯೋಜನೆಯಡಿ ಲಾಭ ಪಡೆದಿದ್ದಾರೆ ಎಂಬುದರ ಬಗ್ಗೆ ವರದಿ ಸಲ್ಲಿಸಲು ಸೂಚಿಸಿದರು. ಅದರಂತೆ ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಲೀಡ್ ಬ್ಯಾಂಕ್ಗಳ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಯೋಜನೆಯಡಿ ಸೌಲಭ್ಯ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಸ್ವಸಹಾಯ ಗುಂಪುಗಳಿಗೆ ನೀಡಲಾಗುತ್ತಿರುವ ಸಾಲ ಸೌಲಭ್ಯಗಳ ಬಗ್ಗೆ ಪರಿಶೀಲಿಸಿ ನಿಖರ ಮಾಹಿತಿ ಲಭ್ಯವಾಗುವಂತೆ ನೋಡಿಕೊಳ್ಳಬೇಕು. ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ವಿಶೇಷ ಯೋಜನೆಗಳ ಮೂಲಕ ಫಲಿತಾಂಶ ಹೆಚ್ಚಳಕ್ಕೆ ಗಮನ ನೀಡುವಂತೆ ಅವರು ಸೂಚನೆ ನೀಡಿ ಫಲಿತಾಂಶ ಕಡಿಮೆ ಕುರಿತು ಯಾವುದೇ ರೀತಿಯ ಕಾರಣಗಳನ್ನು ನೀಡದೆ ಪರಿಣಾಮಕಾರಿ ಯೋಜನೆ ರೂಪಿಸಲು ಅವರು ಸೂಚಿಸಿದರು.

ಕಡಿಮೆ ತೂಕದ ಶಿಶುಗಳ ಜನನವನ್ನು ಶೇಕಡಾವಾರು ಕಡಿಮೆ ಮಾಡುವಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಕೈಗೊಂಡ ಕ್ರಮಗಳು, ಅಪೌಷ್ಠಿಕತೆ ನಿವಾರಣೆ,ಐಸಿಡಿಎಸ್ ಕಾರ್ಯಕ್ರಮದ ಅಡಿಯಲ್ಲಿ ನಿಯಮಿತವಾಗಿ ಪೂರಕ ಪೌಷ್ಟಿಕಾಂಶವನ್ನು ಪಡೆಯುವ ಮಹಿಳೆಯರ ಸಂಖ್ಯೆ ಮತ್ತು ರೋಗಿಗಳಿಗೆ ಒದಗಿಸಲಾದ ಪ್ರೋಟೀನ್-ಭರಿತ ಆಹಾರಗಳ ಕುರಿತು, ಶಿಕ್ಷಣ, ಕೃಷಿ ಮತ್ತು ಜಲಸಂಪನ್ಮೂಲಗಳು, ಆರ್ಥಿಕ ಸೇರ್ಪಡೆ ಮತ್ತು ಕೌಶಲ್ಯ ಅಭಿವೃದ್ಧಿ ಮತ್ತು ಮೂಲಭೂತ ಮೂಲಸೌಕರ್ಯಗಳಂತಹ ಪ್ರಮುಖ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಮತ್ತು ಸವಾಲುಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಇದಕ್ಕೂ ಮುನ್ನ ಅವರು ದೋರನಹಳ್ಳಿ ಅಂಗನವಾಡಿ ,ಹಾಗೂ ನಾಯ್ಕಲ್ ಗ್ರಾಮದ ಗ್ರಂಥಾಲಯ,ಪರಿಶೀಲಿಸಿದರು.ಈ ಭೇಟಿ ವೇಳೆ ಹಾಗೂ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಹಾಗೂ ಸಹಾಯಕ ಆಯುಕ್ತರಾದ ಶ್ರೀ ಹಂಪಣ್ಣ ಸಜ್ಜನ್ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೆಡಿಎಸ್ ಚುನಾವಣಾಧಿಕಾರಿಯಾಗಿ ಶಿರವಾರ ನೇಮಕ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನತಾದಳ (ಜಾತ್ಯತೀತ) ಪಕ್ಷದ 2024-26ರ ಸಾಂಸ್ಥಿಕ ಚುನಾವಣೆಗಳ ಮೇಲ್ವಿಚಾರಣೆಗಾಗಿ ಸಾಂಸ್ಥಿಕ ಚುನಾವಣೆಗಳ ಜಿಲ್ಲಾ ಚುನಾವಣಾಧಿಕಾರಿಯನ್ನಾಗಿ ವಿಶ್ವನಾಥ ಶಿರವಾರ ರವರನ್ನು ನೇಮಕ ಮಾಡಿ ರಾಜ್ಯ ಜೆಡಿಎಸ್ ಚುನಾವಣಾಧಿಕಾರಿ ಕೆ.ಎ.ತಿಪ್ಪೆಸ್ವಾಮಿ ಆದೇಶ ಹೊರಡಿಸಿದ್ದಾರೆ.

ಗುರುಮಠಕಲ್ ಶಾಸಕರಾದ ಶರಣಗೌಡ ಕಂದಕೂರ ಹಾಗೂ ಯಾದಗಿರಿ ಜನತಾದಳ(ಜಾತ್ಯತೀತ) ಪಕ್ಷದ ಅಧ್ಯಕ್ಷರಾದ ಸುಭಾಶ್ಚಂದ್ರ ಕಟಕಟ ಹೊನಗೇರಾರವರ ಶಿಫಾರಸ್ಸಿನ ಮೇರೆಗೆ ತಮ್ಮನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಜನತಾದಳ (ಜಾತ್ಯತೀತ) ಪಕ್ಷದ ರಾಷ್ಟ್ರೀಯ ಅಧ್ಯಕ್ಷರಿಂದ ಅನುಮೋದಿತವಾದ ಚುನಾವಣಾ ವೇಳಾಪಟ್ಟಿಯನ್ನು ಲಗತ್ತಿಸಿದೆ. ಈ ವೇಳಾಪಟ್ಟಿಯಂತೆ ಚುನಾವಣಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ, ಚುನಾವಣಾ ಪ್ರಕ್ರಿಯೆಗಳನ್ನು ಪಕ್ಷದ ಸಂವಿಧಾನ ಮತ್ತು ನಿಯಮಗಳನ್ವಯ ನಿಗದಿ ಪಡಿಸಿದ ಸಮಯದೊಳಗೆ ನಿಷ್ಪಕ್ಷಪಾತದಿಂದ ನಡೆಸಿ, ಫಲಿತಾಂಶವನ್ನು ಪಕ್ಷದ ರಾಜ್ಯ ಕಛೇರಿಗೆ ಸಲ್ಲಿಸುವಂತೆ ಸೂಚಿಸಿದ್ದಾರೆ.

### ಜಿಲ್ಲಾ ಜೆಡಿಎಸ್‌ನಿಂದ ವಿಶ್ವನಾಥ ಶಿರವಾರಗೆ ಸನ್ಮಾನ

ಯಾದಗಿರಿ : ಜಿಲ್ಲಾ ಜನತಾದಳ (ಜಾತ್ಯತೀತ) ಪಕ್ಷದ ಸಾಂಸ್ಥಿಕ ಚುನಾವಣೆಗಳ ಜಿಲ್ಲಾ ಚುನಾವಣಾಧಿಕಾರಿ ಯನ್ನಾಗಿ ನೇಮಕಗೊಂಡ ವಿಶ್ವನಾಥ ಶಿರವಾರ ರವರನ್ನು ಯಾದಗಿರಿ ಜಿಲ್ಲಾ ಜೆಡಿಎಸ್ ಘಟಕದಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಮಾಜಿ ಜಿಲ್ಲಾಧ್ಯಕ್ಷರಾದ ಚನ್ನಪ್ಪಗೌಡ ಮೂಸಂಬಿ, ಪ್ರಮುಖರಾದ ಭೋಜಣ್ಣಗೌಡ ಯಡ್ಡಳ್ಳಿ, ಈಶಪ್ಪ ಸಾಹುಕಾರ, ಬಂದಪ್ಪ ಸಾಹುಕಾರ ಅರಳಿ, ಮಲ್ಲಣ್ಣಗೌಡ ಕೌಳೂರ, ಈಶ್ವರ ನಾಯಕ, ಅಂಬರೇಶಗೌಡ ಬಂದಳ್ಳಿ, ತಾಯಪ್ಪ ಬದ್ದೆಪಲ್ಲಿ, ಶರಣು ಗಾಡಿ, ವೆಂಕಟರಮಣ ಮೊಟ್ನಳ್ಳಿ, ನರಸಿಂಹರಡ್ಡಿ ಚಿಂತಗುಂಟಾ ಸೇರಿದಂತೆ ಇತರರಿದ್ದರು.

## ಫೆ.25 ರಂದು ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಫೆಬ್ರವರಿ 22-: ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಹಾಗೂ ಸ್ವತಂತ್ರ ಮೈಕ್ರೋಫೀನ್ ಪ್ರೈ.ಲಿ ಇವರ ಸಹಯೋಗದೊಂದಿಗೆ ಇದೇ 2025ರ ಫೆಬ್ರವರಿ 25ರ ಮಂಗಳವಾರ ರಂದು ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

ಅಂದು ಸಂದರ್ಶನವು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ಇರುತ್ತದೆ. ಸ್ವತಂತ್ರ ಮೈಕ್ರೋಫೀನ್ ಪ್ರೈ.ಲಿ ಯಾದಗಿರಿ, ಫೀಲ್ಡ್ ಅಫೀಸರ್ 20 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ ಪಾಸ್ ಅಥವಾ ಮೇಲ್ಪಟ್ಟು, ಯಾದಗಿರಿ, ಶಹಾಪೂರ, ಸೇಡಂ,ಕಲಬುರಗಿ ಉದ್ಯೋಗ ಸ್ಥಳವಾಗಿದೆ. 18 ರಿಂದ 28 ವರ್ಷ ಒಳಗಿರಬೇಕು,ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಹುದ್ದೆಗೆ ಬೈಕ್ ಮತ್ತು ಆ.ಐ. ಕಡ್ಡಾಯ. ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಹಾಗೂ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ನೇರ ಸಂದರ್ಶನ ನಡೆಯುವ ಸ್ಥಳ ಲಕ್ಷ್ಮೀನಗರ, ಲಕ್ಷ್ಮೀ ಮಂದಿರ ಹತ್ತಿರ, ಬಸವೇಶ್ವರ ಕಲ್ಯಾಣ ಮಂಟಪ ಹಿಂದುಗಡೆ ಯಾದಗಿರಿ. ಹೆಚ್ಚಿನ ಮಾಹಿತಿಗಾಗಿ ಚಿತ್ತಾಪೂರು ರೋಡ್ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ-ಬ್ಲಾಕ್ ರೂ.ನಂ.ಬಿ1, ಬಿ2 2ನೇ ಮಹಡಿ ಯಾದಗಿರಿ ದೂ.ಸಂ.08473253718, 8655791227,9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.27 ರಂದು ಡಾಕ್ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 22- ಇದೇ 2025ರ ಫೆಬ್ರವರಿ 27ರ ಗುರುವಾರ ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ವಿಭಾಗ ಅಂಚೆ ಅಧೀಕ್ಷಕರ ಅಂಚೆ ಕಛೇರಿಯಲ್ಲಿ ಡಾಕ್ ಅದಾಲತ್ ಆಯೋಜಿಸಲಾಗಿದೆ ಎಂದು ಅಧೀಕ್ಷಕ ಅವರು ತಿಳಿಸಿದ್ದಾರೆ. ದೂರುಗಳ ಕುರಿತು ಡಾಕ್ ಅದಾಲತ್‌ನಲ್ಲಿ ಯಾದಗಿರಿ ವಿಭಾಗದ ಅಡಿಯಲ್ಲಿ ಬರುವ ಅಂಚೆ ಕಚೇರಿಗಳಿಗೆ ಸಂಬಂಧಿಸಿದ ಅಂಚೆ ವಿಷಯಗಳ ಕುರಿತು ತಮ್ಮ ಕುಂದು ಕೊರತೆಗಳನ್ನು ಪ್ರಸ್ತುತಪಡಿಸಲು ಇಚ್ಛಿಸುವವರು ತಮ್ಮ ಕುಂದು ಕೊರತೆಗಳನ್ನು ವಿವರವಾಗಿ ಬರೆದು ಅಂಚೆ ಅಧೀಕ್ಷಕರು ಯಾದಗಿರಿ ವಿಭಾಗ ಯಾದಗಿರಿ 585 201ಗೆ 2025ರ ಫೆಬ್ರವರಿ 26ರ ಸಂಜೆ 4 ಗಂಟೆಯ ಒಳಗೆ ಸಲ್ಲಿಸಬೇಕು ಅಥವಾ ಇಮೇಲ್ doyadgiri.ka@indiapost.gov.in ನಲ್ಲಿ ಕುಂದು ಕೊರತೆಗಳನ್ನು ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಲಿಬಾಲ್ ಕ್ರೀಡಾಕೂಟ ಉದ್ಘಾಟನಾ ಸಮಾರಂಭದಲ್ಲಿ ಮುರಾಳ ಸಲಹೆ

## ಕ್ರೀಡಾ ಮನೋಭಾವದೊಂದಿಗೆ ಆಟ ಆಡಲು ಪ್ರಯತ್ನಿಸಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದಲ್ಲಿ ಒಳ್ಳೆಯ ವಾಲಿಬಾಲ್ ಕ್ರೀಡಾ ಪಟುಗಳನ್ನು ಸಿದ್ಧಗೊಳಿಸಿದ ಕೀರ್ತಿ ದೈಹಿಕ ಶಿಕ್ಷಕರಾಗಿದ್ದ ದಿ. ಬಸವರಾಜ ಗದಗ್ ಹಾಗೂ ಬಿ.ಬಿ.ಪಾಟೀಲರಿಗೆ ಸಲ್ಲುತ್ತದೆ ಇವರ ಸ್ಮರಣಾರ್ಥ ಹಮ್ಮಿಕೊಂಡಿರುವ ಈ ವಾಲಿಬಾಲ್ ಪ್ರೀಮಿಯರ್ ಲೀಗನಲ್ಲಿ ಭಾಗವಹಿಸಿದ ಎಲ್ಲ ಕ್ರೀಡಾ ಪಟುಗಳು ಒಳ್ಳೆಯ ಕ್ರೀಡಾ ಮನೋಭಾವದೊಂದಿಗೆ ಆಟವಾಡಲು ಪ್ರಯತ್ನಿಸಬೇಕು ಎಂದು ವಿ.ವಿ.ಸಂಘದ ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ ಕ್ರೀಡಾಪಟುಗಳಿಗೆ ಸಲಹೆ ನೀಡಿದರು. ದಿ. ಬಸವರಾಜ ಗದಗ ಹಾಗೂ ದಿ.ಬಿ.ಬಿ. ಪಾಟೀಲ ಇವರ ಸ್ಮರಣಾರ್ಥ ಎಸ್.ಕೆ.ವಾಲಿಬಾಲ್ ಕ್ರೀಡಾಪಟುಗಳಿಂದ ಶ್ರೀ ಖಾಸ್ಗತೇಶ್ವರ ಮಹಾವಿದ್ಯಾಲಯ ಆವರಣದಲ್ಲಿ ಹಮ್ಮಿಕೊಂಡ ವಾಲಿಬಾಲ್ ಪ್ರೀಮಿಯರ್ ಲೀಗ್ ಸೀಸನ್ 1ರ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.ವಿ.ವಿ.ಸಂಘದ ಅಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಅವರು ಕ್ರೀಡಾಕೂಟವನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಪುರಸಭೆ ಅಧ್ಯಕ್ಷೆ ಜುಬೇದಾ ಹುಸೇನ್ ಭಾಷಾ ಜಮಾದಾರ, ವಿವಿ ಸಂಘ ಕಾರ್ಯದರ್ಶಿ ಮುರಿಗೆಪ್ಪ ಸರಶೆಟ್ಟಿ, ಸಹಕಾರಿ ಬ್ಯಾಂಕ್ ಅಧ್ಯಕ್ಷ ಕಾಶಿನಾಥ್ ಸಜ್ಜನ, ಎಸ್ ಕೆ ಪ.ಪೂ. ಕಾಲೇಜ ಅಧ್ಯಕ್ಷ ಎಂ.ಆರ್.ಕತ್ತಿ, ಎಸ್ ಕೆ ಹೈಸ್ಕೂಲ್ ಅಧ್ಯಕ್ಷ ಎಂ.ಜಿ.ಕತ್ತಿ, ಎಸ್ ಕೆ ಮಹಾವಿದ್ಯಾಲಯ ಪ್ರಾಚಾರ್ಯ ಡಾ.ದಯಾನಂದ ಮೂಗಡ್ಲಿಮಠ, ಎಸ್ ಕೆ ಪಿಯು ಕಾಲೇಜ್ ಪ್ರಾಚಾರ್ಯ ಕಿಶೋರಕುಮಾರ್ ಕೆ. ಅಂತರಾಷ್ಟ್ರೀಯ ಕ್ರೀಡಾಪಟು ಸಂಜೀವ್ ಹಜೇರಿ, ಈ ವೇಳೆ ಸಹಕಾರಿ ಬ್ಯಾಂಕ್ ನಿರ್ದೇಶಕ ಪ್ರಹ್ಲಾದ ಹಜೇರಿ, ರವಿ ಕಟ್ಟಿಮನಿ, ರಾಘು ಮಾನೆ, ನಿಸಾರ್ ಬೇಪಾರಿ, ಮಹೇಶ್ ಚಲವಾದಿ,ನಾಗೇಶ್ ಕಟ್ಟಿಮನಿ, ಬಸವರಾಜ ಗದಗ, ವಿಠ್ಠಲ್ ಮೋಹಿತೆ, ಈಶ್ವರ ಹೂಗಾರ, ಸದ್ದಾಂ ನಾಯ್ಕೋಡಿ, ಲಾಲ ಸಾಬ್ ನದಾಫ್,ಶಿವು ಶಹಾಪೂರ, ಸೌರಭ ಕುಲಕರ್ಣಿ, ವಿಶ್ವನಾಥ ಪಾಟೀಲ, ಮಲ್ಲು ಪಾಟೀಲ ಹಾಗೂ ಕ್ರೀಡಾಪಟುಗಳು ಇದ್ದರು. ಶಿಕ್ಷಕ ಡಾ. ಅನೀಲ ಕುಮಾರ್ ಇರಾಜ ನಿರೂಪಿಸಿ ವಂದಿಸಿದರು.

## 5 ಕ್ವಿಂಟಲ್ ಪಡಿತರ ಅಕ್ಕಿ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22-ನಗರದ ಸಂತ್ರಾಸ್ ವಾಡಿಯ ಖಬರಸ್ಥಾನ ಕಂಪೌಂಡ್ ಹತ್ತಿರವಿರುವ ಮನೆಯೊಂದರೊಳಗೆ ಪಡಿತರ ಚೀಟಿದಾರರಿಗೆ ಮತ್ತು ಸರ್ಕಾರದ ವಿವಿಧ ಯೋಜನೆಗಳಿಗೆ ಬಿಡುಗಡೆ-ಯಾದ ಅಕ್ಕಿಯನ್ನು ಹೆಚ್ಚಿನ ಬೆಲೆಗೆ ಕಾಳ ಸಂತೆಯಲ್ಲಿ ಮಾರಾಟ ಮಾಡಲು ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿದೆ ಎಂಬ ಮಾಹಿತಿ ಮೇಲೆ ಆಹಾರ ನಿರೀಕ್ಷಕ ಯಲ್ಲಾಲಿಂಗ, ಸಿಬ್ಬಂದಿ ಶಿವುಕುಮಾರ ಪೂಜಾರಿ, ಎಂ.ಬಿ.ನಗರ ಪೊಲೀಸ್ ಠಾಣೆ ಸಿಬ್ಬಂದಿ ಸಂತೋಷ ಅವರು ದಾಳಿ ನಡೆಸಿದ್ದಾರೆ.

ಅಕ್ರಮವಾಗಿ ಸಂಗ್ರಹಿಸಿ ಇಟ್ಟಿದ್ದ 17,500 ರೂ.ಮೌಲ್ಯದ 5 ಕ್ವಿಂಟಲ್ ಅಕ್ಕಿ ಜಪ್ತಿ ಮಾಡಿ, ಅಕ್ಕಿ ಸಂಗ್ರಹಿಸಿ ಇಟ್ಟ ಸಂತ್ರಾಸವಾಡಿಯ ಮಹ್ಮದ್ ಅಯ್ಯೂಬ್ ಎಂಬಾತನ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ರ ಕಲಂ 3 ಮತ್ತು 7 ಅಡಿಯಲ್ಲಿ ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.ತನಿಖೆ ನಡೆದಿದೆ.

## ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನ 'ಸರ್ವಾಧ್ಯಕ್ಷರಾದ ಹಾರಕೂಡ ಶ್ರೀಗಳ ಅದ್ದೂರಿ ಮೆರವಣಿಗೆ'



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ. 22.ಹುಲಸೂರು ತಾಲೂಕಿನ ಬೇಲೂರು ಗ್ರಾಮದಲ್ಲಿ ಶ್ರೀ ಉರಲಿಂಗಪೆದ್ದಿ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ವತಿಯಿಂದ ಆಯೋಜಿಸಿದ ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಸಾರೋಟಿನಲ್ಲಿ ಅದ್ದೂರಿ ಮೆರವಣಿಗೆಯ ಜಿಲ್ಲಾ ಮಹಿಳಾ ಬಿದ್ದ ಬದಿಯ ವ್ಯಾಪಾರಿಗಳ ವಿಭಾಗಿಯ ಅಧ್ಯಕ್ಷೆ ರಾಜೇಶ್ವರಿ ರಾಜಕುಮಾರ ಮೋರೆ ಉದ್ಘಾಟಿಸಿದರು. ಇಲ್ಲಿನ ಡಾ.ಬಿ.ಆರ್ ಅಂಬೇಡ್ಕರ್ ಸಮುದಾಯ ಭವನದದಿಂದ ಪ್ರಮುಖ ರಸ್ತೆಗಳ ಮೂಲಕ ಉರಿಲಿಂಗಪೆದ್ದಿ ಶ್ರೀ ಮಠದ ವರೆಗೆ ತೆರಳಿದ ನಂತರ ಅಲ್ಲಿಂದ ವೇದಿಕೆಯ ವರಿಗೆ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಬೇಲೂರು ಉರಿಲಿಂಗಪೆದ್ದಿ ಸಂಸ್ಥಾನ ಮಠದ ಪಿಠಾಧಿಪತಿಗಳಾದ ಪೂಜ್ಯ ಶ್ರೀ. ಪಂಚಾಕ್ಷರಿ ಮಹಾಸ್ವಾಮಿಜಿ. ಹಾಗೂ ಮಹಾಲಿಂಗ ದೇವರು. ಸಾಹಿತಿಗಳಾದ ಡಾ. ಗವಿಸಿದ್ದಪ್ಪ ಪಾಟೀಲ. ಗ್ರಾಮದ ಪ್ರಮುಖರಾದ ಜಗನ್ನಾಥ ಚಿಲ್ಲಾಬಟೆ. ಮಲ್ಲಿನಾಥ ಹಿರೇಮಠ ಹಾರಕೂಡ. ಅಪ್ಪಣ್ಣ ಜನವಾಡ. ಸುರೇಶ ಕಾನೇಕರ. ಸಂಜಯ ಜಾದವ್. ಡಾ. ರಾಜಕುಮಾರ ಮಾಳಗೆ. ಡಾ. ಸಿದ್ದಪ್ಪ ಹೊಸಮನಿ. ಶರಣ ಬಸಪ್ಪ ಬಿರಾದಾರ. ಸೇರಿದಂತೆ ಅನೇಕ ಗಣ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು. ಮೆರವಣಿಗೆಯಲ್ಲಿ ಸಂತರು ಶರಣರು ಮಹಾತ್ಮರ ಸಂ ದೇಶ ಹೊತ್ತ ಭಾವಚಿತ್ರದೊಂದಿಗೆ ಅಲ್ಲದೆ ನಾಡಿನ ವಿವಿಧ ಕಲಾತಂಡಗಳು ಭಾಗವಹಿಸಿ, ಕಲೆ ಪ್ರದರ್ಶನ ಮಾಡಿರುವ ದೃಶ್ಯ ಕಾಣಬಹುದು.

## ವಿದ್ಯುತ್ ಕಂಬಕ್ಕೆ ಬೈಕ್ ಡಿಕ್ಕಿ: ಗಾಯಗೊಂಡಿದ್ದ ಯುವಕ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22- ಶಹಬಾಜಾರ ಮಹಾದೇವ ನಗರದಲ್ಲಿ ರಸ್ತೆ ಪಕ್ಕದಲ್ಲಿರುವ ವಿದ್ಯುತ್ ಕಂಬಕ್ಕೆ ಬೈಕ್ ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಯುವಕನೊಬ್ಬ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ.

ಸೈಯ್ಯದ್ ಚಿಂಚೋಳಿ ರಸ್ತೆಯ ಆಶ್ರಯ ಕಾಲೋನಿಯ ಭಾಗೇಶ ತಂದೆ ಸಂಜಯ ಜಮಾದಾರ ಮೃತಪಟ್ಟ ಯುವಕ.

## ಸಂಘಟಿತ ಯತ್ನದಿಂದ ಅಮಲು ಮುಕ್ತ ಸಮಾಜದ ನಿರ್ಮಾಣ ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಇಂದು ಸಮಾಜದಲ್ಲಿ ಅಮಲು ಪದಾರ್ಥಗಳು ವ್ಯಾಪಕ ವಾಗುತ್ತಿರುವುದರಿಂದ ಕುಟುಂಬ ವ್ಯವಸ್ಥೆಯು ಹಾಳಾಗಿ ಯುವ ಶಕ್ತಿ ನಾಶವಾಗುತ್ತಿದೆ ಇದರ ನಿಯಂತ್ರಣ ಒಬ್ಬ ವ್ಯಕ್ತಿಯಿಂದ ಸಾಧ್ಯವಿಲ್ಲ,ಇದಕ್ಕೆ ಸಂಘಟಿತ ಹೋರಾಟದ ಅಗತ್ಯ ಇದೆ ಎಂದು ಶಾಂತಿ ಪ್ರಕಾಶನದ ವ್ಯವಸ್ಥಾಪಕ ಖ್ಯಾತ ಪ್ರವಚನಕಾರ ಜನಾಬ. ಮೊಹಮ್ಮದ್ ಕುಂಞಟಿಜಜಜಿಟಿಜಜ ಹೇಳಿದರು. ಶುಕ್ರವಾರ ಪಟ್ಟಣದ ಶ್ರೀ ಶರಣ ಮುತ್ಯಾ ದೇವಸ್ಥಾನ ಆವರಣದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ನಗರ ಶಾಖೆಯು ಹಮ್ಮಿಕೊಂಡ ಕುರಾನ್ ಪ್ರವಚನ ಕಾರ್ಯಕ್ರಮದಲ್ಲಿ ಅಮಲು ಮುಕ್ತ ಸಮಾಜ ಮತ್ತು ಯುವಜನತೆ ವಿಷಯದ ಕುರಿತು ಅವರು ಪ್ರವಚನ ನೀಡಿದರು. ಸಮಾಜದಿಂದ ಅಮಲು ಮುಕ್ತಗೊಳಿಸಲು ಕೇವಲ ಕಾನೂನಿನಿಂದ ಸಾಧ್ಯವಿಲ್ಲ ಇದಕ್ಕೆ ಮನ ಪರಿವರ್ತನೆ ಅಗತ್ಯವಿದೆ, ಮಕ್ಕಳಿಗೆ ಉತ್ತಮ ಸಂಸ್ಕಾರ ಹಾಗೂ ಆಧ್ಯಾತ್ಮಿಕ ಚಿಂತನೆಗಳು ಸಿಗುವಂತಾಗಬೇಕು, ನಾನು ಮಾಡುವ ಎಲ್ಲ ಅಪರಾಧ ಕೃತ್ಯಗಳನ್ನು ಆ ದೇವನು ನೋಡುತ್ತಿದ್ದಾನೆ ಎಂಬ ಪ್ರಜ್ಞೆ ಜಾಗೃತವಾಗಬೇಕು ಆಗ ಮಾತ್ರ ನಾವು ಒಬ್ಬ ಒಳ್ಳೆಯ ವ್ಯಕ್ತಿಯಾಗಲು ಸಾಧ್ಯ ಎಂದರು. ಸಮಾರಂಭ ಉದ್ಘಾಟಿಸಿ ಮಾತನಾಡಿದ ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಅವರು ವ್ಯಕ್ತಿಯ ಆರೋಗ್ಯ ಮತ್ತು ಅವನ ಮಾನಸಿಕ ಸ್ಥಿತಿ ಉತ್ತಮವಾಗಿದ್ದರೆ ಮಾತ್ರ ಒಂದು ಒಳ್ಳೆಯ ಸಮಾಜ ನಿರ್ಮಾಣ ಮಾಡಲು ಸಾಧ್ಯ,ಇವತ್ತು ಯುವ ಸಮುದಾಯ ಕೆಡುಕಿನ ಕಡೆಗೆ ಅತಿ ವೇಗವಾಗಿ ಹೋಗುತ್ತಿದೆ ಅವರನ್ನು ರಕ್ಷಿಸುವ ಕೆಲಸವಾಗಬೇಕು ಯುವಶಕ್ತಿ ನಮ್ಮ ದೇಶದ ಸಂಪತ್ತು ನಾವೆಲ್ಲರೂ ಸೇರಿ ಜಾತಿ ಮತ ಭೇದ ಮರೆತು ಒಂದು ಭವ್ಯ ಭಾರತದ ನಿರ್ಮಾಣ ಮಾಡಬೇಕಾಗಿದೆ ಇದಕ್ಕೆ ಇಂತಹ ವೇದಿಕೆಗಳು ಪೂರಕ ವಾಗುತ್ತವೆ ಎಂದರು. ಪ್ರವಚನ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಕೊಡೆಕಲ್ಲದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಸಮಾಜವನ್ನು ಎಲ್ಲ ರೀತಿಯ ಅಮಲಿನಿಂದ ರಕ್ಷಿಸಬೇಕಾಗಿದೆ, ಧರ್ಮಾಂಧತೆ ಕೂಡಾ ಒಂದು ಅಮಲಾಗಿದೆ ಇದು ಮೆದುಳಿನಲ್ಲಿ ಹೊಕ್ಕಿಕೊಂಡರೆ ಅದು ಸಮಾಜಕ್ಕೆ ಮಾರಕವಾಗುತ್ತದೆ, ತಾಳಿಕೋಟಿ ಪಟ್ಟಣದಲ್ಲಿ ಒಳ್ಳೆಯ ಭಾವೈಕ್ಯತೆಯ ವಾತಾವಣ ವಿದೆ ಇದು ಹಾಳಾಗದಂತೆ ನೋಡಿಕೊಳ್ಳಿ ಭಾವೈಕ್ಯತೆ ಸಂದೇಶ ಸಾರುವ ಇಂತಹ ಪ್ರವಚನದ ಕಾರ್ಯಕ್ರಮಗಳು ಸಮಾಜದಲ್ಲಿ ಹೆಚ್ಚು ಹೆಚ್ಚಾಗಿ ನಡೆಯಬೇಕಾಗಿದೆ ಜಮಾತ್ ನ ಈ ಕಾರ್ಯ ಶ್ಲಾಘನೀಯ ಎಂದರು.ಜಮಾತ್ ವಲಯ ಸಂಚಾಲಕ ಎಂ.ಐ.ಬಡಗಣ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಶ್ರೀ ಮುರುಗೇಶ ವಿರಕ್ತಮಠ,ಶ್ರೀ ಶರಣಪ್ಪ ಮುತ್ಯಾ ಶರಣರು, ಸಯ್ಯದ್ ಶಕೀಲ್ ಅಹಮದ್ ಖಾಜಿ,ಫಾದರ್ ರಾಬರ್ಟ್ ಕ್ರಿಸ್ಟಾ,ಡಾ.ವಿ.ಎಸ್.ಕಾರ್ಚಿ,ಡಾ.ಐ.ಬಿ.ತಳ್ಳೊಳ್ಳಿ, ದಶರಥಸಿಂಗ್ ಮನಗೂಳಿ,ಎಸ್.ಬಿ.ಕಟ್ಟಿಮನಿ, ಪ್ರಭುಗೌಡ ಮದರಕಲ್ಲ, ಹಿರಿಯ ಪತ್ರಕರ್ತ ಜಿ.ಟಿ.ಘೋರ್ಪಡೆ,ಕಸಾಪ ಅಧ್ಯಕ್ಷ ಆರ್.ಎಲ್. ಕೊಪ್ಪದ,ಎಂ.ಎಸ್.ಸರಶಟ್ಟಿ, ಅಶೋಕ್ ಹಂಚಲಿ, ಕಾಶಿನಾಥ್ ಸಜ್ಜನ, ಮಂಜುನಾಥ್ ಶೆಟ್ಟಿ, ಗಂಗಾಧರ ಕಸ್ತೂರಿ, ಸುಮಂಗಲಾ ಕೋಳೂರ,ಡಾ.ಸರೋಜಾತೊನಶ್ಯಾಳ,ಡಿ.ವಿ. ಪಾಟೀಲ,ಡಾ.ಎ.ಎ.ನಾಲಬಂದ, ಅಲ್ಲಾಭಕ್ಷ ನಮಾಜ್ ಕಟ್ಟಿ,ಆರ್.ಐ.ಒಂಟಿ, ಸಿಕಂದರ ವಠಾರ,ರೋಶನ ಡೋಣಿ,ಎಂ.ಎ.ಮೇತ್ರಿ, ಎ.ಡಿ.ಎಕೀನ,ಮೌ.ಮಹಮ್ಮದ್ ಹುಸೇನ್ ಪಠಾಣ,ಅಂಜುಮ್ ಎಕೀನ,ಝುಫೀಶಾ ನಿಖತ್ ಖಾಜಿ ಇದ್ದರು. ಯುವಕರು ದೇಶದ ಭವಿಷ್ಯವಾಗಿದ್ದಾರೆ ಆದರೆ ಇಂದು ಅವರು ಮಾದಕ ವಸ್ತುಗಳ ದಾಸರಾಗಿ ಅಪರಾಧಿಗಳಾಗುತ್ತಿದ್ದಾರೆ ಅವರನ್ನು ರಕ್ಷಿಸುವ ಕಾರ್ಯ ಎಲ್ಲರೂ ಕೂಡಿ ಮಾಡಬೇಕಾಗಿದೆ ಇಲ್ಲದೆ ಹೋದರೆ ದೇಶದ ಭವಿಷ್ಯ ಕರಾಳವಾಗುತ್ತದೆ. ಮುಹಮ್ಮದ್ ಕುಂಞ ಪ್ರವಚನಕಾರರು.

ಬಳ್ಳಾರಿ: ಗ್ಯಾರಂಟಿ ಯೋಜನೆಗಳ ಪ್ರಚಾರದ ವಾಹನಕ್ಕೆ ಚಾಲನೆ

# ಗ್ಯಾರಂಟಿ ಯೋಜನೆಗಳಿಂದ ಜನರ ಆರ್ಥಿಕ ಮಟ್ಟ ಸುಧಾರಣೆ: ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.22–ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿರುವ ಎಲ್‌ಇಡಿ ವಾಹನ ಹಾಗೂ ಬೀದಿ ನಾಟಕದ ಮೂಲಕ ಗ್ಯಾರಂಟಿ ಯೋಜನೆಗಳ ಪ್ರಚಾರ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಶನಿವಾರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಸರ್ಕಾರವು ಬಡ ಜನರು, ಮಧ್ಯಮ ವರ್ಗದ ಜನರ ಆರ್ಥಿಕ ಮಟ್ಟವನ್ನು ಸುಧಾರಿಸಲು ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ರಾಜ್ಯದಲ್ಲಿ ಆರ್ಥಿಕ ಶಕ್ತಿ ತುಂಬಿದ್ದಾರೆ ಎಂದರು.

ರಾಜ್ಯದಲ್ಲಿ ಸರ್ಕಾರದ ಪ್ರಮುಖ ಐದು ಗ್ಯಾರಂಟಿ ಯೋಜನೆಗಳನ್ನು ಶೇ.98 ರಷ್ಟು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ.ಶೇ.100 ರಷ್ಟು ಅನುಷ್ಠಾನಗೊಳಿಸಲು ಯೋಜನೆಗಳ ಅರಿವು ಅಗತ್ಯವಾಗಿದೆ. ಹಾಗಾಗಿ ಎಲ್‌ಇಡಿ ವಾಹನವು ಬೀದಿ ನಾಟಕ ಕಾರ್ಯಕ್ರಮ ಆಯೋಜಿಸುವ ಕಲಾವಿದರ ತಂಡದೊಂದಿಗೆ ಜಿಲ್ಲೆಯ ಆಯ್ದ 20 ಗ್ರಾಮಗಳಲ್ಲಿ ಸಂಚರಿಸಿ ಗ್ರಾಮೀಣ ಭಾಗದ ಜನರಲ್ಲಿ ಗ್ಯಾರಂಟಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲಿದೆ ಎಂದು ಮಾಹಿತಿ ನೀಡಿದರು.

ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಯಾವುದೇ ಮಧ್ಯವರ್ತಿಗಳಿಲ್ಲದೇ ಜನರಿಗೆ ತಲುಪಿಸಿದ್ದೇವೆ. ಗ್ಯಾರಂಟಿ ಯೋಜನೆಗಳಿಂದ ಯಾರೂ ವಂಚಿತರಾಗಬಾರದು. ಅರ್ಹರು ಇವುಗಳ ಸದುಪಯೋಗ ಪಡೆದುಕೊಳ್ಳಬೇಕು. ಇದಕ್ಕಾಗಿ ಗ್ಯಾರಂಟಿ ಯೋಜನೆಗಳ ಕುರಿತ ಅರಿವು ಬಹುಮುಖ್ಯವಾಗಿ ಗ್ರಾಮೀಣ ಭಾಗದಲ್ಲಿ ಮೂಡಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯ ಕಳೆದ 16 ತಿಂಗಳ ಎಲ್ಲಾ ಕಂತಿನ ಹಣವನ್ನು ಗೃಹಲಕ್ಷ್ಮೀಯರ ಖಾತೆಗೆ ಜಮೆ ಮಾಡಲಾಗಿದೆ. ಕೆಲವು ತಾಂತ್ರಿಕ ಕಾರಣಗಳಿಂದಾಗಿ ಕಳೆದ 3 ತಿಂಗಳ ಗೃಹಲಕ್ಷ್ಮಿ ಹಣ ಬಂದಿಲ್ಲ. ಈಗಾಗಲೇ ಮುಖ್ಯಮಂತ್ರಿಯವರು, ಇಲಾಖಾ ಸಚಿವರು ಮುಂದಿನ ದಿನಗಳಲ್ಲಿ ಹಣ ಪಾವತಿಸುವ ಕುರಿತು ತಿಳಿಸಿದ್ದಾರೆ ಎಂದರು.

ಅದೇರೀತಿಯಾಗಿ ಅನ್ನಭಾಗ್ಯ ಯೋಜನೆಯಡಿ 5 ಕೆಜಿ ಅಕ್ಕಿಯ ಬದಲಾಗಿ ನೀಡುವ ಹಣವು ಜಮೆಯಾಗಿಲ್ಲ. ಬಾಕಿ ಇರುವ ಹಣ ಪಾವತಿ ಜೊತೆಗೆ ಮುಂದಿನ ತಿಂಗಳಿನಿಂದ ಎಲ್ಲಾ ಅರ್ಹ ಪಡಿತರಿಗೆ ಕೊಟ್ಟ ಮಾತಿನಂತೆ 10 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಅರ್ಹರಿಗೆ ಕಡ್ಡಾಯವಾಗಿ ತಲುಪಿಸಬೇಕೆಂಬ ಬದ್ಧತೆಯನ್ನು ಹೊಂದಿದೆ. ತಲುಪಿಸುವಲ್ಲಿ ವಿಳಂಬವಾಗಬಹುದು. ಈ ಕುರಿತು ಜನರು ಊಹಾಪೋಹಗಳಿಗೆ ಕಿವಿಕೊಡಬಾರದು ಎಂದರು.

ಈ ವೇಳೆ ಮುಖಂಡರಾದ ವೆಂಕಟೇಶ್ ಹೆಗಡೆ, ಲಿಂಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಥಮ ದರ್ಜೆ ಸಹಾಯಕ ವಿ.ಸಿ.ಗುರುರಾಜ, ಸಿಬ್ಬಂದಿ ಹನುಮೇಶ್.ಹೆಚ್., ಕಲಾವಿದರಾದ ಎಸ್. ಎಂ.ಹುಲುಗಪ್ಪ, ಹೆಚ್.ಜಿ.ಸುಂಕಪ್ಪ, ಡಿ.ಹೇಮಂತ್, ರ್‍ರಿಸ್ವಾಮಿ, ಹನುಮಯ್ಯ ತಿಮ್ಮಲಾಪುರ ಹಾಗೂ ಇತರರು ಇದ್ದರು.

# ಕನಿಕರ ಉದಾರತೆ ಮೌಲ್ಯ ಬೆಳೆಸುವುದು ಶಾಲೆಯ ಮುಖ್ಯ ಉದ್ದೇಶ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಅಮರ್ ಚಾಚಾ ಜವಾಹರ ಲಾಲ್ ನೆಹರು ಅನಾಥಶ್ರಮದ ಮಕ್ಕಳಿಗೆ, ನಗರದ ಪ್ರತಿಷ್ಠಿತ ಲಿಟಲ್ ಬಡಿ ಅಂತರಾಷ್ಟ್ರೀಯ ಪ್ರೀ ಸ್ಕೂಲ್ ವತಿಯಿಂದ ಇಂದು ಅನಾಥ ಮಕ್ಕಳಿಗೆ ವಿಶೇಷ ಕೂಟ ಆಯೋಜಿಸಲಾಗಿತ್ತು. ನಮ್ಮ ಗುರಿ ಕೇವಲ ಉತ್ತಮ ಶಿಕ್ಷಣ ನೀಡುವುದಷ್ಟೇ ಅಲ್ಲ ಬದಲಾಗಿ ನಮ್ಮ ವಿದ್ಯಾರ್ಥಿಗಳಲ್ಲಿ ಕನಿಕರ ಮತ್ತು ಉದಾರತೆ ಎಂಬ ಮೌಲ್ಯಗಳನ್ನು ಬೆಳೆಸುವುದು ಈ ಶಾಲೆಯ ಅಗತ್ಯೆತೆಯಲ್ಲಿ ಒಂದಾಗಿದೆ.

ಈ ಕಾರ್ಯಕ್ರಮವು ಮಕ್ಕಳನ್ನು ಒಟ್ಟಿಗೆ ತರಲು ಮತ್ತು ನಿಜವಾದ ಸಂತೋಷ ಎಮದರೆ ಹಂಚಿಕೊಳ್ಳುವುದು ಹಾಗೂ ಇತರರ ಬಗ್ಗೆ ಕಾಳಜಿ ವಹಿಸುವುದು ಎಂಬುದನ್ನು ಕಲಿಸುವ ಒಂದು ಅವಕಾಶವಾಯಿತು.

ಈ ಶಿಕ್ಷಣ ಸಂಸ್ಥೆಯು ಒಳ್ಳೆಯ ಶಿಕ್ಷಣ ನೀಡುವ ಉದ್ದೇಶದೊಂದಿಗೆ ಸಮಾಜದಲ್ಲಿ ಪರಾಮಭವ ಉದಾರತೆ ಮತ್ತು ಪ್ರತಿ ಮಗುವನ್ನು ಸಮಾಜದಲ್ಲಿ ಒಬ್ಬ ಉತ್ತಮ ಜವಬ್ದಾರಿಯುತ ನಾಗರಿಕನನ್ನಾಗಿ ಮಾಡುವ ಉದ್ದೇಶವನ್ನು ಹೊಂದಿದೆ.

ಈ ನಿಟ್ಟಿನಲ್ಲಿ ಇಂದು ಲಿಟಲ್ ಬಡಿ ಪ್ರೀ ಸ್ಕೂಲ್ ತನ್ನ ಶಾಲಾ ಆವರಣದಲ್ಲಿ ಅಮರ ಚಾಚಾ ಜವಹಾರಲಾಲ್ ನೆಹರೂ ಅನಥಾಶ್ರಮದ ಅನಾಥ ಮಕ್ಕಳಿಗೆ ಕ್ರೀಡೆ ಮನರಂಜನೆಯೊಂದಿಗೆ ಉಡುಗೊರೆ ನೀಡಿ ಸತ್ಕರಿಸಲಾಯಿತು.

# ಹೃದಯಾಘಾತಕ್ಕೆ ವಿದ್ಯಾರ್ಥಿ ಬಲಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22– ಹೃದಯಾಘಾತವಾಗಿ ವಿದ್ಯಾರ್ಥಿಯೊಬ್ಬ ಮೃತಪಟ್ಟಿರುವ ಘಟನೆ ಇಲ್ಲಿನ ಗಂಗಾನಗರದಲ್ಲಿ ಇಂದು ಬೆಳಗಿನಜಾವ 1 ಗಂಟೆ ಸುಮಾರಿಗೆ ನಡೆದಿದೆ.



ಕಿರಣ್ ತಂದೆ ರವಿಕುಮಾರ

ಬಬಲಾದ (19) ಮೃತಪಟ್ಟ ವಿದ್ಯಾರ್ಥಿ.

ಕಿರಣ್ ನಗರದ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ 4ನೇ ಸೆಮಿಸ್ಟರ್‌ನಲ್ಲಿ ಓದುತ್ತಿದ್ದ ಎಂದು ತಿಳಿದುಬಂದಿದೆ.

# ಹಂಪಿ ಉತ್ಸವ ಎತ್ತು, ಟಗರು, ಶ್ವಾನಗಳ ಪ್ರದರ್ಶನ : ನೋಂದಾಣಿಗೆ ಅವಕಾಶ.

ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ(ವಿಜಯನಗರ) ಫೆ22: ಹಂಪಿ ಉತ್ಸವ–2025 ನಿಮಿತ್ತ ಫೆ.28 ರಂದು ಜಿಲ್ಲಾ ಮಟ್ಟದ ಎತ್ತುಗಳ ಪ್ರದರ್ಶನ, ಮಾರ್ಚ್ 1 ರಂದು ಜಿಲ್ಲಾ ಮಟ್ಟದ ಟಗರುಗಳ ಪ್ರದರ್ಶನ, ಮಾರ್ಚ್ 2 ರಂದು ಜಿಲ್ಲಾ ಮಟ್ಟದ ಶ್ವಾನಗಳ ಪ್ರದರ್ಶನವನ್ನು ಕಮಲಾಪುರದ ಪೆಟ್ರೋಲ್ ಬಂಕ್ ಹಿಂಭಾಗದ ಹಂಪಿಗೆ ತೆರಳುವ ಮಾರ್ಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ.ಪೋಮ್‌ಸಿಂಗ್ ತಿಳಿಸಿದ್ದಾರೆ. ಹಂಪಿ ಉತ್ಸವದಲ್ಲಿ ಜನಾಕರ್ಷಣೆಗೆ ವಿಶೇಷವಾಗಿ ಎತ್ತು, ಟಗರು ಹಾಗೂ ಶ್ವಾನಗಳ ಪ್ರದರ್ಶನಗಳನ್ನು ಏರ್ಪಡಿಸಲಾಗಿದ್ದು, ಜಿಲ್ಲೆಯ ನಾನಾ ಭಾಗಗಳಿಂದ ಸುಮಾರು 200 ಜೋಡಿ ಎತ್ತುಗಳು, 200 ಟಗರುಗಳು ಹಾಗೂ 500 ಕ್ಕೂ ಹೆಚ್ಚು ಶ್ವಾನಗಳು ಪ್ರದರ್ಶನದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. 20 ವಿವಿಧ ತಳಿಯ ಶ್ವಾನಗಳು ಸೇರಿ ಹಲವಾರು ವಿಶೇಷ ತಳಿಯ ಶ್ವಾನಗಳನ್ನು ಪ್ರದರ್ಶನದಲ್ಲಿ ಕಾಣಬಹುದಾಗಿದೆ. ಪ್ರದರ್ಶನದಲ್ಲಿ ಉತ್ತಮವೆನಿಸಿದ ಎತ್ತು,




ಟಗರು, ಶ್ವಾನಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನಗದು ರೂಪದಲ್ಲಿ ನೀಡಲಾಗುವುದು.

ವಿಶೇಷವಾಗಿ ಶ್ವಾನ ಪ್ರದರ್ಶನದಲ್ಲಿ ಪೋಲೀಸ್ ಇಲಾಖೆಯ ಶ್ವಾನಪಡೆಯವರು ಪೋಲೀಸ್ ಶ್ವಾನಗಳ ಚಾ–ಕಚಕ್ಯತೆಯ ಕೌಶಲ್ಯಗಳನ್ನು ಪ್ರದರ್ಶಿಸಲಿದ್ದಾರೆ. ಎತ್ತು, ಟಗರು ಮತ್ತು ಶ್ವಾನಗಳ ಪ್ರದರ್ಶನದಲ್ಲಿ ಭಾಗವಹಿಸುವ ಮಾಲೀಕರು ಫೆ.26 ರೊಳಗೆ ನೋಂದಾಣಿ ಮಾಡಿಕೊಳ್ಳಲು ಕೋರಲಾಗಿದೆ. ಹೆಚ್ಚಿನ ಮಾಹಿತಿ ಮತ್ತು ನೋಂದಾಣಿಗಾಗಿ : 9972791375, 9448262516, 9900199899, 9844524997, 8884023517, 7022109535, 7411838030, 9535612937, 8610494205 ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಮಟ್ಟದ ಕ್ರೀಡಾಕೂಟ 25ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ನೆಹರೂ ಯುವ ಕೇಂದ್ರದ ವತಿಯಿಂದ ನಗರದ ನೌಬಾದ್‌ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ಸಂಕೀರ್ಣದಲ್ಲಿ ಫೆ. 25 ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಮಟ್ಟದ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ.

ಕ್ರೀಡಾಕೂಟದಲ್ಲಿ ಯುವಕರ ವಿಭಾಗದಲ್ಲಿ ವಾಲಿಬಾಲ್, ವೇಟ್ ಲಿಫ್ಟಿಂಗ್, ಬ್ಯಾಡ್ಮಿಂಟನ್, ಯುವತಿಯರ ವಿಭಾಗದಲ್ಲಿ ಕೊಕ್ಕೋ, 100 ಮೀಟರ್ ಓಟ ಹಾಗೂ ಸ್ಲೋ ಸೈಕ್ಲಿಂಗ್ ಸ್ಪರ್ಧೆಗಳು ನಡೆಯಲಿವೆ ಎಂದು ನೆಹರೂ ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರಮೆ ತಿಳಿಸಿದ್ದಾರೆ. ಈಗಾಗಲೇ ಬೀದರ್, ಔರಾದ್, ಚಿಟಗುಪ್ಪ, ಹುಲಸೂರು ತಾಲ್ಲೂಕುಗಳಲ್ಲಿ ತಾಲ್ಲೂಕುಮಟ್ಟದ ಕ್ರೀಡಾಕೂಟಗಳು ಜರುಗಿವೆ. ಈ ತಾಲ್ಲೂಕುಗಳಲ್ಲಿ ನಡೆದ ಕ್ರೀಡಾಕೂಟದ ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಸ್ಥಾನ ಗಳಿಸಿದವರು ಜಿಲ್ಲಾಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಜಿಲ್ಲಾಮಟ್ಟದಲ್ಲಿ ವಿಜೇತರಾದವರಿಗೆ ಟ್ರೋಫಿ, ಪ್ರಮಾಣ ಪತ್ರ ವಿತರಿಸಲಾಗುವುದು. ಜತೆಗೆ ಅವರು ರಾಜ್ಯಮಟ್ಟದ ಸ್ಪರ್ಧೆಗೆ ಸಹ ಅರ್ಹತೆ ಗಳಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಸ್ಪರ್ಧಾಳುಗಳು ಆಧಾರ್ ಕಾರ್ಡ್ ನಕಲು ಪ್ರತಿಯೊಂದಿಗೆ ಕ್ರೀಡಾಕೂಟಕ್ಕೆ ಹಾಜರಾಗಬೇಕು. ಕ್ರೀಡಾಕೂಟದ ಕುರಿತ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9004315246, 9535230350 ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

# ಮಾ.1 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ ಲೋಪವೆಸಗಿದರೆ ಕಠಿಣ ಕ್ರಮ :ಜಿಲ್ಲಾಧಿಕಾರಿ

ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ(ವಿಜಯನಗರ) ಫೆ22: ಮಾರ್ಚ್ 1 ರಿಂದ 20 ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ನಡೆಯಲಿದ್ದು, ಯಾವುದೇ ಲೋಪವಾಗದಂತೆ ಪರೀಕ್ಷಾ ನಿಯೋಜಿತ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷಾ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು, ಜಿಲ್ಲೆಯಲ್ಲಿ ಒಟ್ಟು 23 ಪರೀಕ್ಷಾ ಕೇಂದ್ರಗಳಿದ್ದು, ಪ್ರತಿ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಕೆಯನ್ನು ಕಡ್ಡಾಯಗೊಳಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮುಖ್ಯಸ್ಥರನ್ನು ಹೊರತುಪಡಿಸಿ ಉಳಿದಂತೆ ಎಲ್ಲರ ಮೊಬೈಲ್ ಬಳಕೆಯನ್ನು



ನಿಷೇಧಿಸಲಾಗಿದೆ. ಪ್ರಶ್ನೆಪತ್ರಿಕೆಗಳನ್ನು ತೆಗೆದುಕೊಂಡು ಹೋಗುವ ಮಾರ್ಗದಲ್ಲಿ ಪೋಲೀಸ್ ಬಿಗಿಬಂದೋಬಸ್ತ್ ನಿಯೋಜನೆ ಸೇರಿದಂತೆ ಎಲ್ಲಾ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಉತ್ತರ ಪತ್ರಿಕೆ ಪಾಲಕರು, ಕಚೇರಿ ಅಧೀಕ್ಷಕರು ಹಾಗೂ ಗೌಪ್ಯವಸ್ತುಗಳನ್ನು ಸಾಗಿಸುವ ಮಾರ್ಗಾಧಿಕಾರಿಗಳು ಎಚ್ಚರಿಕೆ ವಹಿಸುವಂತೆ ತಿಳಿಸಿದರು. ಸಾಮಾಜಿಕ ಜಾಲತಾಣಗಳಲ್ಲಿ ಪಿಯುಸಿ ಪ್ರಶ್ನೆ ಪತ್ರಿಕೆ ಸೋರಿಕೆಯ ಬಗ್ಗೆ ಸುಳ್ಳು ಸುದ್ದಿಗಳು ಹರಡಿಸಿದರೇ ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಪರೀಕ್ಷಾ ಸಮಯದಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಜೆಸ್ಕಾಂ ಅಧಿಕಾರಿಗಳು ನಿಗಾವಹಿಸಬೇಕು. ಯಾವುದೇ ಗೊಂದಲಗಳಿಲ್ಲದೇ ಪರೀಕ್ಷೆಯನ್ನು ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ನಾಗರಾಜ ಹವಾಲ್ದಾರ್ ಮಾತನಾಡಿ, ಮಾ.01 ರಿಂದ ಮಾ.20 ರವರೆಗೆ ಬೆ.10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪರೀಕ್ಷೆ ನಡೆಯಲಿದೆ ಎಂದರು.

ಸಭೆಯಲ್ಲಿ ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಉತ್ತರ ಪತ್ರಿಕೆ ಪಾಲಕರು, ಕಚೇರಿ ಅಧೀಕ್ಷಕರು ಹಾಗೂ ಗೌಪ್ಯ ವಸ್ತುಗಳನ್ನು ಸಾಗಿಸುವ ಮಾರ್ಗಾಧಿಕಾರಿಗಳು ಸೇರಿದಂತೆ ಶಿಕ್ಷಣ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

# ಇಂಧನ ಉಳಿತಾಯ ಜಾಗೃತಿಗಾಗಿ ಕಾಲ್ನುಡಗೆ ಜಾಥಾ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜಿಲ್ಲೆಯ ಚಿಟಗುಪ್ಪಾ ತಾಲೂಕಿನ ಮನ್ನಾಎಖೇಳ್ಳಿಯಲ್ಲಿ ಇಂಡಿಯನ್ ಆಯಿಲ್ ಕಂಪನಿಯ ಪ್ರಯೋಜತಕತ್ವದಲ್ಲಿ ದೇಶದ್ಯಾಂತ ನಡೆಯುತ್ತಿರುವ ಇಂಧನ ಉಳಿತಾಯ ಜಾಗೃತಿ ಆಧೋಲನದ ಅಂಗವಾಗಿ ಬೀದರ ಜಿಲ್ಲೆಯ ಚಿಟಗುಪ್ಪಾ ತಾಲೂಕಿನ ಮನ್ನಾಎಖೇಳ್ಳಿಯಲ್ಲಿ ಕಾಲ್ನುಡಗೆ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಕರ್ನಾಟಕ ರಾಜ್ಯದಲ್ಲಿ ಸೀಕೋ ಸಂಸ್ಥೆಯ ಉಸ್ತುವಾರಿಯಲ್ಲಿ ನಡೆಯುತ್ತಿರುವ ಇಂಧನ ಉಳಿತಾಯ ಆಂಧೋಲನಕ್ಕೆ ಮನ್ನಾಎಖೇಳ್ಳಿ ಮಾನ್ಯ ಆರಕ್ಷಕ ಉಪ ನಿರೀಕ್ಷಕರಾದ ಶ್ರೀ ಮಹೀಂದ್ರಕುಮಾರ ಕಾಲ್ನುಡುಗೆ ಜಾಥಾಕ್ಕೆ ಚಾಲನೆ ನೀಡಿದ್ದರು.

ಮಾನವ ವಿಕಾಸ ಕೇಂದ್ರ ಸಂಸ್ಥೆ ಬೀದರ ಇವರ ನೇತೃತ್ವದಲ್ಲಿ ಬೀದರ ಜಿಲ್ಲೆಯ ಮನ್ನಾಎಖೇಳ್ಳಿಯಲ್ಲಿ ಇಂಧನ ಉಳಿತಾಯ ಕಾಲ್ನುಡುಗೆಯ ನೇತೃತ್ವನ್ನು ಶ್ರೀ ಸಂಜುಕುಮಾರ ಅಧ್ಯಕ್ಷರು ಮಾನವ ವಿಕಾಸ ಕೇಂದ್ರ ಸಂಸ್ಥೆ ಬೀದರ, ಶ್ರೀಮತಿ ಜ್ಯೋತಿ ತತ್ವಶೀಲಾ ಹಾಗೂ ಸರ್ಕಾರಿ ಪ್ರೌಢ ಮತ್ತು ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳು, ಶಾಲೆಯ ಶಿಕ್ಷಕರು, ಶಿಕ್ಷಕಿಯರು ಮತ್ತು ಮಕ್ಕಳು ಭಾಗವಹಿಸಿದರು. ಈ ಜಾಥಾ ಮನ್ನಾಎಖೇಳ್ಳಿ ಅಂಬೇಡ್ಕರ್ ವೃತ್ತದ ಮುಖಾಂತರ ಸಮುದಾಯ ಭವನ ಮನ್ನಾಎಖೇಳ್ಳಿಯಿಂದ ಪುನಃ ಅಂಬೇಡ್ಕರ್ ವೃತ್ತ ಮುಖಾಂತರ ತಮ್ಮ ತಮ್ಮ ಶಾಲೆಯ ಮಕ್ಕಳಿಗೆ ಕಳಿಸಿಕೊಡಲಾಗಿತ್ತು. ಮತ್ತು ಇಂಧನ ಉಳಿತಾಯದ ಬಗ್ಗೆ ಜನಾಜಾಗೃತಿಯನ್ನು ಮೂಡಿಸಲು ಯಶಸ್ವಿಯಾಯಿತ್ತು.

# ಎಸ್. ಸಿ. ಎಸ್. ಪಿ., ಟಿ. ಎಸ್. ಪಿ ಯೋಜನೆ ಭೌತಿಕ ಗುರಿ ಪೂರ್ಣಗೊಳಿಸಿ – ನಲಿನ್ ಅತುಲ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಎಸ್.ಸಿ.ಎಸ್.ಪಿ–ಟಿ.ಎಸ್.ಪಿ ಯೋಜನೆಯಡಿ ಪ್ರಸಕ್ತ ಸಾಲಿನ ಕೊಪ್ಪಳ ಜಿಲ್ಲೆಯ ಭೌತಿಕ ಗುರಿಯನ್ನು ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಂಡಿದ್ದ ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ 2013ರನ್ವಯ ಅನುಸೂಚಿತ ಜಾತಿಗಳು ಉಪಯೋಜನೆ, ಬುಡಕಟ್ಟು ಉಪಯೋಜನೆ ಹಾಗೂ ಪರಿಶಿಷ್ಟಜಾತಿ, ವರ್ಗದ ಅಭಿವೃದ್ಧಿ ಕಾರ್ಯಕ್ರಮಗಳ ಡಿಸೆಂಬರ್–2024 ಮತ್ತು ಜನವರಿ–2025ರ ಪ್ರಗತಿ ಪರಿಶೀಲನೆಯ ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.



ಎಲ್ಲಾ ಇಲಾಖೆಗಳು, ನಿಗಮಗಳಿಗೆ ಎಸ್.ಸಿ.ಎಸ್.ಪಿ–ಟಿ.ಎಸ್.ಪಿ. ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಸರ್ಕಾರವು ಅನುದಾನವನ್ನು ಬಿಡುಗಡೆ ಮಾಡಿ, ಗುರಿ ನಿಗದಿಪಡಿಸಿದೆ. ಅದರಂತೆ ಪ್ರಸಕ್ತ ಸಾಲಿನ ತಮ್ಮ ಕಚೇರಿಗಳಿಗೆ ನಿಗದಿಪಡಿಸಿರುವ ಭೌತಿಕ ಗುರಿಯನ್ವಯ ಪ್ರಗತಿಯನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು. ನಿಗದಿತ ಗುರಿಗಿಂತ ಕಡಿಮೆ ಪ್ರಗತಿ ಅಥವಾ ಶೇ.100 ರಷ್ಟು ಪ್ರಗತಿ ಸಾಧನೆ ಅಸಾಧ್ಯವಿದ್ದರೆ, ಅಂತಹ ಸಂಬಂಧಪಟ್ಟ ಇಲಾಖೆಗಳು ಮಾಹಿತಿ ನೀಡಬೇಕು. ಕೃಷಿ, ತೋಟಗಾರಿಕೆ, ಪಶುಪಾಲನೆ, ರೇಷ್ಮೆ, ಪ್ರವಾಸೋದ್ಯಮ ಹಾಗೂ ವಿವಿಧ ಇಲಾಖೆಗಳು, ನಿಯಮಗಳ ಮೂಲಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ ನೀಡಲಾಗುವ ಸರ್ಕಾರದ ಸೌಲಭ್ಯಗಳನ್ನು ನಿಗದಿತ ಅವಧಿಯೊಳಗೆ ನೀಡಬೇಕು. ಸರ್ಕಾರ ನೀಡುವ ಅನುದಾನ ಬಿಡುಗಡೆಯಾದ ದಿನಾಂಕ, ಫಲಾನುಭವಿಗಳಿಗೆ ತಲುಪಿಸಿದ ದಿನಾಂಕ, ಖರ್ಚಾದ ಮೊತ್ತ, ಬಾಕಿ ಉಳಿದಿರುವ ಅನುದಾನವನ್ನು ಕಾರಣ ಸಹಿತ ಮಾಹಿತಿಯನ್ನು ನೀಡಿ. ಎಸ್.ಸಿ.ಎಸ್.ಪಿ–ಟಿ.ಎಸ್.ಪಿ ಯೋಜನೆಯಡಿ ವಿವಿಧ ಅನುಷ್ಠಾನ ಏಜೆನ್ಸಿಗಳ ಮೂಲಕ ನಿರ್ಮಿಸುತ್ತಿರುವ ಕಟ್ಟಡಗಳು, ಭವನಗಳ ಕುರಿತು ಸಹ ಸೂಕ್ತ ಮಾಹಿತಿ ನೀಡಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ ಅವರು ಮಾತನಾಡಿ, ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪ್ರತಿ ಮಾಹೆಯಲ್ಲಿ ಇಲಾಖಾವಾರು ಪ್ರಗತಿ ಸಾಧಿಸಿದ ವರದಿಯನ್ನು ನಿಗದಿತ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಭರ್ತಿಮಾಡಿ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ್, ಪಶು ಇಲಾಖೆ ಉಪನಿರ್ದೇಶಕ ಡಾ ಪಿ.ಎಂ.ಮಲ್ಲಯ್ಯ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ್ ಬಿರಾದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ತಾ.ಪಂ ಇಒಗಳು ಮತ್ತು ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಸರ್ವಾಧಿಕಾರಿ ಧೋರಣೆ ತೋರಿದ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ : ರವೀಂದ್ರ ಡಿ ಬಾಗಲಕೋಟ್

# ಅತಿಕ್ರಮಣ ಮನೆಗಳ ತೆರವಿಗೆ ನೋಟಿಸ್

(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ





ಕೊಪ್ಪಳ : ಕುಕನೂರ ಪಟ್ಟಣ 2ನೇ ವಾರ್ಡಿನಲ್ಲಿರುವ ಬಸವೇಶ್ವರನಗರ ಬಡಾವಣೆಯ ಉದ್ಯಾನವನ ಅತಿಕ್ರಮಣ ನಿರ್ಮಿಸಿದ ಮನೆ ಹಾಗೂ ಡಬ್ಬಿ ಅಂಗಡಿಗಳ ತೆರವಿಗೆ ಕುಕನೂರು ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ನೋಟಿಸ್ ನೀಡಿದ್ದು ಚರ್ಚೆಗೆ ಗ್ರಾಸವಾಗಿದ್ದು ಮುಖ್ಯ ಅಧಿಕಾರಿಗಳು ಸರ್ವಾಧಿಕಾರ ಧೋರಣೆ ಸಾರ್ವಜನಿಕ ವಲಯದಲ್ಲಿ ಗ್ರಾಸವಾಗಿ ಕಾಡತೊಡಗಿದೆ.

ಪಟ್ಟಣದಲ್ಲಿ ಅತಿಕ್ರಮಣ ಮನೆಗಳ ಹಾಗೂ ಪೆಟ್ಟಿಗೆ ಅಂಗಡಿಗಳ ತೆರವುಗಳ ಕಾರ್ಯಾಚರಣೆಗೆ ಅಧಿಕಾರಿಗಳು ಮುಂದಾಗಿರುವುದು ಸಂತಸದ ವಿಷಯವಾಗಿದ್ದು ಅನುಮಾನ ಹುಟ್ಟಿಕೊಳ್ಳಲು ಕಾರಣವೇನು ಎಂಬ ಅನುಮಾನ ಎಲ್ಲರಲ್ಲೂ ಮೂಡುವುದು ಸಹಜ ಆದರೆ ಕುಕನೂರು ಪಟ್ಟಣ 19 ವಾರ್ಡುಗಳನ್ನು ಹೊಂದಿದ್ದು ಇದರಲ್ಲಿ 19ನೇ ವಾರ್ಡ್ (ಪೂರ್ವ ಕುಕನೂರು ಗ್ರಾಮ) ಹೊರತುಪಡಿಸಿದರೆ ಉಳಿದೆಲ್ಲಕಡೆ ಅಭಿವೃದ್ಧಿ ಗೊಂಡಿರುವ ಬಡಾವಣೆಗಳಿದ್ದು ಅವುಗಳಲ್ಲಿ ಹಲವಾರು ಜನ ಅತಿಕ್ರಮಣ ಮಾಡಿಕೊಂಡು ಮನೆ ಸೇರಿದಂತೆ ಇತರ ಕಟ್ಟಡಗಳನ್ನು ಕಟ್ಟಿಕೊಂಡಿರುತ್ತಾರೆ ಆದರೆ ಎಲ್ಲಾ ಬಡಾವಣೆಗಳನ್ನು ಹೊರತುಪಡಿಸಿ ವಾರ್ಡ್ ನಂಬರ್ 2 ರ ಬಸವೇಶ್ವರನಗರ ಬಡಾವಣೆಯ ಮೇಲೆ ಮಾತ್ರ ಮುಖ್ಯ ಅಧಿಕಾರಿಯ ಕಣ್ಣು ಬಿದ್ದಿರುವುದು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ.

ಕಳೆದ ಬಾರಿಯ ಪಟ್ಟಣ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಪಟ್ಟಣದಲ್ಲಿರುವ ಎಲ್ಲಾ ಅತಿಕ್ರಮಣ ಕಟ್ಟಡಗಳನ್ನು ತೆರವುಗೊಳಿಸುವಂತೆ 19 ವಾರ್ಡಗಳ ಸದಸ್ಯರು ಒಪ್ಪಿಕೊಂಡ ಠರಾವ ಮಾಡಿರುವುದು ಜೊತೆಗೆ ತೆರವಿಗೆ ನೋಟಿಸ್ ಕೊಡಬೇಕಾದ ಸಂದರ್ಭದಲ್ಲಿ ಸ್ಥಳೀಯ ಸದಸ್ಯರ ಸಲಹೆ ಸೂಚನೆಗಳನ್ನು ಪಡೆಯುವುದು ಅವರ ಸಮ್ಮುಖದಲ್ಲಿ ನೋಟಿಸ್ ನೀಡಬೇಕೆಂದು ಸಭೆಯಲ್ಲಿ ತಿಳಿಸಲಾಗಿತ್ತು. ಆದರೆ ಪಟ್ಟಣ ಪಂಚಾಯತಿ ಮುಖ್ಯ ಅಧಿಕಾರಿ ಪಟ್ಟಣ ಪಂಚಾಯಿತಿಯ ಯಾವೊಬ್ಬ ಸದಸ್ಯರ ಗಮನಕ್ಕೂ ಈ ವಿಷಯ ತರದೆ ಕೇವಲ ಒಂದೇ ಬಡಾವಣೆಯ ನಾಗರಿಕರಿಗೆ ನೋಟಿಸ್ ನೀಡಿರುವುದು ಸರ್ವಾಧಿಕಾರಿ ಧೋರಣೆ ತೋರಿರುವ ಪಟ್ಟಣ ಪಂಚಾಯತ ಮುಖ್ಯ ಅಧಿಕಾರಿಗಳು ಎಂಬ ಚರ್ಚೆಗಳು ಪಟ್ಟಣದ ತುಂಬಾ ಪ್ರಾರಂಭಗೊಂಡಿದೆ.

ಸಾರ್ವಜನಿಕರ ಹೇಳಿಕೆಯ ಪ್ರಕಾರ ಮುಖ್ಯ ಅಧಿಕಾರಿಗಳು ಯಾರದೋ ಒತ್ತಡಕ್ಕೆ ಒಳಗಾಗಿದ್ದು ಕೇವಲ ಒಂದು ಬಡಾವಣೆಯ ಅತಿಕ್ರಮಣಕಾರರಿಗೆ ನೋಟಿಸ್ ನೀಡಿದ್ದಾರೆ ಇದರ ಹಿಂದಿರುವ ಕೈಗಳು ಯಾವವು ಎಂಬ ಕುತೂಹಲ ಮೂಡಿರುವುದು ಒಂದೆಡೆಯಾದರೆ ಇನ್ನೊಂದೆಡೆ ಇದನ್ನು ಕೇಳಲು ಹೋದ ಸಾರ್ವಜನಿಕರಿಗೆ ನೇರ ಉತ್ತರ ನೀಡದೆ ಸ್ಥಳೀಯ ಶಾಸಕರೇ ನನ್ನೊಂದಿಗಿದ್ದಾರೆ ನಾನು ಆಡಳಿತ ನಡೆಸುವುದೇ ಹೀಗೆ ನಿಮ್ಮ ಕೈಯಿಂದ ಏನು ಮಾಡಲು ಸಾಧ್ಯವೊ ಅದನ್ನು ಮಾಡಿ ಬೇಕಿದ್ದರೆ ಕೋರ್ಟ್ ಮೊರೆ ಹೋಗಿ ಇಲ್ಲವಾದಲ್ಲಿ ತೆಪ್ಪಗೆ ಜಾಗ ಖಾಲಿ ಮಾಡಿ ಎಂದು ಹೇಳಿ ಕಳಿಸುತ್ತಿರುವುದು ನಿಜಕ್ಕೂ ಆಶ್ಚರ್ಯಕರ ಸಂಗತಿಯಾಗಿದೆ ಎಂದು ಸಾರ್ವಜನಿಕರೊಬ್ಬರು ಪತ್ರಿಕೆಯ ವರದಿಗಾರರಿಗೆ ತಿಳಿಸಿದ್ದಾರೆ.



ರಾಯಾಚೂರ:ಶಿಕ್ಷಣ ಜೊತೆಗೆ ಸಂಸ್ಕಾರ, ಶಿಸ್ತು ಹಾಗೂ ಗುರು ಹಿರಿಯರನ್ನು ಗೌರವಿಸುವ, ಒಳ್ಳೆಯ ನಡವಳಿಕೆ ಇದ್ದರೆ ಬದುಕಿನಲ್ಲಿ ಉತ್ತುಂಗಕ್ಕೆ ಏರಲು ಸಾಧ್ಯ. ಬೆಳೆಯುವ ಪೈರು ಮೊಳಕೆಯಲ್ಲಿಯೇ ನೋಡು ಎಂಬಂತೆ ಮರಿಯಾಲ ಸಿಬಿಎಸ್‌ಇ ಶಾಲೆ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸಾಕ್ಷಿಯಾಗಿದೆ. ಕಲಿಕೆ, ಬರವಣಿಗೆ ಹಾಗು ಪುಸ್ತಕಗಳನ್ನು ಓದುವ ಹವ್ಯಾಸಿ ಬೆಳಸಿಕೊಳ್ಳಬೇಕು ಎಂದು ರಾಯಾಚೂರ ನಲ್ಲಿ ನಡೆದ ಯರಮಸ್ ಕ್ಯಾಂಪನಲ್ಲಿ ಫೆಡರಲ್ ಪಬ್ಲಿಕ್ ಸ್ಕೂಲ್ ನ ಲೇಸ್ ವಾರ್ಷಿಕೋತ್ಸವ ಮತ್ತು 2025 ಸಿಬಿಎಸ್‌ಇ ಶೈಕ್ಷಣಿಕ ಚಿಹ್ನೆಯ ಸುರಪುರ ಮತಕ್ಷೇತ್ರದ ಜನಪ್ರಿಯ ಶಾಸಕರಾದ ರಾಜಾ ವೇಣುಗೋಪಾಲ ನಾಯಕ ಕಾರ್ಯಕ್ರಮ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಹಾಗೂ ಫೆಡರಲ್ ಪಬ್ಲಿಕ್ ಸ್ಕೂಲ್ ನ ಸಂಸ್ಥಾಪಕರಾದ ಮತ್ತು ರಾಯಚೂರು ಲೋಕಸಭಾ ಮಾಜಿ ಸಂಸದರಾದ ದಿ. ರಾಜಾ ರಂಗಪ್ಪ ನಾಯಕ ಧಣಿಯವರಿಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶ್ರೀ ವೆಂಕುಬ ಸಾಹುಕಾರ ಯಾದವ್ ಹಾಗೂ ಶ್ರೀ ಅಬ್ದುಲ್ ಗಫರ್ ನಗ್ನೂರಿ ಹಾಗೂ ರಾಯಚೂರುನ ಎಲ್ಲಾ ಗಣ್ಯ ಮಾನ್ಯರು ಮತ್ತು ಸ್ಕೂಲ್‌ನ ಅಧ್ಯಕ್ಷರು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ದೇವದಾಸಿ ಪುನರ್ವಸತಿ ಯೋಜನೆಯಡಿ ವಸತಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 22, (ಕ.ವಾ) : 2024–25ನೇ ಸಾಲಿನ ದೇವದಾಸಿ ಪುನರ್ವಸತಿ ಯೋಜನೆಯಡಿ ಮಾಜಿ ದೇವದಾಸಿ ಮಹಿಳೆಯರ ನಿವೇಶನ ಹೊಂದಿ ವಸತಿ ರಹಿತರಿಂದ ವಸತಿ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ವೀರನಗೌಡ ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆಯಡಿ 1993–94 ಮತ್ತು 2007–08ನೇ ಸಾಲಿನ ಸಮೀಕ್ಷೆಯಲ್ಲಿ ಗುರುತಿಸಿದ ಸ್ವಂತ ನಿವೇಶನ ಅಥವಾ ನಿವೇಶನ/ಭೂ ಮಾಲೀಕರು ಫಲಾನುಭವಿ ಅಲ್ಲದೇ ಇತರೆ ರಕ್ತ ಸಂಬಂಧಿಗಳು ಆಗಿದ್ದಲ್ಲಿ ಈ ನಿವೇಶನವನ್ನು ಫಲಾನುಭವಿಗಳ ಹೆಸರಿಗೆ ವರ್ಗಾವಣೆ ಮಾಡುವ ಅವಶ್ಯಕತೆ ಇರುವುದಿಲ್ಲ. ಬದಲಾಗಿ ಸ್ವಯಂ ಪ್ರಮಾಣ, ಒಪ್ಪಿಗೆ ಪತ್ರವನ್ನು (ಸ್ವಅಫಿಡೇವಿಟ್) ಅನ್ನು ಸಲ್ಲಿಸಿವಂತಹ ವಸತಿ ರಹಿತ ದೇವದಾಸಿ ಮಹಿಳೆಯರಿಗೆ ವಸತಿ ಸೌಲಭ್ಯ ಕಲ್ಪಿಸಲು ದೇವದಾಸಿ ಪುನರ್ವಸತಿ ಯೋಜನೆ, ಯಾದಗಿರಿ ಜಿಲ್ಲೆಗೆ ನಗರ ಪ್ರದೇಶದ 21 ಫಲಾನುಭವಿಗಳಿಗೆ ಘಟಕದ ವೆಚ್ಚ ಪ್ರತಿ ಫಲಾನುಭವಿಗೆ 2,00000 ರೂ.ಗಳ ಸಹಾಯಧನವನ್ನು ನೀಡಿಲಾಗುವುದು.

ಗ್ರಾಮೀಣ ಪ್ರದೇಶದಲ್ಲಿ 27 ಫಲಾನುಭವಿಗಳಿಗೆ ಘಟಕದ ವೆಚ್ಚ ಪ್ರತಿ ಫಲಾನುಭವಿಗಳಿಗೆ 1,75000 ರೂ.ಗಳ ಸಹಾಯಧನವನ್ನು ನೀಡಿ ವಸತಿ ಸೌಲಭ್ಯ ಕಲ್ಪಿಸಲು ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿಗಳನ್ನು ಉಚಿತವಾಗಿ ವಿತರಿಸುತ್ತಿದ್ದು, ದೇವದಾಸಿ ಪುನರ್ವಸತಿ ಯೋಜನೆಯ ಆಯಾ ತಾಲ್ಲೂಕಿನ ಯೋಜನಾ ಅನುಷ್ಠಾನಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು 2025ರ ಫೆಬ್ರವರಿ 22 ರಿಂದ ಮಾರ್ಚ್ 5ರ ವರೆಗೆ ಸಲ್ಲಿಸಬೇಕು, ತಡವಾಗಿ ಬಂದ ಅರ್ಜಿಗಳನ್ನು ಮತ್ತು ಅಪೂರ್ಣ ಮಾಹಿತಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಗತ್ಯ ದಾಖಲಾತಿಗಳು : ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಆರ್.ಡಿ.ನಂಬರ್ ಹೊಂದಿಬೇಕು, ಮತದಾರರ ಗುರುತಿನ ಚೀಟಿ ಮತ್ತು ಪಡಿತರ ಚೀಟಿ ಹೊಸ ಚೀಟಿ, ಭಾವಚಿತ್ರ –4, ನಿವೇಶನದ ಖಾತಾ ಉತ್ತರ, ಆಧಾರ ಕಾರ್ಡ್ ಪ್ರತಿ, ಚಾಲ್ತಿ ಬ್ಯಾಂಕ್ ಪಾಸ್‌ಬುಕ್, ವಯಸ್ಸಿನ ಪ್ರಮಾಣ ಪತ್ರ ಸರ್ಕಾರಿ ವೈದ್ಯರಿಂದ ಪಡೆದಿರಬೇಕು, ದೂರವಾಣಿ ಸಂಖ್ಯೆ ಲಗತ್ತಿಸಬೇಕು, ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಅಗತ್ಯ ದಾಖಲಾತಿಗಳನ್ನು ದ್ವಿಪ್ರತಿಯಲ್ಲಿ ಸಲ್ಲಿಸಬೇಕು, ಅರ್ಜಿ ಪಡೆಯಲು ಹೆಚ್ಚಿನ ಮಾಹಿತಿಗಾಗಿ ಸುರಪುರ ಮಲ್ಲಪ್ಪ ಅಣಬಿ ಮೊ.ನಂ. 9535028045, ಯಾದಗಿರಿ, ಶಹಾಪೂರ ರಾಜಶೇಖರ ಆನೆಗುಂದಿ ಮೊ.ನಂ.9901267602ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವರ ಏಳಿಗೆಯನ್ನು ಬಯಸುವುದೆ ಸರ್ವೋದಯ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಫೆ 22. –ಸರ್ವೋದಯ ಎಂದರೆ ಸರ್ವರ ಉದಯ ಹಾಗೂ ಏಳಿಗೆಯನ್ನು ಬಯಸುವದು. ಬಡತನ. ಶ್ರೀ ಮಂತಿಕೆ ಇವುಗಳ ತಾರತಮ್ಯವನ್ನು ಹೋಗಲಾಡಿಸಿ ಎಲ್ಲರೂ ಮನುಷ್ಯರು ಎಂದು ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಹಾರಕೂಡದ ಸಾಹಿತಿ. ಕವಿ. ಚಿಂತಕರಾದ ಪೂಜ್ಯ ಶ್ರೀ ಡಾ. ಚನ್ನವೀರಶಿವಾಚಾರ್ಯರು ತಿಳಿಸಿದರು. ಹುಲಸೂರು ತಾಲೂಕಿನ ಬೇಲೂರು ಗ್ರಾಮದಲ್ಲಿ ಶ್ರೀ ಉರಲಿಂಗಪೆದ್ದಿ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ವತಿಯಿಂದ ಆಯೋಜಿಸಿದ ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಮಾತನಾಡಿ ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಮಹಾಸ್ವಾಮಿಜಿ ಯವರು ಮಹತ್ತರ ಕಾರ್ಯವನ್ನು ಮಾಡುತ್ತಿದ್ದಾರೆ. ಇಂಥಹ ಮಠಕ್ಕೆ ನಮ್ಮ ಸರ್ಕಾರಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಘ ಸಂಸ್ಥೆಗಳು ಧಾನಿಗಳು ಇವರಿಗೆ ಸಹಾಯ ವಾಗಿದೆ ಇನ್ನು ಸಹ ಹೆಚ್ಚಿನ ಸಹಾಯ ನೀಡಬೇಕು ಎಂದರು. ಹಿರಿಯ ಸಾಹಿತಿ ಡಾ. ನಾಗಬಾಯಿ ಬಿ. ಬುಳ್ಳಾ ಉದ್ಘಾಟಿಸಿ ಮಾತನಾಡಿ ಮೂಡ ನಂಬಿಕೆ ಬಿಟ್ಟು ಬಸವಾದಿ ಶಿವಶರಣರ ಮಾರ್ಗದಲ್ಲಿ ಸಾಗಬೇಕು ಎಂದು ಕರೆ ಕೊಟ್ಟರು. ಕಲಬುರ್ಗಿಯ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ರಮೇಶ್ ಲಂಡನಕರ್ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿ ಇಂದಿನ ದಿನಮಾನಗಳಲಿ ಮಾನವೀಯ ಮೌಲ್ಯಗಳು ವಿರಳವಾಗಿವೆ. ಕುಟುಂಬದಲ್ಲಿ ಒಟ್ಟಿಗೆ ಕೂಡಿ ಮಾತನಾಡುವ ಪ್ರಸಂಗ ಕಾಣಲಾರದೆ ಅವರವರು ಮೊಬೈಲ್ ನಲ್ಲಿ ತೊಡಗಿಸಿಕೊಂಡಿದ್ದಾರೆ. ಇದರಿಂದ ಮಕ್ಕಳು ಖಿನ್ನತೆಗೆ ಒಳಗಾಗಿದ್ದಾರೆ ಎಂದರು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು ಮಾತನಾಡಿ ಕಲ್ಯಾಣ ಕರ್ನಾಟಕ ವಿಭಾಗದ ಮಟ್ಟದಲ್ಲಿ ಉರಿಲಿಂಗಪೆದ್ದಿ ಮಠವು ವಿಶೇಷವಾದ ಸಮಾರಂಭಗಳನ್ನು ಹಮ್ಮಿಕೊಳ್ಳುತ್ತಿರುವುದು ವಿಶೇಷವಾಗಿದೆ ಎಂದರು.

ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಸ್ವಾಮೀಜಿ ಮಾತನಾಡಿ ಇಲ್ಲಿವು ಸಹ ಕುಂಬಮೇಳ ಇಂದು ಜ್ಞಾನದ ಮತ್ತು ಭಕ್ತಿಯಿಂದ ಕೂಡಿದ ಕುಂಬಮೇಳ ಎಂದು ಹೇಳಿದರು.

ಮಠದ ಪೂಜ್ಯ ಶ್ರೀ ಪಂಚಾ–ಕ್ಷರಿ ಮಹಾಸ್ವಾಮಿಜಿ. ಹಾಗೂ ಮಹಾಲಿಂಗ ದೇವರು. ಧನರಾಜ ತಾಡಂಪ್ಪಳ್ಳಿ. ಅರ್ಜುನ ಕನಕ. ಸುರೇಶ ಕಾನೇಕರ. ಕಲಬುರ್ಗಿಯ ಬಿ. ಆರ್. ಬುದ್ದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸ್ವಾಗತ ಸಮ್ಮೇಳನದ ಕಾರ್ಯ ಅಧ್ಯಕ್ಷರಾದ ಜಗನ್ನಾಥ ಚಿಲ್ಲಾಬಟೆ. ಪ್ರಾಸ್ತಾವಿಕ ಸಂಯೋಜಕರಾದ ಸಾಹಿತಿ ಡಾ. ಗವಿಸಿದಪ್ಪಾ ಪಾಟೀಲ. ಶಿಕ್ಷಕರಾದ ಸಂಜು ನಡುಕರ ಸಂಚಾಲನೆ. ಗಣೇಶ್ ಚಂದ್ರಕಾಂತ ರಾಘು ವಂದಿಸಿದರು.

# ಶ್ರೀಶೈಲಕ್ಕೆ ವಿಶೇಷ ಬಸ್‌ಗಳ ವ್ಯವಸ್ಥೆ : ಸೌಲಭ್ಯ ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 22, ಮಹಾ ಶಿವರಾತ್ರಿ ಹಬ್ಬದ ಹಾಗೂ ಶ್ರೀಶೈಲ ಮಲ್ಲಿಕಾರ್ಜುನ ದೇವರ ರಥೋತ್ಸವ ಹಿನ್ನೆಲೆಯಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಯಾದಗಿರಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಶ್ರೀಶೈಲಕ್ಕೆ ವಿಶೇಷ ಬಸ್‌ಗಳನ್ನು ಕಾರ್ಯಾಚರಣೆ ವಿಶೇಷ ಬಸ್ ವಾಹನಗಳು ಸಂಚರಿಸಲಿವೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ತಿಳಿಸಿದ್ದಾರೆ.

2025ರ ಫೆಬ್ರವರಿ 22 ರಿಂದ 28ರ ವರೆಗೆ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲಕ್ಕೆ ಹೋಗಿ ಬರುವ ಭಕ್ತಾಧಿ ಪ್ರಯಾಣಿಕರ ಅನುಕೂಲಕ್ಕಾಗಿ ಯಾದಗಿರಿ ವಿಭಾಗದ ಯಾದಗಿರಿದಿಂದ ಮಧ್ಯಾಹ್ನ 3 ಗಂಟೆಗೆ ಶಹಾಪೂರದಿಂದ ಸಂಜೆ 4 ಗಂಟೆಗೆ ಸುರಪೂರದಿಂದ ಸಂಜೆ 4 ಗಂಟೆಗೆ ಗುರುಮಠಕಲ್‌ದಿಂದ 3 ಗಂಟೆಗೆ ವಿಶೇಷ (ಹೆಚ್ಚುವರಿ) ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಯಾದಗಿರಿ ಜಿಲ್ಲೆಯ, ವಿಭಾಗದ ವ್ಯಾಪ್ತಿಯಲ್ಲಿನ ಶ್ರೀಶೈಲಕ್ಕೆ ಹೋಗಿ ಬರುವ ಭಕ್ತಾಧಿ ಪ್ರಯಾಣಿಕರು ಈ ವಿಶೇಷ ಬಸ್ ಕಾರ್ಯಾಚರಣೆಯ ಸದುಪಯೋಗಪಡೆದುಕೊಳ್ಳಬೇಕು.

ಶ್ರೀಶೈಲಕ್ಕೆ ಹೋಗಿ ಬರುವ ಭಕ್ತಾಧಿ ಪ್ರಯಾಣಿಕರು ತಮ್ಮ ಸಾರಿಗೆ ಸೌಕರ್ಯಕ್ಕಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಘಟಕ ವ್ಯವಸ್ಥಾಪಕರು ಯಾದಗಿರಿ ದೂ.ಸಂ.7760992463, ಘಟಕ ವ್ಯವಸ್ಥಾಪಕರು ಶಹಾಪೂರ ದೂ.ಸಂ.7760992464, ಘಟಕ ವ್ಯವಸ್ಥಾಪಕರು ಸುರಪೂರ ದೂ.ಸಂ.7760992467, ಘಟಕ ವ್ಯವಸ್ಥಾಪಕರು ಗುರುಮಠಕಲ್ ದೂ.ಸಂ.7760992467ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿವಾಜಿ ಮೂರ್ತಿ ಪ್ರತಿಷ್ಠಾನೆಯಿಂದ ಜನರಲ್ಲಿ ಸದ್ಭಾವ, ಸದ್ಭಕ್ತಿ ಮೂಡುತ್ತದೆ

ಮಲ್ಲಮ್ಮ ನುಡಿ ವಾರ್ತೆ



ಹುಮನಾಬಾದ: ಶಿವಾಜಿ ಮಹಾರಾಜರ ಪ್ರಜಾಪಾಲನೆ, ಧರ್ಮರಕ್ಷಣೆ ಮಾದರಿಯಾಗಿದೆ. ಹಿಂದೂ ಸನಾತನ ಧರ್ಮಕ್ಕೆ ಶಿವಾಜಿ ಕೊಡುಗೆ ಅಪಾರವಾದುದಾಗಿದೆ. ಮರಾಠಾ ಜನಾಂಗ ಒಗ್ಗೂಡುವಿಕೆಗೂ ಶಿವಾಜಿ ಪ್ರೇರಣಾದಾಯಿಯಾಗಿದ್ದಾರೆ. ಶಿವಾಜಿಯ ನೈತಿಕತೆ, ಸ್ತ್ರೀ ಗೌರವ, ಸೌಹಾರ್ದತೆ ಬಹಳಷ್ಟಿದೆ ಎಂದು ಶಾಸಕರಾದ ಸಿದ್ದಲಿಂಗಪ್ಪ ಪಾಟೀಲರು ಹೇಳಿದರು. ಅವರು ರಾಜೇಶ್ವರದಲ್ಲಿ ಜರುಗಿದ ಶಿವಾಜಿ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿ ಮಾತನಾಡಿದರು. ಮುಂದುವರೆದು ಸ್ವತಂತ್ರ ಪೂರ್ವದಲ್ಲೂ ಮರಾಠಿಗರ ಸಾಹಸಗಾಥೆ ಬಹಳಷ್ಟಿದೆ. ಶಿವಾಜಿಯವರ ಜೀವನ ಸಂಘರ್ಷದಿಂದ ಕೂಡಿದೆ. ಶಿವಾಜಿಗೆ ತಾಯಿ ಜಿಜಾಮಾತೆಯಿಂದ ವೀರಜ್ಞಾನ ಪ್ರಾಪ್ತವಾಗಿದೆ. ಗುರು ರಾಮದಾಸರಿಂದ ಆತ್ಮಜ್ಞಾನ ಪ್ರಾಪ್ತವಾಗಿದೆ. ಶಿವಾಜಿಯಿಂದ ಪ್ರೇರಣೆಗೊಂಡ ಮರಾಠಾ ಜನಾಂಗದವರು ಈಗಲೂ ಭಾರತದ ಸೈನ್ಯದಲ್ಲಿ ಸಕ್ರಿಯರಾಗಿದ್ದಾರೆ. ಇವರ ದೇಶಕ್ಕಾಗಿನ ಸರ್ವಾರ್ಪಣೆ ಭಾವ ಮೇರುವಾಗಿದೆ. ಶಿವಾಜಿ ಜನಾನುರಾಗಿಯಾಗಿದ್ದ ದೇವಾನುರಾಗಿಯಾಗಿದ್ದ. ಹಾಗಾಗಿಯೇ ಈತನಿಗೆ ದೇವರ ಸ್ಥಾನದಲ್ಲಿಟ್ಟು ಪೂಜಿಸಲಾಗುತ್ತಿದೆ. ಗೌರವಿಸಲಾಗುತ್ತದೆ. ಈತ ತನಾಗಿ ಬದುಕಲಿಲ್ಲ ಪ್ರಜೆಗಾಗಿ ಬದುಕಿದ್ದ. ಭಾರತದಲ್ಲಿ ರಾಮರಾಜ್ಯ ಸ್ಥಾಪಿಸಬೇಕೆಂಬುದು ಆತನ ಕನಸಾಗಿತ್ತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಶಾಸಕರಾದ ಚಂದ್ರಶೇಖರ ಪಾಟೀಲರು ಮಾತನಾಡುತ್ತಾ, ರಾಜೇಶ್ವರದಲ್ಲಿ ಮರಾಠಾ ಜನಾಂಗದ ಮನೆಗಳು ಬರೀ 40 ಇದ್ದರೂ ಅವರು ಸ್ವಾಭಿಮಾನಿಗಳಾಗಿದ್ದಾರೆ. ಸ್ವಾವಲಂಬಿಗಳಾಗಿದ್ದಾರೆ. ಸ್ವಯಂ ಸೇವಕರಾಗಿದ್ದಾರೆ. ಹಾಗಾಗಿಯೇ ಇವರು ಕಾರ್ಯಕ್ರಮಗಳಿಗೆ ರಾಜಕಾರಣಿಗಳ ಹತ್ತಿರ ಚಂದಾಪಟ್ಟಿಗಾಗಿ ಅಲೆದಾಡದೇ ತಾವೇ ಸ್ವತ: ದೇಣಿಗೆಯಿತ್ತು ಕಾರ್ಯಕ್ರಮ ಬೃಹತ್ತಾಗಿ ನಡೆಸುತ್ತಾರೆ. ಇಲ್ಲೀಗ ಭವ್ಯವಾದ ಬೃಹತ್ತಾದ ಶಿವಾಜಿ ಮೂರ್ತಿ ಇವರು ಸ್ಥಾಪಿಸುತ್ತಿರುವುದು ಇವರ ಸ್ವಗೌರವದ ಪ್ರತೀಕವಾಗಿದ್ದು ಆದರ್ಶವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ ಶಾಸಕರಾದ ಮಾರುತಿ ಮೂಳೆ ರವರು ಮಾತನಾಡುತ್ತಾ, ರಾಜೇಶ್ವರ ಐತಿಹಾಸಿಕ ಸ್ಥಳವಾಗಿದೆ. ಇದು ದೊಡ್ಡ ಗ್ರಾಮ ಪಂಚಾಯತ್ ಹೊಂದಿದೆ. ಇಲ್ಲಿ ಪುರಾತನ ರಾಮಲಿಂಗೇಶ್ವರ ದೇವಸ್ಥಾನವಿದೆ. ಚೌಡೇಶ್ವರಿ, ಮಲ್ಲಿಕಾರ್ಜುನ, ಭವಾನಿ, ವಿಠಲರುಕ್ಮಿಣಿ, ಹಿರೋಡೆ ದೇವಸ್ಥಾನಗಳಿವೆ. ಈ ಗ್ರಾಮದ ನಾಲ್ಕು ದಿಕ್ಕುಗಳಿಗೂ ಬಜರಂಗಬಲಿ ದೇವಸ್ಥಾನಗಳಿವೆ. ಇಲ್ಲಿ ಪಾರಂಪರಿಕ ವೈದ್ಯರು ಹಾಗೂ ಜ್ಞಾನಿಗಳು ಬಹಳಷ್ಟು ಆಗಿ ಹೋಗಿದ್ದಾರೆ. ಮಾಣಿಕಪ್ರಭು ಸಂಸ್ಥಾನದ ಕುಟುಂಬದವರುವರು ಇಲ್ಲಿ ಬೀಗಸ್ಥನ ಹೊಂದಿದ್ದಾರೆ. ಹೀಗಾಗಿ ಈ ಊರಲ್ಲಿ ಮಾಣಿಕಪ್ರಭುಗಳ ಅನುಯಾಯಿಗಳು ಬಹಳಷ್ಟು ಜನರಿದ್ದಾರೆ. ಈ ಊರಿನಲ್ಲಿ ಈಗ ಶಿವಾಜಿ ಮೂರ್ತಿ ಪ್ರತಿಷ್ಠಾಪನೆ ಆಗುತ್ತಿರುವುದು ಐತಿಹಾಸಿಕ ವಿಷಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಮರಾಠಾ ಸಮಾಜದ ಮುಖಂಡರಾದ ಪದ್ಮಾಕರ ಪಾಟೀಲರವರು ಮಾತನಾಡುತ್ತಾ, ಮರಾಠಾ ಜನಾಂಗ ಸ್ವಾಭಿಮಾನದ ಪ್ರತೀಕವಾಗಿದೆ. ಇವರ ರಾಷ್ಟ್ರಭಕ್ತಿ ಸಂಸ್ಕೃತಿ ಭಕ್ತಿ ಅಗಾಧವಾದುದಾಗಿದೆ. ಈ ಜನಾಂಗವಿರುವ ಮಹಾರಾಷ್ಟ್ರ ರಾಜ್ಯ ನಮ್ಮ ಈ ಭಾಗಕ್ಕೆ ಹತ್ತಿರದಲ್ಲಿದೆ. ಹಾಗಾಗಿಯೇ ಇಲ್ಲಿನವರಿಗೆ ಮಹಾರಾಷ್ಟ್ರದೊಂದಿಗೆ ಅನ್ಯೋನ್ಯ ಸಂಬಂಧವಿದೆ. ಮಹಾರಾಷ್ಟ್ರದ ತುಳಜಾಪುರದ ಅಂಬಾಭವಾನಿ ಹಾಗೂ ಪಂಡರಪುರದ ವಿಠಲರುಕ್ಮಿಣಿ ಇಲ್ಲಿನವರಿಗೆ ಆರಾಧ್ಯದೇವರಾಗಿದ್ದು, ಈ ದೇವಸ್ಥಾನಗಳಿಗೆ ಪಾದಯಾತ್ರೆ ಕೂಡ ಹೊರಡುತ್ತಾರೆ. ಇಲ್ಲಿನವರು ಉಮರ್ಗಾ, ಲಾತೂರ, ಸೋಲಾಪೂರ, ಪುನಾ, ಮುಂಬೈಗೆ ಉದ್ಯೋಗ, ವ್ಯವಹಾರಕ್ಕಾಗಿ ನಿರಂತರ ಸಂಪರ್ಕ ಹೊಂದಿದ್ದಾರೆ. ಇಲ್ಲಿನವರು ಮಹಾರಾಷ್ಟ್ರದೊಂದಿಗೆ ಕೌಟುಂಬಿಕ ಸಂಬಂಧಗಳು ಕೂಡ ಬಹಳಷ್ಟು ಹೊಂದಿದ್ದಾರೆ. ಮರಾಠಿಗರ ಜೀವನ ಸಾಹಸದಿಂದ ಸಾಧನಾಪಥದಿಂದ ಕೂಡಿದ್ದಾಗಿದೆ. ಈ ಜನಾಂಗ ಇರುವ ಕಡೆ ಸತ್ಕಾರ್ಯಗಳು, ದೇವಕಾರ್ಯಗಳು ಹೆಚ್ಚಿಗೆ ನಡೆಯುತ್ತಿದ್ದುದನ್ನು ನೋಡಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಆಗಮಿಸಿದ ಬಸವಕಲ್ಯಾಣ ತಾಲೂಕಿನ ವಾರಕರಿ ಸಂಘಟನೆಯ ಅಧ್ಯಕ್ಷರಾದ ಬಲಭೀಮ ಪಾಟೀಲರು ಮಾತನಾಡುತ್ತಾ, ರಾಜೇಶ್ವರದ ಮರಾಠಾ ಜನಾಂಗದಿಂದ ಪ್ರತಿಷ್ಠಾಪನೆಯಾಗುತ್ತಿರುವ ಶಿವಾಜಿ ಮೂರ್ತಿಯಿಂದಾಗಿ ಇಲ್ಲಿ ಶಿವಾಜಿ ಬಗ್ಗೆ ಹೆಚ್ಚಿನ ಜ್ಞಾನ ಪ್ರಾಪ್ತವಾಗುತ್ತದೆ. ಅಭಿಮಾನ ಕೂಡ ಮೂಡುತ್ತದೆ. ಶಿವಾಜಿ ಇತಿಹಾಸದಲ್ಲಿ ಶೌರ್ಯ ಸಾಹಸ ಸಂಸ್ಕೃತಿಯ ಪ್ರತೀಕರಾಗಿದ್ದಾರೆ. ಅವರು ಸಂತ ಮಹಾಂತರ ಪೋಷಕರಾಗಿದ್ದಾರೆ. ಶಿವಾಜಿ ಚರಿತ್ರೆ ಆದರ್ಶದಿಂದ ಕೂಡಿದ್ದಾಗಿದೆ. ಅವರ ಚರಿತ್ರೆ ಓದುವುದರಿಂದ ಜಯಂತಿ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಜನರಲ್ಲಿ ಸದ್ಭಾವ, ಸದ್ಭಕ್ತಿ ಮೂಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ನಂದಾಬಾಯಿ ಹೊನ್ನಳ್ಳಿ, ಅನಿತಾ ಮಾಲೆ, ಕೃಷ್ಣಾ ಮೋಹಿತೆ, ಶ್ರಾವಣಕುಮಾರ ಮಾನೆ, ಭಾಸ್ಕರ್ ಕೋಕಾಟೆ, ಸತೀಶ ಪಾಟೀಲ, ವೆಂಕಟೇಶ ರಘೋಜಿ, ನಂದಕುಮಾರ ರಘೋಜಿ ಮತ್ತೀತರರಿದ್ದರು.

# ಕರಪತ್ರ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.22–ದಲಿತಚಳುವಳಿಯ ಹಾದಿಯಲ್ಲಿ ಲಕ್ಷ್ಮೀ ನಾರಾಯಣ ನಾಗವಾರರ ಹೆಜ್ಜೆ ಗುರುತುಗಳು ನುಡಿ ನಮನ ಕಾರ್ಯಕ್ರಮ ಫೆ.26 ರಂದು ವಿಜಯಪುರ ನಗರದ ಸ್ಟೇಷನ್ ರಸ್ತೆಯಲ್ಲಿರುವ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ನಡೆಯಲಿದ್ದು, ಈ ಕಾರ್ಯಕ್ರಮದ ಕರಪತ್ರವನ್ನು ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮೂಡರವರು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಲಕ್ಷ್ಮಿ ನಾರಾಯಣ ನಾಗವಾರ ಬಣದ ಕಲಬುರಗಿ ಜಿಲ್ಲಾ ಸಂಚಾಲಕ ಬಸವರಾಜ ಟಿ. ಬಾಡಿಯಾಲ, ಜಿಲ್ಲಾ ಸಂಘಟನಾ ಸಂಚಾಲಕರಾದ, ಮಲ್ಲಿಕಾರ್ಜುನ ಕೊಪ್ಪುರ, ಮಂಜುನಾಥ ಲೇಂಗಟಿ, ಅಮರನಾಥ್ ನಿಪ್ಪಾಣಿ, ಶಿವಯೋಗಿ ಇನಾಮದಾರ, ಬಸವರಾಜ ನಾಟೀಕರ, ಷಣ್ಮುಖ ತೇಲ್ಲೂರ, ಸುರೇಶ್ ಅವರಾದ, ಸೈಬಣಾ ಪಾಳಾ, ಕಬೀರ್ ದಾಸ್ ಹರಸೂರಕರ, ಬಸವರಾಜ ಆರ್ಯ ನಗರ ಉಪಸ್ಥಿತರಿದ್ದರು.

## ದಿ-ಗೋಲ್ಡನ್ ವ್ಯಾಲಿ ಶಾಲೆಯಲ್ಲಿ ವಿಜ್ಞಾನ ಮೇಳ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.22:ಪಟ್ಟಣದ ದಿ-ಗೋಲ್ಡನ್ ವ್ಯಾಲಿ ಇಂಟರ್‌ನ್ಯಾಷನಲ್ ಪಬ್ಲಿಕ ಶಾಲೆಯಲ್ಲಿ ನಡೆದ ವಿಜ್ಞಾನ ಮೇಳ ಕಾರ್ಯಕ್ರಮದಲ್ಲಿ ಮಕ್ಕಳು ತಮ್ಮ ಜ್ಞಾನದ ಪ್ರದರ್ಶನ ನೀಡಿದರು.

ಮುಖ್ಯ ಅತಿಥಿ ರಾಜೇಂದ್ರ ಮಾಳಿ, ಔರಾದ ತಾ.ಪಂ. ಮುಖ್ಯ ತರಬೇತಿದಾರರು.

ಮಾತನಾಡಿ,ಚಿಕ್ಕವಯಸ್ಸಿನಲ್ಲಿಯೇ ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆಗಳನ್ನು ಮೂಡಿಸಲು ಈ ಮೇಳಗಳು ಬಿರಾದಾರ ಸಭೆಯ ಸಹಾಯಕಾರಿಯಾಗಿವೆ ಎಂದು ಹೇಳಿದರು.

ಶಾಲೆಯ ಅಧ್ಯಕ್ಷೆ ಜಯಶ್ರೀ ಬಿರಾದಾರ ಅಧ್ಯಕ್ಷತೆ ವಹಿಸಿ ಮಾತನಾಡಿದರು,

300ಕ್ಕೂಹೆಚ್ಚಿನ ವಿದ್ಯಾರ್ಥಿಗಳು ಪಾಲ್ಗೊಂಡು ವಿವಿಧ ವಸ್ತುಗಳ ಪ್ರದರ್ಶನ ನೀಡಿದರು. 1ನೇ ತರಗತಿಯಿಂದ10ನೇತರಗತಿವರೆಗಿನ ವಿದ್ಯಾರ್ಥಿಗಳು ವಿನೂತನ ಪ್ರಯೋಗಗಳಾದ ರೋಬೋಟ್ ತಯಾರಿಕೆ,ಪರಿಸರ-ಸಂರಕ್ಷಣೆ, ಸೌರಶಕ್ತಿ, ರಾಮ ಮಂದಿರ, ಗಾಳಿ ಯಂತ್ರಗಳು ಹಾಗೂ ದಿನ ನಿತ್ಯದ ಜೀವನದಲ್ಲಿ ತಂತ್ರಜ್ಞಾನ ಬಳಕೆಯ ಬಗ್ಗೆ ಮಾದರಿಗಳನ್ನು ತಯಾರಿಸಿ ತಮ್ಮ ಕ್ರಿಯಾಯೋಜನೆ ತೋರಿಸಿದ್ದಾರೆ ಎಂದು ಹೇಳಿದರು.

ಲಿಂಗಾನಂದ ಮಹಾಜನ, ಎಸ್. ಎನ. ಶಿವಣಕರ ಮಾತನಾಡಿದರು.ಮುಖ್ಯಗುರು ಶರಣು ಸೋಲ್ಲಾಪೂರೆ, ಶಿಕ್ಷಕರಾದ ಜಯಕುಮಾರ ಎಸ್, ನೀಲಕಂಠ ಮೇತ್ರೆ, ಶ್ರೀರಾಜ ಎನ್. ಹಣಮಂತ ಎಸ್,ಸಂಜುಕುಮಾರ ಮಾನೆ, ಬಸವಾಂಬಿಕಾ ಚಿಮ್ಮಾ, ವಿಜಯಲಕ್ಷ್ಮಿ ಎಸ್,ಆಶಾರಾಣಿ, ಲೊಕೇಶ, ಪೂಜಾ, ಶ್ವೇತಾ, ಜ್ಯೋತಿ, ಜರಿನಾ, ಸಫಿಯಾ, ಅನಿತಾ, ಪಿಂಕಿ ಮತ್ತು ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು.

## ಕೊಪ್ಪಳ ಗವಿಮಠಕ್ಕೆ ಮೇಘಾಲಯ ರಾಜ್ಯಪಾಲರ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.22:ಕೊಪ್ಪಳಜಿಲ್ಲೆಯ ಸುಪ್ರಸಿದ್ಧ ಶ್ರೀ ಗವಿಸಿದ್ದೇಶ್ವರ ಮಠಕ್ಕೆ ಮೇಘಾಲಯ ರಾಜ್ಯದ ಗೌರವಾನ್ವಿತ ರಾಜ್ಯಪಾಲರಾದ ಚಂದ್ರಶೇಖರ ಹೆಚ್. ವಿಜಯಶಂಕರ ಅವರು ಶನಿವಾರ ಭೇಟಿ ನೀಡಿ, ಶ್ರೀ ಗವಿ ಮಠದ ಗದ್ದುಗೆಯ ದರ್ಶನ ಪಡೆದು, ಅಭಿನವ ಗವಿಶ್ರೀಗಳ ಆಶೀರ್ವಾದ ಪಡೆದು, ನಂತರ ಪ್ರಸಾದವನ್ನು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಮಾಜಿ ಸಂಸದ ಶಿವರಾಮೆಗೌಡ, ಮಾಜಿ ಶಾಸಕ ಬಸವರಾಜ ದಢೇಸೂಗೂರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಪರಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೊಪ್ಪಳ ತಹಶೀಲ್ದಾರ ವಿಠ್ಠಲ್ ಚೌಗಲಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಶಿವಕುಮಾರ ಕೆರೂರೆ ವಕೀಲರಿಗೆ ಧರಿಸಿರಿ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.22:ಉರಿಲಿಂಗಪೆದ್ದಿ ಸಾಹಿತ್ಯ ಸಂಸ್ಕೃತಿಕ ವೇದಿಕೆ ಬೇಲೂರು ವತಿಯಿಂದ. ಉರಿಲಿಂಗ ಪೆದ್ದಿ ಉತ್ಸವ ಮತ್ತು ಪೂಜ್ಯಶ್ರೀ ಲಿ.ಶಿವಲಿಂಗೇಶ್ವರ ಶಿವಯೋಗಿಗಳ 56 ಪುಣ್ಯ ಸ್ಮರಣಾರ್ಥವಾಗಿ ದಿನಾಂಕ 22-2-2025ರಂದು ಬೇಲೂರಿನಲ್ಲಿ ನಡೆದ ಪ್ರಥಮ ಸರ್ವೋದಯ ಸಾಹಿತ್ಯ ಸಮ್ಮೇಳನದಲ್ಲಿ ಭಾಲ್ಕಿಯ ಹೆಸರಾಂತ ವಕೀಲರಾದ ಶಿವಕುಮಾರ ಕೆರೂರೆ (ಕೆ. ಕೆ)ವಕೀಲರು ತಮ್ಮ ವೃತ್ತಿಯನ್ನು ಮಾಡುತ್ತ



ಬೀದರ ಜಿಲ್ಲೆಯದ್ಯಾದಂತ ಸಮಾಜದಲ್ಲಿ ಅನ್ಯಾಯಕ್ಕೆ ಒಳಗಾದ ಶೋಷಿತರಿಗೆ, ಬಡವರಿಗೆ ನ್ಯಾಯವನ್ನು ಒದಗಿಸಿಕೊಡುವ ಪ್ರಾಮಾಣಿಕ ಪ್ರಯತ್ನಮಾಡುತ್ತಿರುವ ಪ್ರಯುಕ್ತ ಮತ್ತು ಉತ್ತಮವಾಗಿ ಸಮಾಜ ಸೇವೆ ಮಾಡಿರುವುದರಿಂದ ಇವರ ಈ ಉತ್ತಮ ಸಾಮಾಜಿಕ ಸೇವೆಯನ್ನು ಪರಿಗಣಿಸಿ ಧರಿಸಿರಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಭಾಲ್ಕಿ ತಾಲೂಕಿನ ವಕೀಲರ ಸಂಘದ ಅಧ್ಯಕ್ಷರಾದ ಸಿದ್ದು ಪಾಟೀಲ್, ಪ್ರಧಾನ ಕಾರ್ಯದರ್ಶಿಗಳಾದ ಎಚ್. ಪ್ರಭಾಕರ, ಇತರೆ ಪದಾಧಿಕಾರಿಗಳು ಮತ್ತು ಸಂಘದ ಸರ್ವ ಸದಸ್ಯರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿರುತ್ತಾರೆ.

## ಇಂದು ಗೋಲ್ಡನ್ ಸ್ಕಾಲರಶಿಪ್ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.22: ಪಟ್ಟಣದ ಅಂಬೇಡ್ಕರ ವೃತ್ತ ಸಮೀಪದ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ (ರಿ) ಭಾಲ್ಕಿ ಅಡಿಯಲ್ಲಿ ನಡೆಯುತ್ತಿರುವ ಸಂಗಮೇಶ್ವರ ಪಿ.ಯು. ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ಭಾನುವಾರ ಗೋಲ್ಡನ್ ಸ್ಕಾಲರಶಿಪ್ ಪರೀಕ್ಷೆ ಜರುಗಲಿದೆ. ಬೆಳಿಗ್ಗೆ 9 ಗಂಟೆಯಿಂದ ಪರೀ-ಕ್ಷೆ ಪ್ರಾರಂಭಗೊಳ್ಳಲಿದ್ದು, ಅತಿಹೆಚ್ಚು ಅಂಕ ಪಡೆಯುವ 20 ವಿದ್ಯಾರ್ಥಿಗಳಿಗೆ ಉಚಿತ ಎರಡು ವರ್ಷ ಪಿಯುಸಿ ಶಿಕ್ಷಣ ಜತೆಗೆ ನೀಟ್, ಜೆಇಇ, ಕೆಸೆಟ್



ಪರೀಕ್ಷೆತರಬೇತಿ ನೀಡಲಾಗುತ್ತದೆ. ಜತೆಗೆ ಪರೀಕ್ಷೆಯಲ್ಲಿ ಹಾಜರಾದ ಮಕ್ಕಳಿಗೆ ಕಾಲೇಜು ಶುಲ್ಕದಲ್ಲಿ ರಿಯಾಯತಿ ನೀಡಲಾಗುತ್ತದೆ.

ಇದು ವರೆಗೂ ಈ ಕಾಲೇಜಿನಲ್ಲಿ ಕಲಿತ 10ಕ್ಕೂ ಅಧಿಕ ವಿದ್ಯಾರ್ಥಿಗಳು ಎಂಬಿಬಿಎಸ್ ಮತ್ತು ಎಂಜನಿಯರಿಂಗ್ ಸೀಟು ಪಡೆದು ಕೊಂಡಿ-ದ್ದಾರೆ. ಅತಿ ಕಡಿಮೆ ಶುಲ್ಕದಲ್ಲಿ ಗುರುಕುಲ ಮಾದರಿ ಶಿಕ್ಷಣ ಸೌಲಭ್ಯ ಕಲ್ಪಿಸಲಾಗುತ್ತದೆ. ಸುಸಜ್ಜಿತ ಕಟ್ಟಡ ಮತ್ತು ಅನುಭವಿ ಉಪನ್ಯಾಸಕ ಬಳಗ ಹೊಂದಿದೆ. ವಿಶೇಷವಾಗಿ ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುವ ಮಾಡುವ ವಿದ್ಯಾರ್ಥಿಗಳಿಗೆ ಹಿರೇಮಠ ಸಂಸ್ಥಾನದ ಪ್ರಸಾದ ನಿಲಯದಲ್ಲಿ ಉಚಿತ ಪ್ರವೇಶ ನೀಡಲಾಗುವುದು. ಪಾಲಕರು, ವಿದ್ಯಾರ್ಥಿಗಳು ಸದುಪಯೋಗ ಪಡೆದು ಕೊಳ್ಳಬೇಕು ಎಂದು ಆಡಳಿತಾಧಿಕಾರಿ ಮೋಹನರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆಯಿಂದ ಭಾತಂಬ್ರಾದಲ್ಲಿ ನಮ್ಮೂರ ಹಬ್ಬ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.22: ತಾಲೂಕಿನ ಭಾತಂಬ್ರಾಗ್ರಾಮದಲ್ಲಿ ಜಗದ್ಗುರು ಸಂಸ್ಥಾನ ಮಠ ಭಾತಂಬ್ರಾ ವತಿಯಿಂದ ಇದೇ ಸೋಮವಾರ ದಿಂದ ಬುಧವಾರದ ವರೆಗೆ ಹಾನಗಲ್ ಗುರುಕುಮಾರ ಮಹಾಶಿವಯೋಗಿಗಳ 95ನೆಯ ಪುಣ್ಯಸ್ಮರಣೆ ಮತ್ತು ನಮ್ಮೂರ ಹಬ್ಬ-2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಭಾತಂಬ್ರಾ ಜಗದ್ಗುರು ಸಂಸ್ಥಾನ ಮಠದ ಪೀಠಾಧಿಪತಿ ಶಿವಯೋಗೀಶ್ವರ ಮಹಾಸ್ವಾಮೀಜಿ ತಿಳಿಸಿದ್ದಾರೆ.

ಗ್ರಾಮದ ನಿರಂಜನ ಸಂಸ್ಥಾನ ಮಠದ ಸಭಾಂಗಣದಲ್ಲಿ ಸೋಮವಾರ ಸಾಯಂಕಾಲ 6 ಗಂಟೆಗೆ ಪ್ರವಚನ ಮಂಗಲ ಉದ್ಘಾಟನೆ ಸಮಾರಂಭ ಜರುಗಲಿದೆ.

ಮದ್ದರಕ್ಕಿಹಿರೇಮಠಶೀಲವಂತೇಶ್ವರ ಶಿವಾಚಾರ್ಯ, ಗೋರ್ಟಾ ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ನೇತೃತ್ವ ವಹಿಸಲಿದ್ದಾರೆ.ದೇವರಗುಡ್ಡ ಹತ್ತಿ ಗುಡೂರ ತಪೋವನ ಮಠದ ಗಿರಿಮಲ್ಲೇಶ್ವರ ಶಿವಾಚಾರ್ಯ, ಕೃಷ್ಣಾಪುರ ಹಿರೇಮಠದ ಡಾ.ಗುರುಬಸವ ದೇವರು ದಿವ್ಯ ಸಮ್ಮುಖ ವಹಿಸಲಿದ್ದಾರೆ.

ಸಂಸದ ಸಾಗರ ಖಂಡ್ರೆ ಸಮಾರಂಭ ಉದ್ಘಾಟಿಸಲಿದ್ದಾರೆ. ನಾರಂಜಾ ಸಹಕಾರಿ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಅಧ್ಯಕ್ಷತೆ ವಹಿಸುವರು.

ಜಗನ್ನಾಥ ಮಜಗೆ,ಬಸವರಾಜ ಬುಳ್ಳಾ, ಶಶಿಧರ ಕೋಸಂಬೆ, ಚನ್ನಬಸವಣ್ಣ ಬಳತೆ,ಮಡಿವಾಳಪ್ಪ ಮಂಗಲಗಿ, ಕಪಿಲ ಕಲ್ಯಾಣೆ, ಶಿವಕುಮಾರ ಕಲ್ಯಾಣೆ, ವಿಲಾಸ ಕನಸೆ, ಶಶಿಕಲಾ ಅಶೋಕ, ವಿಜಯಕುಮಾರ ರಾಜಭವನ, ದತ್ತುಕುಮಾರ ಹೊನ್ನಾ, ದಿಲೀಪಕುಮಾರ ಸುಂಟೆ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ.

ಮಂಗಳವಾರ ಬೆಳಿಗ್ಗೆ 10.30ಗಂಟೆಗೆ ಜಗದ್ಗುರುಗಳ 80ನೆಯ ಹುಟ್ಟುಹಬ್ಬದ ನಿಮಿತ್ತ ಅವರ ಬದುಕು ಬರಹ ಕುರಿತು



ಚಿಂತನ ಗೋಷ್ಠಿ ನಡೆಯಲಿದೆ.

ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಹಲಬರ್ಗಾ ರಾಚೋಟೇಶ್ವರ ಮಠದ ಹಾವಗಿಲಿಂಗೇಶ್ವರ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸುವರು.

ಸಾಹಿತಿ ಡಾ.ಆರ್.ಬಿ.ಚಿಲುಮಿ ಗೋಷ್ಠಿ ಉದ್ಘಾಟಿಸಲಿದ್ದಾರೆ. ಹಿರಿಯ ಸಾಹಿತಿ ಡಾ.ವೈಜಿನಾಥ ಭಂಡೆ ಅಧ್ಯಕ್ಷತೆ ವಹಿಸುವರು. ಹಿರಿಯ ಸಾಹಿತಿ ಡಾ.ಸೋಮನಾಥ ನುಚ್ಚಾ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 1ಗಂಟೆಗೆ ಬೀದರ್ ಜಿಲ್ಲೆಯ ವಚನಕಾರರಿಂದ ಶ್ರೀಗಳ ಆಧುನಿಕ ವಚನ ಗೋಷ್ಠಿ ನಡೆಯಲಿದೆ.

ಹಿರಿಯ ಸಾಹಿತಿ ಡಾ.ಎಂ.ಜಿ.ದೇಶಪಾಂಡೆ ಅಧ್ಯಕ್ಷತೆ ವಹಿಸುವರು. ಸಾಹಿತಿ ಹಂಸಕವಿ ಆಶಯ ನುಡಿ ನುಡಿಯಲಿದ್ದಾರೆ.

ಹಿರಿಯ ಸಾಹಿತಿ ವೀರಶೆಟ್ಟಿ ಬಾವುಗೆ ಮುಖ್ಯ ಅತಿಥಿಗಳಾಗಿ ಭಾಗಿಯಾಗಲಿದ್ದಾರೆ.

ಸಾಯಂಕಾಲ 6ಕ್ಕೆ ಹಾನಗಲ್ ಗುರಕುಮಾರ ಶಿವಯೋಗಿಗಳ 95ನೆಯ ಪುಣ್ಯಸ್ಮರಣೆ ಕಾರ್ಯಕ್ರಮ ನೆರವೇರಲಿದೆ. ಜಯಶಾಂತಲಿಂಗ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಅಕ್ಕ ಗಂಗಾಂಬಿಕೆ ನೇತೃತ್ವ ವಹಿಸುವರು.ಹವಾ ಮಲ್ಲಿನಾಥ ಮಹಾರಾಜರು ಸಮ್ಮುಖ ವಹಿಸಲಿದ್ದಾರೆ.ದ್ವಿರೇಫಗುಂಜನ ಗ್ರಂಥ ಬಿಡುಗಡೆ ಆಗಲಿದೆ. ಮಾಜಿ ಸಚಿವ ಪ್ರಭು ಚವ್ಹಾಣ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಅಧ್ಯಕ್ಷತೆ ವಹಿಸಲಿದ್ದಾರೆ. ಗೌರಮ್ಮ ಸಿದ್ದಾರೆಡ್ಡಿ, ಶಾಸಕರಾದ ಶರಣು ಸಲಗರ, ಡಾ.ಸಿದ್ದು ಪಾಟೀಲ್, ಶೈಲೇಂದ್ರ ಬೆಲ್ದಾಳೆ, ಮಾಣಿಕಪ್ಪ ಗೋರನಾಳ್ಳೆ, ರಾಜಶೇಖರ ಅಷ್ಟೂರೆ, ಯಾದವರಾವ ಕನಸೆ, ಚಿನ್ನಮ್ಮ ಬಾವುಗೆ, ಶಿವು ಲೋಖಂಡೆ, ಶಿವಕುಮಾರ, ಸಂಗಮೇಶ ಗಾಮಾ, ಸಂಜೀವಕುಮಾರ, ಶಿವಕುಮಾರ ಲದ್ದೆ, ರೋಹಿದಾಸ ಮಾನೆ, ಕಿರಣಕುಮಾರ ಭಾಗವಹಿಸಲಿದ್ದಾರೆ.

ಜತೆಗೆ ಕಳೆದ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುತ್ತದೆ.ಬುಧವಾರ ಬೆಳಿಗ್ಗೆ 10ಗಂಟೆಗೆ ಮಹಾಶಿವರಾತ್ರಿ ನಿಮಿತ್ತ ಇಷ್ಟಲಿಂಗ ಪೂಜೆ ಕಾರ್ಯಕ್ರಮ ನಡೆಯಲಿದೆ.

ಪಲ್ಲಕ್ಕಿಮೆರವಣಿಗೆ,ಹಾನಗಲ್ ಗುರುಕುಮಾರೇಶ್ವರ ರಥೋತ್ಸವ ಮತ್ತು ಸಾಯಂಕಾಲ 6 ಗಂಟೆಗೆ ಸಮಾರೋಪ, ಗುರುವಂದನೆ ಕಾರ್ಯಕ್ರಮದೊಂದಿಗೆ ಅಧಿಕೃತವಾಗಿ ಮೂರು ದಿನದ ಎಲ್ಲ ಕಾರ್ಯಕ್ರಮಗಳಿಗೆ ತೆರೆ ಬೀಳಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ ವಿಚಾರ ಗೋಷ್ಠಿ ಶಾಸಕ ಮಾನಪ್ಪ ಡಿ ವಜ್ಜಲರಿಂದ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು :ಫೆ.22: ತಾಲ್ಲೂಕಿನ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ. ಸಿ. ಟ್ರಸ್ಟ್ ಹಾಗೂ ಜ್ಞಾನ ವಿಕಾಸ ಸಂಸ್ಥೆ. ಸಹಯೋಗದಲ್ಲಿ ತಾಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಯನ್ನು. ರೇಡ್ಡೆರ ಪತ್ತಿನ ಸಹಕಾರಿ ಬ್ಯಾಂಕನ ಶ್ರೀ ಹೇಮರೆಡ್ಡಿ ಮಲ್ಲಮ್ಮ ಸಭಾಂಗಣದಲ್ಲಿ ಲಿಂಗಸೂಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ ವಜ್ಜಲ ಜ್ಯೋತಿ ಬೆಳಗಿಸುವದರ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಮಹಿಳೆಯರು ಸಂಘಟಿತರಾಗಿ ಕೌಶಲಾಭಿವೃದ್ಧಿ ಬೆಳೆಸಿಕೊಳ್ಳುವ ಮೂಲಕ ಜ್ಞಾನವಂತರಾಗಬೇಕು. ಮಹಿಳೆಯರು ಹುಟ್ಟಿದ ಮತ್ತು ಮೆಟ್ಟಿದ ಎರಡು ಮನೆಗಳನ್ನು ಬೆಳಗುವ ನಂದಾದೀಪವಿದ್ದಂತೆ. ಮಹಿಳೆಯರು ಎಲ್ಲಾರಂಗದಲ್ಲೂ ಸಾಧನೆ ಮಾಡಬೇಕು ಎಂದು ಹೇಳಿದರು

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕರಾದ ಮೋಹನ ನಾಯಕ ಜಿಲ್ಲಾ ಜನ ಜಾಗೃತಿ ವೇದಿಕೆ ಅಧ್ಯಕ್ಷ ರಾದ ಡಾ ಶಶಿಕಲಾ ಭೋವಿ ಅಯ್ಯಪ್ಪ ಮಾಳೂರು,ಗೋವಿಂದನಾಯಕ, ಮಹಮ್ಮದ್ ರಫೀ, ಗಿರಿ ಮಲ್ಲನ ಗೌಡ, ಹುಲ್ಲೇಶ ಸಾಹುಕಾರ, ಮುದುಕಪ್ಪನಾಯಕ. ನಾಗರತ್ನ ಗುತ್ತೆದಾರ ಶ್ರೀ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ತಾಲೂಕಿನ ಎಲ್ಲಾ ಸಿಬ್ಬಂದಿ ವರ್ಗದವರು ಸ್ವಸಹಾಯ ಸಂಘದ ಮಹಿಳೆಯರು ಉಪಸ್ಥಿತರಿದ್ದರು.

## ಶಿಕ್ಷಣದಿಂದ ಮಾತ್ರ ಎಲ್ಲಾ ಕ್ಷೇತ್ರಗಳಲ್ಲಿ ಬದಲಾವಣೆ ಸಾಧ್ಯ :ಶಾಸಕ ತುನ್ನೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಫೆ.22: ಪ್ರಸಕ್ತ ದಿನಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ,ಕಾರಣ ಗ್ರಾಮೀಣ ಭಾಗದ ಜನರು ತಮ್ಮ ಮಕ್ಕಳಿಗೆ ತಪ್ಪದೇ ಗುಣಮಟ್ಟದ ಶಿಕ್ಷಣ ಒದಗಿಸಿ, ಅದರಿಂದ ಮಾತ್ರ ಅವರು ಮುಂದೆ ಗುರಿ ತಲುಪಿ, ಎಲ್ಲಾ ಕ್ಷೇತ್ರಗಳಲ್ಲಿ ಬದಲಾವಣೆ ಕಾಣಲೂ ಸಾಧ್ಯ ಎಂದು ಯಾದಗಿರಿ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು.

ಜಿಲ್ಲೆಯ ಹುಣಸಗಿ ತಾಲ್ಲೂಕಿನ ಮುದನೂರ (ಕೆ) ಗ್ರಾಮದ ಶ್ರೀ ದೇವರ ದಾಸಿಮಯ್ಯ ಶಿಕ್ಷಣ ಸಂಸ್ಥೆಯ ಹಮ್ಮಿಕೊಂಡಿದ್ದ ಬೆಳ್ಳಿಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಯನ್ನು ನಡೆಸುವುದು ಒಂದು ಸವಾಲಿನ ಕೆಲಸ, ಉನ್ನತ ಸಂಸ್ಕಾರ ಮನೆತನದಲ್ಲಿ ಜನಿಸಿದ ಶಾಂತರಡ್ಡಿ ಚೌದ್ರಿ ಅವರು, ಇಂಜಿನಿಯರ್ ಪದವಿದರರು, ಬೇರೆ ಕಡೆ ಅವರಿಗೆ ಕೆಲಸ ಮಾಡಲು ಲಕ್ಷಾಂತರ ರೂ. ಹಣ ವೇತನ ಸಿಗುತ್ತಿತ್ತು, ಆದರೆ ಅವರು ಶೈಕ್ಷಣಿಕ ಹಿಂದುಳಿದರುವ ತಮ್ಮ ಭಾಗದಲ್ಲಿ ಕನ್ನಡದ ಆದ್ಯ ವಚನಕಾರ ದೇವರ



ದಾಸಿಮಯ್ಯ ಅವರ ಹುಟ್ಟೂರು ಸಹ ಇದೆ ಗ್ರಾಮವಾಗಿದೆ,ಅವರ ಹೆಸರಿನಲ್ಲಿ 1995ರಲ್ಲಿ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿ,ಕನ್ನಡ ಮಾಧ್ಯಮದಲ್ಲಿ ಹೈಸ್ಕೂಲ್ ವರೆಗೆ 400 ವಿದ್ಯಾರ್ಥಿಗಳಿಗೆ ವಿಧ್ಯಾದಾನ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಜಿ.ಪಂ ಮಾಜಿ ಸದಸ್ಯ ಹೆಚ್.ಸಿ ಪಾಟೀಲ್ ರಾಜನಕೋಳೂರ ಮಾತನಾಡಿ, ಯಾವುದೇ ವ್ಯಕ್ತಿ ಸಾಧನೆಮಾಡಬೇಕಾದರೆ ಮೊದಲು ಆಸಕ್ತಿ, ಶ್ರದ್ಧೆ, ಛಲ, ನಿರಂತರ ಪರಿಶ್ರಮ ಹೊಂದಿರಬೇಕು, ಆ ದಿಶೆಯಲ್ಲಿ ಚೌದ್ರಿಯವರು ಅನೇಕ ಕಷ್ಟಗಳ ಮಧ್ಯೆ 15 ಕೋಣೆಗಳ ಸುಸಜ್ಜಿತ ಶಾಲಾ ಕಟ್ಟಡವನ್ನು ನಿರ್ಮಾಣ ಮಾಡಿ, ಹಲವಾರು ವಿಧ್ಯಾವಂತರಿಗೆ ಶಿಕ್ಷಕ ಪವಿತ್ರ ಕೆಲಸ ನೀಡುವ ಜೊತೆಗೆ ಸಾಕ್ಷರತೆ ಪ್ರಮಾಣ ಹೆಚ್ಚಿಸಲು ಪ್ರಯತ್ನಿಸುತ್ತಿದ್ದಾರೆ, ಇಲ್ಲಿ ಅಭ್ಯಾಸ ಮಾಡಿದ ವಿದ್ಯಾರ್ಥಿಗಳು ಹಲವಾರು ಕ್ಷೇತ್ರಗಳಲ್ಲಿ ಗುರಿ ತಲುಪಿ ಶಾಲೆಗೆ ತರಲೀ ಎಂದು ತಿಳಿಸಿದರು.

ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶಾಂತರಡ್ಡಿ ಚೌದ್ರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ನಾನು ಬದುಕಿನಲ್ಲಿ ಕಷ್ಟಗಳೇ ಬದುಕಿನ ಜೀವಂತ ಲಕ್ಷಣಗಳು ಎಂದು ಅರಿತು ಎಲ್ಲರ ಸಹಕಾರದಿಂದ ಈ ಭಾಗದಲ್ಲಿ ಶೈಕ್ಷಣಿಕ ಬದಲಾವಣೆಗೆ ನಿರಂತರ ಕೆಲಸ ಮಾಡುತ್ತಿದ್ದೇನೆ, ಇದರಿಂದ ನನಗೆ ಆತ್ಮತೃಪ್ತಿ ಇದೆ, ನನ್ನ ಬದುಕಿನ ಇನ್ನೊಂದು ಮಹತ್ವದ ಕೆಲಸ ದೇವರ ದಾಸಿಮಯ್ಯ ಕ್ಷೇತ್ರವನ್ನು ಪ್ರವಾಸೋಧ್ಯಮ ಕ್ಷೇತ್ರವನ್ನಾಗಿ ಅಭಿವೃದ್ಧಿಯಾಗಿ ನೋಡುವುದೇ ನನ್ನ ಕನಸಾಗಿದೆ, ಜನಪ್ರತಿನಿಧಿಗಳು, ಜಿಲ್ಲಾಡಳಿತ ವಿಶೇಷ ಕಾಳಜಿ ವಹಿಸಿ, ಕೆಲಸ ಮಾಡಿದಾಗ ಮಾತ್ರ ನಮ್ಮ ಗ್ರಾಮ ರಾಜ್ಯದ ಗಮನ ಸೆಳೆಯುತ್ತದೆ ಎಂದು ಭಾವುಕರಾಗಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿದ ದೇವಾಪೂರದ ಜಡಿ ಶಾಂತಲಿಂಗೇಶ್ವರ ಮಠದ ಪೀಠಾಧಿಪತಿ ಶಿವಮೂರ್ತಿ ಶಿವಾಚಾರ್ಯರು ಆಶೀರ್ವಚನ ನೀಡಿ, ನಾವೂ ಇಂದು ಅನೇಕ ಸಂಘ-ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಕೆಲವರು ಆರಂಭಿಸಿ ಸರ್ಕಾರದಿಂದ ಹಾಗೂ ಖಾಸಗಿ ಸಾಕಷ್ಟು ಹಣ ಸಂಪಾದಿಸಿರುವುದನ್ನು ಕಂಡಿದ್ದೇವೆ, ಆದರೆ ಇಲ್ಲಿ ಚೌದ್ರಿಯವರು ತಮ್ಮ ಸ್ವ-ಂತ 15 ಎಕರೆ ಜಮೀನನ್ನು ಮಾರಾಟ ಮಾಡಿ ಉತ್ತಮ ಶಾಲೆ ನಿರ್ಮಾಣ ಮಾಡಿ,ಎಲ್ಲಾ ವರ್ಗದ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಮೂಡಿಸಿ, ಶಿಕ್ಷಣ ಒದಗಿಸುತ್ತಿರುವ ಕಾರ್ಯ ನಾವೂ ರಾಜ್ಯದಲ್ಲಿ ಬೇರೆಲ್ಲೂ ಕಾಣಲೂ ಸಾಧ್ಯವಿಲ್ಲ ಎಂದು ನುಡಿದರು.

ಕಾರ್ಯಕ್ರಮದಲ್ಲಿ ರಜತ ಮಹೋತ್ಸವದ ಜ್ಞಾನಸಿರಿಯ ತವನಿಧಿ ಸ್ಮರಣ ಸಂಚಿಕೆ-2025 ಬಿಡುಗಡೆ ಮಾಡಲಾಯಿತು.

ವೇದಿಕೆ ಮೇಲೆ ಕೋರಿ ಸಿದ್ದೇಶ್ವರ ಕಂಠಿ ಮಠದ ಸಿದ್ಧ ಚನ್ನಮಲ್ಲಿಕಾರ್ಜುನ ಸ್ವಾಮಿಜಿ, ಕೂಡ್ಲಿಗಿಯ ಬಾಬಾ ಮಠದ ಮೃತ್ಯುಂಜಯ, ಕೆಂಭಾವಿ ಹಿರೇಮಠದ ಚನ್ನಬಸವ ಸ್ವಾಮಿಜಿ,ಸಣ್ಣಕೆಪ್ಪಬಂಡೆಪ್ಪನಳ್ಳಿ, ಬಸಯ್ಯ ಸೋಮಶೇಖರ ಮಠ ಯಾಳಗಿ, ಗಿರಿಧರ ರಾಜ್ಯ ಶಿವಾಚಾರ್ಯ ಹಿರೇಮಠ ಮುದನೂರ, ಬಬ್ಲುಗೌಡ, ಸುರೇಶ ಸಜ್ಜನ್, ವಿಶ್ವನಾಥರಡ್ಡಿ ದರ್ಶನಾಪೂರ, ರಾಜಾ ಮುಕುಂದ ನಾಯಕ, ಪ್ರಕಾಶ ಅಂಗಡಿ, ರವೀಂದ್ರ ಕೊಡೆಕಲ್, ವಿರೇಶ ನಿಷ್ಠಿ, ಜಯಲಲೀತಾ ಪಾಟೀಲ್, ಹಿರಿಯ ಪತ್ರಕರ್ತರಾದ ಮಲ್ಲಿಕಾರ್ಜುನರಡ್ಡಿ ಹತ್ತಿಕುಣಿ, ಡಿ.ಸಿ ಪಾಟೀಲ್ ಕೆಂಭಾವಿ, ಕೃಷ್ಣಾರಡ್ಡಿ,ಮುಖ್ಯಗುರುಗಳಾದ ಮಹೇಶ ತಾತರಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೇವುಜಾದವ ನಿರೂಪಿಸಿದರೆ, ರಮೇಶ ಹೂವಿನಹಳ್ಳಿ ಸ್ವಾಗತಿಸಿದರು, ವಿಜಯಕುಮಾರ ಕರೆಕಲ್ ವಂದಿಸಿದರು.

ನಂತರ ಶಾಲಾ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮ ನೋಡುಗರನ್ನು ಆಕರ್ಷಿಸಿತು.

## ಎಪಿಎಂಸಿ ಕಾರ್ಯದರ್ಶಿ ಭೇಟಿ ಮಾಡಿದ ಬಿಡಿಸಿಸಿಐ ಯಶವಂತರಾಜ್ ನಾಗಿರೆಡ್ಡಿ ನೇತೃತ್ವದ ನಿಯೋಗ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.22:ಬಳ್ಳಾರಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಒಣ ಮೆಣಸಿನಕಾಯಿ ಮಾರುಕಟ್ಟೆಯನ್ನು ತ್ವರಿತವಾಗಿ ಪ್ರಾರಂಭಿಸಲು ಕೋರಿ ಎಪಿಎಂಸಿ ನಿರ್ದೇಶಕರಾದ ಶಿವಾನಂದ ಕಪಾಸಿ ಅವರನ್ನು ಹುಬ್ಬಳ್ಳಿಯಲ್ಲಿ ಭೇಟಿ ಮಾಡಿದ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ ಅವರ ನೇತೃತ್ವದಲ್ಲಿ ನಿಯೋಗ ಮನವಿ ಮಾಡಿದೆ.

ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅವರು, ಬಳ್ಳಾರಿಗೆ ಭೇಟಿ ನೀಡಿದಾಗ ಬಳ್ಳಾರಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಒಣ ಮೆಣಸಿನಕಾಯಿ ಮಾರುಕಟ್ಟೆಯನ್ನು ತ್ವರಿತವಾಗಿ ಪ್ರಾರಂಭಿಸಲು ಐದು ಕೋಟಿ ರೂಪಾಯಿ ಅನುದಾನ ನೀಡಲಾಗುತ್ತದೆ ಎಂದು ಘೋಷಣೆ ಮಾಡಿದ್ದನ್ನು ನೆನಪಿಸಿದ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಮತ್ತು ಜಂಟಿ ಕಾರ್ಯದರ್ಶಿ ವಿ. ರಾಮಚಂದ್ರ ಅವರು ಈ ಮನವಿ ಸಲ್ಲಿಸಿದ್ದಾರೆ.

ಬಳ್ಳಾರಿ ಎಪಿಎಂಸಿ ಮಾರುಕಟ್ಟೆಯ ಸ್ಥಳಾಂತರ ಮತ್ತು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸೇವಾ ಕಾರ್ಯಗಳಿಗೆ ಸೂಕ್ತ ನಿವೇಶನ ನೀಡಲು ಕೋರಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.